ಬೆಂಗಳೂರು ಸಂಪುಟ: 16 ಸಂಚಿಕೆ: 52 ಪುಟ: 06 ಶುಕ್ರವಾರ 17-01-2025 ₹ 3 Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh



‘ವಿದಾಮುಯಾರ್ಚಿ’ ಟ್ರೇಲರ್ ರಿಲೀಸ್

ಪ್ರತಿಯೊಬ್ಬ ಹೀರೋನೂ ಕೊನೆಯಲ್ಲಿ ಬೋರ್ ಆಗ್ತಾನೆ

ಸೀರೆಯಲ್ಲಿ ‘ಅಪ್ಸರೆ ’ ಸಂಗೀತ ↘ ಪುಟ 6

# ಹಾಡಹಗಲೇ ಬ್ಯಾಂಕ್ ಲೂಟಿ

## ಮಂಗಳೂರಿನಲ್ಲಿ ಬಂದೂಕು ತೋರಿಸಿ ಬ್ಯಾಂಕ್ ದರೋಡೆ ಮಾಡಿದ ಮುಸುಕುಧಾರಿಗಳು

**ಮಂಗಳೂರು:** ಎಟಿಎಂ ದರೋಡೆ ನಡೆದು ಇಪ್ಪತ್ನಾಲ್ಕು ಗಂಟೆ ಕಳೆಯುವ ಮುನ್ನವೇ ರಾಬರಿಕೋರರು ಮತ್ತೊಂದು ದೊಡ್ಡ ಮಟ್ಟದ ದರೋಡೆ ನಡೆಸಿದ್ದಾರೆ.

ನಿನ್ನೆ ಬೀದರ್‌ನಲ್ಲಿ ಎಟಿಎಂಗೆ ತುಂಬಲು ತಂದ 90ಲಕ್ಷೂ ಹೆಚ್ಚು ಹಣವನ್ನು ದೋಚಿ ಪರಾರಿಯಾಗಿದ್ದ ಸುದ್ದಿ ಚರ್ಚೆಯಲ್ಲಿರುವಾಗಲೇ ಇಂದು ಮುಸುಕುಧಾರಿಗಳ ಗುಂಪೊಂದು ಬ್ಯಾಂಕ್ ಅನ್ನೇ ದರೋಡೆ ಮಾಡಿದೆ.

ಐವರು ಮುಸುಕುಧಾರಿಗಳು ಬಂದೂಕಿನಿಂದ ಬ್ಯಾಂಕ್ ಸಿಬ್ಬಂದಿ, ಅಧಿಕಾರಿಗಳನ್ನು ಬೆದರಿಸಿ ಚಿನ್ನಾಭರಣ, ನಗದು ದೋಚಿ ಪರಾರಿಯಾಗಿರುವ ಘಟನೆ ಉಳ್ಳಾಲ ತಾಲೂಕಿನ ಕೆಸಿ ರೋಡ್‌ನ ಕೋಟೆಕಾರು ಬ್ಯಾಂಕ್‌ನಲ್ಲಿ ನಡೆದಿದೆ.

ಇಂದು ಬೆಳಿಗ್ಗೆ ಮುಸುಕುಧಾರಿಗಳ ತಂಡ ಬ್ಯಾಂಕ್‌ಗೆ ನುಗ್ಗಿ ಸಿಬ್ಬಂದಿಗಳನ್ನು ಬೆದರಿಸಿ ಸುಮಾರು 10 ಕೋಟಿಗೂ ಹೆಚ್ಚು ಹಣ-ಚಿನ್ನಾಭರಣಗಳನ್ನು ದೋಚಿ ಪರಾರಿಯಾಗಿದ್ದಾರೆ. ದಕಾರಿನಲ್ಲಿ ಬಂದ ದರೋಡೆಕೋರರು ಏಕಾಏಕಿ ಬಂದೂಕು ಹಿಡಿದು ಬ್ಯಾಂಕ್ ಪ್ರವೇಶ ಮಾಡಿದ್ದಾರೆ. ಮೊದಲಿಗೆ ಇಬ್ಬರು ಬಂದೂಕುಗಳನ್ನು



ಹಿಡಿದು ಒಬ್ಬ ಮ್ಯಾನೇಜರ್‌ಗೆ ಬಂದೂಕು ತೋರಿಸಿದರೆ, ಮತ್ತೊಬ್ಬ ಸಿಬ್ಬಂದಿಗಳನ್ನು ನಿಯಂತ್ರಿಸಿದ್ದಾನೆ ಪುಟ 2

## ಹಿರಿಯ ಪೊಲೀಸ್ ಅಧಿಕಾರಿಗಳ ಜೊತೆ ಸಿಎಂ ತುರ್ತು ಸಭೆ

## ತಪ್ಪಿಸಿಕೊಂಡ ಆರೋಪಿಗಳು: ಸಿಎಂ ಗರಂ



**ಮಂಗಳೂರು:** ಕೋಟೆಕರ್ ಉಲ್ಲಾಳದ ಸಹಕಾರಿ ಬ್ಯಾಂಕ್ ದರೋಡೆ ಪ್ರಕರಣದ ಹಿನ್ನೆಲೆಯಲ್ಲಿ ಮಂಗಳೂರಿನಲ್ಲಿ ಹಿರಿಯ ಪೊಲೀಸ್ ಅಧಿಕಾರಿಗಳ ಜೊತೆ ತುರ್ತು ಸಭೆ ನಡೆಸಿದ ಮುಖ್ಯಮಂತ್ರಿಗಳು ಶೀಘ್ರ ಆರೋಪಿಗಳ ಪತ್ತೆಗೆ ಖಡಕ್ ಸೂಚನೆ ನೀಡಿದರು.

ವೈದ್ಯಕೀಯ ಶಿಕ್ಷಣ ಇಲಾಖೆಯ ಕಾರ್ಯಕ್ರಮ ಮುಗಿಯುತ್ತಿದ್ದಂತೆ ಪಶ್ಚಿಮ ರೇಂಜ್‌ನ ಐಜಿ ಅಮಿತ್, ಪೊಲೀಸ್ ಆಯುಕ್ತ ಸಿಂಗ್, ಅನುಪಮ್ ಅಗರವಾಲ್, ಎಸ್.ಪಿ ಯತೀಶ್ , ಡಿವೈಎಸ್ ಪಿ ಸೇರಿ ಹಿರಿಯ ಅಧಿಕಾರಿಗಳ ಜೊತೆ ಸಭೆ ನಡೆಸಿದರು. ಘಟನೆಯ ಕುರಿತಂತೆ ಸಮಗ್ರ ಮಾಹಿತಿ ಪಡೆದ ಮುಖ್ಯಮಂತ್ರಿಗಳು, ನೀವೆಲ್ಲಾ ಇದ್ದು ಯಾಕೆ ಹೀಗಾಯ್ತು? ಆರೋಪಿಗಳು ಸಲೀಸಾಗಿ ತಪ್ಪಿಸಿಕೊಂಡು ಹೋಗಿದ್ದು ಹೇಗೆ ? ಎಷ್ಟು ಟೋಲ್ ಗಳನ್ನು ದಾಟಿ ಹೋಗಿದ್ದಾರೆ. ನೀವು ಟೋಲ್‌ಗಳನ್ನು ಪುಟ 2



ಬೆಂಗಳೂರಿನಲ್ಲಿ ಶುಕ್ರವಾರ ನಡೆದ ಅಮೆರಿಕ ಕಾನ್ಸುಲೇಟ್ (ರಾಜತಾಂತ್ರಿಕ ಕಚೇರಿ) ಉದ್ಘಾಟನೆ ಸಮಾರಂಭದಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್, ಅಮೆರಿಕದ ರಾಯಭಾರಿ ಎರಿಕ್ ಗಾರ್ಸೆಟ್ಟಿ ಹಾಗೂ ಕೇಂದ್ರ ವಿದೇಶಾಂಗ ಸಚಿವ ಜೈ ಶಂಕರ್ ಪಾಲ್ಗೊಂಡರು.

# ನುಡಿದಂತೆ ನಡೆದ ಸಿಎಂ ಸಿದ್ದರಾಮಯ್ಯ

**ಮಂಗಳೂರು:** ಮುಖ್ಯಮಂತ್ರಿ ಸಿದ್ದ ರಾಮಯ್ಯ ಅವರು ಕಳೆದ ಬಜೆಟ್‌ನಲ್ಲಿ ಘೋಷಿಸಿದ್ದಂತೆ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿವಿಯ ಪ್ರಾದೇಶಿಕ ಕಚೇರಿಗೆ ಇಂದು ಶಂಕು ಸ್ಥಾಪನೆ ನೆರವೇರಿಸಿ ಮತ್ತೊಮ್ಮೆ ನುಡಿದಂತೆ ನಡೆದ ಮುಖ್ಯಮಂತ್ರಿ ಎನ್ನುವ ಹೆಗ್ಗಳಿಕೆಯನ್ನು ಮುಂದುವರೆಸಿದ್ದಾರೆ.

ಶಂಕುಸ್ಥಾಪನೆ ನೆರವೇರಿಸಿದ ಬಳಿಕ ಮಾತನಾಡಿದ ಮುಖ್ಯಮಂತ್ರಿಗಳು, ರಾಜೀವ್ ಗಾಂಧಿ ವಿವಿ, ಏಷ್ಯಾದ ಅತ್ಯಂತ ದೊಡ್ಡ ಆರೋಗ್ಯ ವಿಶ್ವ ವಿದ್ಯಾಲಯ ಆಗಿದೆ. 3.5 ಲಕ್ಷ ವೈದ್ಯ ವಿದ್ಯಾರ್ಥಿಗಳಿರುವ ಅತ್ಯಂತ ದೊಡ್ಡ ಆರೋಗ್ಯ ವಿವಿ ಇದಾಗಿದೆ. ಆದ್ದರಿಂದ ಗುಣಮಟ್ಟದ ವೈದ್ಯರನ್ನು ರೂಪಿಸುವುದರ ಜೊತೆಗೆ ಗುಣಮಟ್ಟದ ಆರೋಗ್ಯ ಸೇವೆ ಒದಗಿಸುವಲ್ಲಿ ರಾಜೀವ್ ಗಾಂಧಿ ವಿವಿಯ ಕೊಡುಗೆ ಅಪಾರವಾಗಿದೆ ಎಂದರು.

ಸರ್ಕಾರಿ ಆಸ್ಪತ್ರೆಗಳೂ ಖಾಸಗಿ ಆಸ್ಪತ್ರೆಗಳ ಮಾದರಿಯಲ್ಲಿ ಶುಚಿತ್ವ ಮತ್ತು ನಿರ್ವಹಣೆ ಕಾಪಾಡುವ ಜೊತೆಗೆ ಗುಣಮಟ್ಟದ ಚಿಕಿತ್ಸಾ ಸೌಲಭ್ಯ ಸಿಗುವಂತಾಗಬೇಕು. ಪುಟ 2



## ಸೈಫ್‌ಗೆ ಚೂರಿ ಇರಿತ ಪ್ರಕರಣ: ಆರೋಪಿ ಬಂಧನ

**ಮುಂಬೈ:** ಬಾಲಿವುಡ್ ನಟ ಸೈಫ್ ಅಲಿ ಖಾನ್‌ಗೆ ಚೂರಿ ಇರಿತ ಪ್ರಕರಕ್ಕೆ ಸಂಬಂಧಿಸಿದಂತೆ ಆರೋಪಿಯನ್ನು ಮುಂಬೈ ಪೊಲೀಸರು ಶುಕ್ರವಾರ ಬಂಧನಕ್ಕೊಳಪಡಿಸಿದ್ದಾರೆ.

ಘಟನೆ ನಡೆದ ಸುಮಾರು 30 ಗಂಟೆಗಳ ಬಳಿಕ ಆರೋಪಿಯನ್ನು ಮುಂಬೈ ಪೊಲೀಸರು ಬಂಧಿಸಿದ್ದು, ಆತನನ್ನು ತೀವ್ರ ವಿಚಾರಣೆಗೊಳಪಡಿಸಿದ್ದಾರೆ.

ಆರೋಪಿಯನ್ನು ಬಾಂದ್ರಾ ಪೊಲೀಸರು ಆರೋಪಿಯನ್ನು ಠಾಣೆಗೆ ಕರೆ ತಂದಿದ್ದು, ಅಲ್ಲಿ ವಿಚಾರಣೆ ನಡೆಸಲಾಗುತ್ತಿದೆ. ದಾಳಿ ಮಾಡಿದರ ಹಿಂದಿನ ಉದ್ದೇಶವೇನು? ಸೈಫ್ ಮನೆ ತಲುಪಿದ್ದು ಹೇಗೆ? ಈ ದಾಳಿ ಹಿಂದೆ ಬೇರೆ ಯಾರದ್ದಾದರೂ ಪುಟ 2

## ರವಿ ಪ್ರಕರಣ: ಫೋರೆನ್ಸಿಕ್ ಪರೀಕ್ಷೆಯಲ್ಲಿ ದೃಢ

**ಬೆಂಗಳೂರು:** ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧ ವಿಧಾನ ಪರಿಷತ್ ಸದಸ್ಯ ಸಿಟಿ ರವಿ ಅವಾಚ್ಯ ಶಬ್ದ ಬಳಸಿರುವುದು ಫೋರೆನ್ಸಿಕ್ ಪರೀಕ್ಷೆಯಲ್ಲಿ ದೃಢವಾಗಿದೆ. ನಾಲ್ಕು ಗಂಟೆಯ ವಿಡಿಯೋ ರೆಕಾರ್ಡ್‌ನಲ್ಲಿ ಒಟ್ಟು ಏಳು ಬಾರಿ ಅವಾಚ್ಯ ಶಬ್ದ ಬಳಕೆ ಮಾಡಲಾಗಿದೆ ಎಂದು ಪೊಲೀಸ್ ಮೂಲಗಳಿಂದ ತಿಳಿದುಬಂದಿದೆ, ಅವಾಚ್ಯ ಶಬ್ದ ಬಳಸಿದ ಧ್ವನಿ ಪತ್ತೆಗೆ ಸಿಟಿ ರವಿ ವಾಯ್ಸ್ ಸ್ಯಾಂಪಲ್ ಪಡೆಯಲು ಸಿಐಡಿ ಮುಂದಾಗಿದೆ. ಆದರೆ ತಾನು ಅವಾಚ್ಯ ಶಬ್ದ ಬಳಸಿಲ್ಲ ಎಂದು ಸಿಟಿ ರವಿ ಹೇಳುತ್ತಿದ್ದಾರೆ. ಪುಟ 2

# ರಾಜ್ಯದಲ್ಲಿ ಹದಗೆಟ್ಟ ಕಾನೂನು-ಸುವ್ಯವಸ್ಥೆ

**ಮೈಸೂರು:** ಅಲ್ಪಸಂಖ್ಯಾತ ದೇಶದ್ರೋಹಿಗಳನ್ನು ಮಟ್ಟ ಹಾಕುವ ಕೆಲಸ ನಡೆಯುತ್ತಿಲ್ಲ; ಹಾಗಾಗಿ ರಾಜ್ಯದಲ್ಲಿ ಯಾರು ಏನು ಬೇಕಾದರೂ ಮಾಡಬಹುದು ಎಂಬಂತಾಗಿದೆ. ರಾಜ್ಯದ ಕಾನೂನು-ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟು ಹೋಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ಆಕ್ಷೇಪಿಸಿದ್ದಾರೆ.

ಇಲ್ಲಿ ಇಂದು ಮಾಧ್ಯಮಗಳ ಜೊತೆ ಮಾತನಾಡಿದ ಅವರು ಪ್ರಶ್ನೆಗೆ ಉತ್ತರ ನೀಡಿದರು. ಸರಕಾರದ ಅಲ್ಪಸಂಖ್ಯಾತರ ತುಷ್ಟೀಕರಣದ ನೀತಿಯಿಂದ ಇಂಥ ಘಟನೆಗಳು ನಡೆಯುತ್ತಿವೆ ಎಂದು ದೂರಿದರು. ಗುಲ್ಬರ್ಗದಲ್ಲಿ ಬಾಲಕಿ ಮೇಲೆ ಅತ್ಯಾಚಾರ ನಡೆದಿದೆ. ಚಾಮರಾಜಪೇಟೆಯಲ್ಲಿ ಹಸುಗಳ ಕೆಚ್ಚಲನ್ನು ಕಡಿದು ಹಾಕಿದ್ದಾರೆ. ಬೀದರ್‌ನಲ್ಲೂ ಎಟಿಎಂ ದರೋಡೆ ನಡೆದಿದೆ ಎಂದು ಟೀಕಿಸಿದರು.

ರಾಜ್ಯದ ಕಾಂಗ್ರೆಸ್ ಸರಕಾರವು ಈ ಬಗ್ಗೆ



ಗಂಭೀರವಾಗಿ ಪರಿಗಣಿಸುತ್ತಿಲ್ಲ. ಮತ್ತೊಂದೆಡೆ ಭ್ರಷ್ಟಾಚಾರವೂ ತೀವ್ರವಾಗಿದೆ. ಗುಲ್ಬರ್ಗದಲ್ಲಿ ಗುತ್ತಿಗೆದಾರನ ಆತ್ಮಹತ್ಯೆ ನಡೆದಿದೆ. ಬಳಿಕ ಪೊಲೀಸ್ ಗೂಂಡಾಗರ್ದಿ ನಡೆದಿದೆ. ದೂರು ನೀಡಲು ಹೋದ ಗುತ್ತಿಗೆದಾರನ ಸಹೋದರಿಯರಜೊತೆ ಯಾವ ರೀತಿ ನಡೆದುಕೊಂಡಿದ್ದಾರೆ ಎಂಬುದು ತಿಳಿದೇಇದೆ. ಬಿಜೆಪಿ ಹೋರಾಟ ಮಾಡಿದ್ದರಿಂದ ಕಾಂಗ್ರೆಸ್ ಪುಡಾರಿಯನ್ನು ಬಂಧಿಸಿ ರಾಜಾತಿಥ್ಯ ಕೊಡುತ್ತಿದ್ದಾರೆ ಎಂದು ಆರೋಪಿಸಿದರು.

ಸಿದ್ದರಾಮಯ್ಯನವರ ಸರಕಾರವು ಅಭಿವೃದ್ಧಿ ಬಗ್ಗೆ ಚಕಾರವನ್ನೂ ಎತ್ತುತ್ತಿಲ್ಲ; ಹಿಂದೆ ಯಡಿಯೂರಪ್ಪ ಅವರು ಮುಖ್ಯಮಂತ್ರಿ ಆಗಿದ್ದಾಗ ಮೈಸೂರು ಜಿಲ್ಲೆಗೆ ಆದ್ಯತೆ ಕೊಟ್ಟಿದ್ದರು. ಸರ್ವತೋಮುಖ ಅಭಿವೃದ್ಧಿಗೆ ಸಾವಿರಾರು ಕೋಟಿ ಅನುದಾನ ಕೊಟ್ಟಿದ್ದರು ಎಂದು ಗಮನ ಸೆಳೆದರು. ಸಿದ್ದರಾಮಯ್ಯನವರು ಈ ಜಿಲ್ಲೆಗೆ ಎಷ್ಟು ಕೋಟಿ ಕೊಟ್ಟಿದ್ದಾರೆ ಎಂದು ಕೇಳಿದರು.

**ಸಿದ್ದರಾಮಯ್ಯನವರು ಅವಧಿ ಪೂರ್ಣಗೊಳಿಸಲು ಸಾಧ್ಯವಿಲ್ಲ:** ಸಿದ್ದರಾಮಯ್ಯನವರು ಯಾವುದೇ ಕಾರಣಕ್ಕೂ ಅವರ ಅವಧಿಯನ್ನು ಪೂರ್ಣಗೊಳಿಸಲು ಸಾಧ್ಯವಿಲ್ಲ; ಕಾಂಗ್ರೆಸ್ಸಿನಲ್ಲಿ ಯುದ್ಧ ಪ್ರಾರಂಭವಾಗಿ 15 ದಿನಗಳಾಗಿವೆ. ಯಾರ್ಯಾರು ಬಡಿಗೆ, ಪುಟ 2

## ಇಸ್ರೋ ಸ್ಪೇಡೆಕ್ಸ್ ಯೋಜನೆ ಯಶಸ್ವಿ: ಸ್ವಾಮೀಜಿ ಅಭಿನಂದನೆ



**ಬೆಂಗಳೂರು:** ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ (ಇಸ್ರೋ) ಮಹತ್ವಾಕಾಂಕ್ಷಿ ಸ್ಪೆಡೆಕ್ಸ್ ಯೋಜನೆಯ ಯಶಸ್ವಿಯಾದ ಹಿನ್ನೆಲೆಯಲ್ಲಿ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧಿಪತಿ ಡಾ. ನಿರ್ಮಲಾನಂದನಾಥ ಸ್ವಾಮೀಜಿ ಅವರು ಅಭಿನಂದನೆ ಸಲ್ಲಿಸಿದ್ದಾರೆ.

ಈ ಕುರಿತು ಮಾಧ್ಯಮ ಪ್ರಕಟಣೆ ಮೂಲಕ ಇಸ್ರೋ ಕಾರ್ಯವನ್ನು ಶ್ಲಾಘಿಸಿರುವ ಡಾ. ನಿರ್ಮಲಾನಂದನಾಥ ಸ್ವಾಮೀಜಿ ಅವರು, “ಸ್ಪೆಡೆಕ್ಸ್ ಯೋಜನೆ ಬಾಹ್ಯಾಕಾಶ ಡಾಕಿಂಗ್ ಸಾಮರ್ಥ್ಯವನ್ನು ಯಶಸ್ವಿಯಾಗಿ ಪ್ರದರ್ಶಿಸಿದೆ. ಇದಕ್ಕಾಗಿ ಅವಿಚಿರತವಾಗಿ ಶ್ರಮಿಸಿದ ಇಸ್ರೋದ ನಿಕಟ ಪೂರ್ವ ಅಧ್ಯಕ್ಷ ಎಸ್ ಸೋಮನಾಥ್, ಪ್ರಸ್ತುತ ಇಸ್ರೋ ಮುಖ್ಯಸ್ಥ ಎಸ್ ನಾರಾಯಣನ್, ಪುಟ 2

# ಪಕ್ಷದಲ್ಲಿ ಆಂತರಿಕ ಕಲಹವಿಲ್ಲ

**ಬೆಳಗಾವಿ:** ರಾಜ್ಯ ಕಾಂಗ್ರೆಸ್‌ನಲ್ಲಿ ಯಾವುದೇ ಗೊಂದಲವಿಲ್ಲ. ಎಲ್ಲವೂ ಸರಿ ಇದೆ. ಅಧ್ಯಕ್ಷರ ಬದಲಾವಣೆ, ಸಚಿವರಿಗೆ ನೋಟಿಸ್‌ಇವುಗಳೆಲ್ಲವೂ ಪ್ರತಿಪಕ್ಷಗಳ ಸೃಷ್ಟಿ ಹಾಗೂ ಊಹಾಪೋಹಾ ಎಂದು ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಅವರು ಸ್ಪಷ್ಟಪಡಿಸಿದ್ದಾರೆ.

ಕಾಂಗ್ರೆಸ್ ನೋಟಿಸ್ ನೀಡಿದೆ ಎಂಬ ವದಂತಿಗಳನ್ನೆಲ್ಲ ಯಾರೂ ಹಬ್ಬಿಸುತ್ತಿದ್ದಾರೆ ನನಗೆ ಗೊತ್ತಿಲ್ಲ. ಯಾವ ಸಚಿವರಿಗೂ, ಯಾವ ವ್ಯಕ್ತಿಗೂ ನೋಟಿಸ್ ನೀಡಲು ಯಾವುದೇ ಕಾರಣವಿಲ್ಲ. ಬಿಜೆಪಿ ಪ್ರಾಯೋಜಿತ ಆಧಾರ ರಹಿತ ಮಾತುಗಳ ಮೇಲೆ ವಿಶ್ವಾಸ ಇಡಬೇಡಿ ಎಂದು ಸುರ್ಜೇವಾಲ ಅವರು ಹೇಳಿ ದ್ದಾರೆ.

ಬೆಳಗಾವಿ ಸಾಂಬ್ರಾ ವಿಮಾನನಿಲ್ದಾಣದಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಸಚಿವ ಸತೀಶ್ ಜಾರಕಿಹೊಳಿಗೆ



ಪಕ್ಷದಿಂದ ಯಾವುದೇ ನೋಟಿಸ್ ನೀಡಿಲ್ಲ. ಅವರಲ್ಲದೇ ಬೇರೆ ಯಾವ ಸಚಿವರಿಗೂ ನೀಡಿಲ್ಲ, ನೀಡಲು ಕಾರಣವೂ ಇಲ್ಲ. ಇದೆಲ್ಲ ಬರೀ ವದಂತಿ. ಇಂತಹ ವದಂತಿಗಳಿಗೆ ಕಿವಿಗೊಡಬೇಡಿ ಎಂದು ಸುರ್ಜೇವಾಲ ಸ್ಪಷ್ಟಪಡಿಸಿದರು.

ಕೆಪಿಸಿಸಿ ಅಧ್ಯಕ್ಷ ಸ್ಥಾನ ಸಂಬಂಧ ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಬದಲಾವಣೆ ಚರ್ಚೆ ಸದ್ಯಕ್ಕಿಲ್ಲ. ಅಧ್ಯಕ್ಷರ ಬದಲಾವಣೆ ಆಗುತ್ತಿದ್ದರೆ, ಡಿಕೆಶಿವಕುಮಾರ್ ಅವರು ಯಾಕೆ ಇಲ್ಲಿಗೆ ಬರುತ್ತಾರೆ? ಅವರಿಗೆ ಅಸಮಾಧಾನವಿದ್ದರೆ ಒಟ್ಟಾಗಿ ಇರುವ ಹೇಗೆ ಸಾಧ್ಯ? ಎಂದು ಮರುಪ್ರಶ್ನಿಸುವ ಮೂಲಕ ತೆರೆ ಎಳೆದರು.

ಡಿ.ಕೆ.ಶಿವಕುಮಾರ ಅವರು ಬೆಳಗಾವಿಗೆ ಬಂದು ಸಭೆ ನಡೆಸಲಿದ್ದಾರೆ. ಅವರು ನಿಮಗೆ ಉತ್ತರ ನೀಡಲಿದ್ದಾರೆ. ಬೆಳಗಾವಿಯ ಸಮಾವೇಶ ಐತಿಹಾಸಿಕವಾಗಲಿದೆ ಎಂದು ಸುರ್ಜೇವಾಲ ವಿಶ್ವಾಸ ವ್ಯಕ್ತಪಡಿಸಿದರು.

100 ವರ್ಷಗಳ ಮೊದಲು ಮಹಾತ್ಮ ಗಾಂಧಿ ಬೆಳಗಾವಿಯಲ್ಲಿ ಕಾಂಗ್ರೆಸ್ ಅಧ್ಯಕ್ಷರಾದಾಗ ಆಂಗ್ಲರ ವಿರುದ್ಧ ಸ್ವಾತಂತ್ರ್ಯ ಸಿಕ್ಕಿತ್ತು. ಈಗ 100 ವರ್ಷಗಳ ಮೇಲೆ ಭೇದಭಾವ, ಸಂವಿಧಾನ ಮೇಲಿನ ದಾಳಿಯ ವಿರುದ್ಧ ಹೊಸ ಕ್ರಾಂತಿಗೆ ಬೆಳಗಾವಿಯಲ್ಲಿ ನಡೆಯಲಿರುವ ಗಾಂಧಿ ಭಾರತ ಕಾರ್ಯಕ್ರಮ ಸೂತ್ರವಾಗಲಿದೆ ಎಂದು ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ತಿಳಿಸಿದರು.

ಬೆಳಗಾವಿಯ ಐತಿಹಾಸಿಕ ಭೂಮಿಯ ಜೊತೆ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ಸಂಬಂಧ ದಶಕಗಳಿಂದ ಇದೆ. ಈಗ ಮತ್ತೊಮ್ಮೆ ಜನವರಿ 21ರಂದು ಜೈ ಬಾಪು, ಜೈ ಭೀಮ, ಜೈ ಸಂವಿಧಾನ ರ್‍ಯಾಲಿ ಆಯೋಜನೆ ಮಾಡಿದ್ದೇವೆ. ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ, ಪ್ರಿಯಾಂಕಾ ಗಾಂಧಿ ಸೇರಿ ದೇಶದ ಎಲ್ಲಾ ಕಾಂಗ್ರೆಸ್ ನಾಯಕರು ಭಾಗಿಯಾಗಲಿದ್ದಾರೆ ಎಂದರು. ಪುಟ 2



ಬೆಳಗಾವಿಯಲ್ಲಿ ಇದೇ 21 ರಂದು ನಡೆಯಲಿರುವ "ಜೈ ಬಾಪು, ಜೈ ಭೀಮ್, ಜೈ ಸಂವಿಧಾನ" ಸಮಾವೇಶ ಕುರಿತು ಬೆಳಗಾವಿಯ ಕಾಂಗ್ರೆಸ್ ಕಚೇರಿಯಲ್ಲಿ ಶುಕ್ರವಾರ ನಡೆದ ಪೂರ್ವಭಾವಿ ಸಿದ್ಧತೆ ಸಭೆಯಲ್ಲಿ ರಣದೀಪ್ ಸಿಂಗ್ ಸುರ್ಜೇವಾಲಾ, ಸಚಿವ ಸತೀಶ್ ಜಾರಕಿಹೊಳಿ, ಕೆಪಿಸಿಸಿ ಕಾರ್ಯಾಧ್ಯಕ್ಷ ಜಿ ಸಿ ಚಂದ್ರಶೇಖರ್ ಮತ್ತಿತರರು ಭಾಗವಹಿಸಿದ್ದರು. ನಂತರ ಸಮಾವೇಶ ನಡೆಯುವ ಸ್ಥಳವನ್ನು ಈ ಮುಖಂಡರು ಪರಿಶೀಲಿಸಿದರು.

ಮೊದಲ ಪುಟದಿಂದ

## ಹಾಡಹಗಲೇ ಬ್ಯಾಂಕ್ ಲೂಟಿ

ಈ ನಡುವೆ ಉಳಿದ ದರೋಡೆಕೋರರು ಕ್ಯಾಶಿಯರ್‌ನ್ನು ಹೆದರಿಸಿ ಹಣವನ್ನು ಚೀಲಕ್ಕೆ ತುಂಬಿದರೆ, ಮತ್ತೊಬ್ಬ ದರೋಡೆಕೋರ ಲಾಕರ್‌ನ ಬೀಗವನ್ನು ಬಲವಂತವಾಗಿ ತೆಗೆಸಿ ಅದರಲ್ಲಿದ್ದ ಚಿನ್ನಾಭರಣವನ್ನು ತುಂಬಿದ್ದಾನೆ. ಎಲ್ಲರೂ ಒಟ್ಟಾಗಿ ಬ್ಯಾಂಕ್‌ಅನ್ನು ಸಂಪೂರ್ಣವಾಗಿ ಲೂಟಿ ಮಾಡಿ, ತಾವು ಬಂದಿದ್ದ ಕಾರಿನಲ್ಲೇ ಪರಾರಿಯಾಗಿದ್ದಾರೆ.

ಭದ್ರತೆಗಾಗಿ ನಿಯೋಜಿಸಲಾಗಿದ್ದ ಬ್ಯಾಂಕ್‌ನ ಸಿಬ್ಬಂದಿಕೂಡ ತಬ್ಬಿಬ್ಬಾಗಿ ಏನು ತೋಚದೇ ನಿಂತಿದ್ದಾನೆ. ಅವನ ಬಳಿಯಿದ್ದ ಅಸ್ತ್ರವನ್ನು ಕಸಿದು ಸಂಪೂರ್ಣ ಸಿಬ್ಬಂದಿಗಳನ್ನು ನಿರಸ್ತ್ರಧಾರಿಗಳನ್ನಾಗಿ ದರೋಡೆಕೋರರು ಮಾಡಿದ್ದರು. ಬ್ಯಾಂಕ್‌ನಲ್ಲಿ ಎಷ್ಟು ಹಣ ಮತ್ತು ಚಿನ್ನವಿತ್ತು ಎಂಬ ಬಗ್ಗೆ ಇನ್ನೂ ಸ್ಪಷ್ಟ ಮಾಹಿತಿ ಲಭ್ಯವಾಗಿಲ್ಲ. ಮಧ್ಯಾಹ್ನದ ವೇಳೆಗೆ ಬಂದಂತಹ ವರದಿ ಪ್ರಕಾರ 10 ಕೋಟಿಗೂ ಹೆಚ್ಚು ಹಣ ಮತ್ತು ಚಿನ್ನಾಭರಣ ಲೂಟಿಯಾಗಿರುವ ಮಾಹಿತಿ ದೊರೆತಿದೆ.

ಮಂಗಳೂರಿನಲ್ಲಿ ಸಿಎಂ ಸಿದ್ದರಾಮಯ್ಯ ಕಾರ್ಯಕ್ರಮದ ಕಾರಣ ಹೆಚ್ಚಿನ ಪೊಲೀಸರು ಭದ್ರತೆಗೆ ತೆರಳಿದ್ದರು. ಇದನ್ನೇ ಟಾರ್ಗೆಟ್ ಮಾಡಿಕೊಂಡು ದರೋಡೆಗೆ ಸಂಚು ರೂಪಿಸಿದ್ದ ಶಂಕೆ ವ್ಯಕ್ತವಾಗಿದೆ.

ಘಟನಾ ಸ್ಥಳಕ್ಕೆ ಉಳ್ಳಾಲ ಠಾಣೆ ಪೊಲೀಸರು, ಶ್ವಾನದಳ ಸಿಬ್ಬಂದಿ ಭೇಟಿ, ಪರಿಶೀಲನೆ ನಡೆಸಿದ್ದಾರೆ.

ವಿಧಾನಸಭೆ ಸ್ಪೀಕರ್ ಯುಟಿ ಖಾದರ್ ಬ್ಯಾಂಕ್‌ಗೆ ಭೇಟಿ ನೀಡಿ ಪರಿಶೀಲಿಸಿ ನಂತರ ಮಾತನಾಡಿ ಅವರು, ಬ್ಯಾಂಕ್ ದರೋಡೆ ವಿಚಾರವಾಗಿ ಮಂಗಳೂರಿನಲ್ಲಿ ವಿಧಾನಸಭಾ ಸ್ಪೀಕರ್ ಯುಟಿ ಖಾದರ್ ಪ್ರತಿಕ್ರಿಯಿಸಿದ್ದು, ಕೆಸಿ ರೋಡ್‌ನ ಕೋಟೆಕಾರು ಬ್ಯಾಂಕ್‌ನಲ್ಲಿ ಚಿನ್ನಾಭರಣ, ನಗದು ದರೋಡೆಯಾಗಿದೆ. ತಲ್ವಾರ್, ಗನ್‌ನಿಂದ ಬೆದರಿಸಿ ಬ್ಯಾಂಕ್ ದರೋಡೆ ಮಾಡಿದ ಮಾಹಿತಿ ದೊರೆತಿದೆ. ಜನಸಂದಣಿ ಕಡಿಮೆ ಇರುವ ಸಮಯದಲ್ಲೇ ದರೋಡೆ ನಡೆಸಿದ್ದಾರೆ. ಆರೋಪಿಗಳ ಬಂಧಿಸಲು ವಿಶೇಷ ತಂಡ ರಚನೆ ಮಾಡಲು ಸೂಚನೆ ನೀಡಲಾಗಿದೆ ಎಂದಿದ್ದಾರೆ.

ಜಿಲ್ಲಾಡಳಿತದಿಂದ ಪೊಲೀಸರಿಗೆ ಸಂಪೂರ್ಣ ಸಹಕಾರ ಕೊಡುತ್ತೇವೆ. ಪೊಲೀಸರು ಆದಷ್ಟು ಬೇಗ ಆರೋಪಿಗಳನ್ನು ಬಂಧಿಸುವ ವಿಶ್ವಾಸವಿದೆ ಎಂದು ಖಾದರ್ ಹೇಳಿದ್ದಾರೆ.

## ಆರೋಪಿ ಬಂಧನ

ಕೈವಾಡ ಇದೆಯೇ ಎಂಬುದರ ಬಗ್ಗೆ ವಿಚಾರಣೆ ನಡೆಸುತ್ತಿದ್ದಾರೆ. ಬಂಧಿತ ವ್ಯಕ್ತಿಯ ಬಗ್ಗೆ ಹೆಚ್ಚಿನ ಮಾಹಿತಿ ತಿಳಿದುಬಂದಿಲ್ಲ. ಬಾಂದ್ರಾ ಪೊಲೀಸ್ ಠಾಣೆಗೆ ಶಂಕಿತ ವ್ಯಕ್ತಿಯನ್ನು ಪೊಲೀಸರು ಕರೆತರುತ್ತಿರುವುದು ಕಂಡು ಬಂದಿದ್ದು, ನಟನ ಮನೆಗೆ ನುಗ್ಗಿ ಹಲ್ಲೆ ಪುಟ 2
ನಡೆಸಿದ್ದ ವ್ಯಕ್ತಿ ಈತನೆಯೇ ಎಂಬುದು ಇನ್ನೂ ದೃಢಪಟ್ಟಿಲ್ಲ.
ಈ ವ್ಯಕ್ತಿಯನ್ನು ಪೊಲೀಸರಪು ಬಾಂದ್ರಾ ರೈಲ್ವೇ ನಿಲ್ದಾಣದ ಬಳಿ ಬಂಧಿಸಿದ್ದು, ಘಟನೆ ಬಳಿಕ ತನ್ನ ಗುರ್ತಿಕೆ ಸಿಗಬಾರದು ಎಂದು ಎಂದು ಬಟ್ಟೆಯನ್ನು ಬದಲಿಸಿದ್ದ ಎಂದು ತಿಳಿದುಬಂದಿದೆ.
ಆರೋಪಿ ಪತ್ತೆಗೆ ಪೊಲೀಸರು 20 ತಂಡಗಳನ್ನು ರಚಿಸಿದ್ದು, ತಾಂತ್ರಿಕ ಮಾಹಿತಿಗಳನ್ನು ಬಳಸಿಕೊಂಡಿದ್ದಾರೆ ಎಂದು ವರದಿಗಳು ತಿಳಿಸಿವೆ.
ಸೈಫ್ ಅಲಿ ಖಾನ್ ಜೊತೆ ಹೊಡೆದಾಡುವಾಗ ಅವರಿಗೆ ಗಾಯವಾಗುವಂತೆ ಮಾಡಿ ಪರಾರಿಯಾಗಿದ್ದ ವ್ಯಕ್ತಿಯನ್ನು ಪತ್ತೆ ಹಚ್ಚಲು ಪೊಲೀಸ್ ತಂಡಗಳು ವಸಾಯಿ ಹಾಗೂ ನಲಸೋಪಾರದ ಬಳಿಯೂ ಬೀಡು ಬಿಟ್ಟಿದ್ದವು.
ಆರೋಪಿಯು ದರೋಡೆ ನಡೆಸಲು ಸೈಫ್ ಅಲಿ ಖಾನ್ ರ ಐಷಾರಾಮಿ ಬಂಗಲೆಯನ್ನು ಪ್ರವೇಶಿಸಿದ್ದ ಎಂದು ಪೊಲೀಸರು ತಿಳಿಸಿದ್ದಾರೆ.

## ಯಶಸ್ವಿ: ಸ್ವಾಮೀಜಿ ಅಭಿನಂದನೆ

ಇಸ್ರೋದ ಅಸಾಧಾರಣ ವಿಜ್ಞಾನಿಗಳು ಮತ್ತು ಔದ್ಯಮಿಕ ಪುಟ 2 ಸಹಯೋಗಿಗಳಿಗೆ ಅಭಿನಂದನೆಗಳು. ಈ ಐತಿಹಾಸಿಕ ಸಾಧನೆ, ಬಾಹ್ಯಾಕಾಶದಲ್ಲಿ ಉಪಗ್ರಹಗಳ ಡಾಕಿಂಗ್ ಸಾಮರ್ಥ್ಯ ಗಳಿಸಿರುವ ಕೇವಲ ನಾಲ್ಕನೇ ರಾಷ್ಟ್ರವಾಗಿ ಭಾರತ ಹೊರಹೊಮ್ಮುವಂತೆ ಮಾಡಿದೆ. ಇದು ಇಸ್ರೋ ಹೊಂದಿರುವ ಪ್ರಾವೀಣ್ಯತೆಯನ್ನು ಪ್ರದರ್ಶಿಸಿದ್ದು, ಮುಂದಿನ ತಲೆಮಾರುಗಳಲ್ಲಿ ಬಾಹ್ಯಾಕಾಶ ಅನ್ವೇಷಣೆಯ ಕುರಿತು ಆಸಕ್ತಿ ಮತ್ತು ಸ್ಫೂರ್ತಿ ನೀಡಿದೆ" ಎಂದು ತಿಳಿಸಿದ್ದಾರೆ.

"ಸ್ಪೇಡೆಕ್ಸ್ ಯೋಜನೆ ತನ್ನ ಉಡಾವಣಾ ವಾಹನದ ನಾಲ್ಕನೇ ಹಂತವಾದ ಪೋಯಮ್-4ನಲ್ಲಿ (ಕಔಇಒ-4) ಇಸ್ರೋ, ಶಿಕ್ಷಣ ಸಂಸ್ಥೆಗಳು ಮತ್ತು ಸ್ಟಾರ್ಟಪ್ ಗಳು ನಿರ್ಮಿಸಿದ ಪೇಲೋಡ್ ಗಳನ್ನು ಬಾಹ್ಯಾಕಾಶಕ್ಕೆ ಕೊಂಡೊಯ್ದಿತ್ತು. ಈ ಪೇಲೋಡ್ ಗಳಲ್ಲಿ, ಆದಿಚುಂಚನಗಿರಿ ಮಠದ ಬಿಜಿಎಸ್ ಅರ್ಪಿತ್ ಪೇಲೋಡ್ ಸಹ ಸೇರಿತ್ತು. ಈಗಾಗಲೇ ಬಾಹ್ಯಾಕಾಶ ಸೇರಿರುವ ಈ ಪೇಲೋಡ್, ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದೆ. ಈ ನವೀನ ತಂತ್ರಜ್ಞಾನ ಜಾಗತಿಕ ಅಮೆಚೂರ್ ಕ್ಲಬ್ ಗಳಿಗೆ ಬೆಂಬಲ ಒದಗಿಸಲಿದೆ. ಈ ಯೋಜನೆ ಯಶಸ್ವಿಯಾಗುವಂತೆ ಸಹಕಾರ ನೀಡಿದ ಇಸ್ರೋ ಸಂಸ್ಥೆಗೆ ಆದಿಚುಂಚನಗಿರಿ ಮಠ ಹೃತ್ಪೂರ್ವಕ ಧನ್ಯವಾದಗಳನ್ನು ಸಲ್ಲಿಸುತ್ತದೆ" ಎಂದು ನಿರ್ಮಲಾನಂದನಾಥ ಸ್ವಾಮೀಜಿ ಹೇಳಿದ್ದಾರೆ.

## ಹದಗೆಟ್ಟ ಕಾನೂನು-ಸುವ್ಯವಸ್ಥೆ

ಯಾರ್ಯಾರು ಕುಡುಗೋಲು ತೆಗೆದುಕೊಂಡು ಬರುತ್ತಾರೆ? ಇದು ಗೊತ್ತಾಗಲಿದೆ. ಸಿಎಂ ಸ್ಥಾನದ ಕುರಿತ ಬೀದಿರಂಪವು ಮುಂದುವರೆದಿದೆ. ಸಿದ್ದರಾಮಯ್ಯನವರು ಸಿಎಂ ಸ್ಥಾನದಿಂದ ಇಳಿಯುವುದಿಲ್ಲ ಎಂದರೆ, ಡಿಕೆ ಶಿವಕುಮಾರ್ ತಾವು ಸಿಎಂ ಆಗಬೇಕೆಂದು ಹೋರಾಟ ಮಾಡುತ್ತಿದ್ದಾರೆ. ಇದು ಯಾವ ತಿರುವನ್ನು ಪಡೆಯಲಿದೆ ಎಂದು ಕಾದುನೋಡಿ ಎಂದು ವಿಜಯೇಂದ್ರ ಅವರು ಪ್ರಶ್ನೆಗೆ ಉತ್ತರ ನೀಡಿದರು.

ಯಾವುದೇ ಕ್ಷಣದಲ್ಲಿ ಸಿದ್ದರಾಮಯ್ಯನವರು ತಮ್ಮ ಹುದ್ದೆಗೆ ರಾಜೀನಾಮೆ ನೀಡಬಹುದು ಎಂದು ಅವರು ಪ್ರಶ್ನೆಗೆ ಉತ್ತರ ಕೊಟ್ಟರು. ಡಿ.ಕೆ.ಶಿವಕುಮಾರ್ ಜೊತೆಗೇ 8 ರಿಂದ 10 ಸಚಿವರು ತಾವೂ ಸಿಎಂ ಆಗಬೇಕೆಂದು ಆಕಾಂಕ್ಷಿಗಳಾಗಿ ಸಾಲಿನಲ್ಲಿ ನಿಂತಿದ್ದಾರೆ; ಇದರ ನಡುವೆ ರಾಜ್ಯವು ಅಭಿವೃದ್ಧಿ ಇಲ್ಲದೆ ಬಡವಾಗಿದೆ ಎಂದು ತಿಳಿಸಿದರು. ಕಿಯೋನಿಕ್ಸ್ ಸಂಬಂಧ ಗುತ್ತಿಗೆದಾರರು ದಯಾಮರಣ ನೀಡಿ ಎಂದು ರಾಷ್ಟ್ರಪತಿಗಳಿಗೆ ಪತ್ರ ಬರೆದಿದ್ದಾರೆ ಎಂದು ಗಮನಕ್ಕೆ ತಂದರು.

**ಜಾತಿಗಣತಿ ಎಂಬ ರಾಜಕೀಯ ಅಸ್ತ್ರ**

ಅಭಿವೃದ್ಧಿ ಬಗ್ಗೆ ಚಿಂತನೆಯನ್ನೂ ಮಾಡದ ರಾಜ್ಯ ಸರಕಾರ ಇಲ್ಲಿದೆ. ರೈತರೂ ಈ ಸರಕಾರಕ್ಕೆ ಶಾಪ ಹಾಕುತ್ತಿದ್ದಾರೆ. ಮತ್ತೊಂದು ಕಡೆ ಸಿದ್ದರಾಮಯ್ಯನವರ ಬುದ್ಧಿವಂತಿಕೆ, ಜಾತಿ ಜನಗಣತಿ ಹೆಸರಿನಲ್ಲಿ ಪಗಡೆಯಾಟ ಎಂದೇ ಭಾವಿಸಿದ್ದಾರೆ. ಅದನ್ನು ರಾಜಕೀಯ ಅಸ್ತ್ರವಾಗಿ ಬಳಸುತ್ತಿದ್ದಾರೆ ಎಂದು ಟೀಕಿಸಿದರು.

ಹಿಂದೆ ಅವರ ಸರಕಾರ ಇದ್ದಾಗ 2016ರಲ್ಲೇ ಜಾತಿಗಣತಿ ವರದಿಯನ್ನು ಅವಸರದಿಂದ ತಯಾರಿಸಿದರು. ಸಿದ್ದರಾಮಯ್ಯನವರೇ ಸಿಎಂ ಆಗಿದ್ದರೂ ಯಾಕೆ ಅದನ್ನು ಅನುಷ್ಠಾನ ಮಾಡಿಲ್ಲ ಎಂದು ಅವರು ಕೇಳಿದರು. ಕುರ್ಚಿ ಅಲ್ಲಾಡುವಾಗ ಜಾತಿ ಜನಗಣತಿಯನ್ನು ಮುನ್ನೆಲೆಗೆ ತರುತ್ತಿದ್ದಾರೆ ಎಂದು ಮತ್ತೊಂದು ಪ್ರಶ್ನೆಗೆ ಉತ್ತರ ನೀಡಿದರು. ಇದೊಂದು ಅವೈಜ್ಞಾನಿಕ ವರದಿ; ಒಕ್ಕಲಿಗ, ವೀರಶೈವ ಸಮಾಜ ಸೇರಿ ಬೇರೆಬೇರೆ ಸಮಾಜಗಳೂ ಅದನ್ನು ವಿರೋಧಿಸಿವೆ ಎಂದು ಗಮನ ಸೆಳೆದರು.

ಜಾತಿ ಗಣತಿ ಸಂಬಂಧಿತ ವರದಿಯ ಮಾಹಿತಿಗಳು ಸೋರಿಕೆ ಆಗಿವೆ; ಅದರ ಆಧಾರದಲ್ಲಿ ಹೇಳುವುದಾದರೆ ರಾಜಕೀಯ ಪಿತೂರಿ ಇದರ ಹಿಂದೆ ಇರುವುದು ಗೋಚರವಾಗುತ್ತದೆ ಎಂದು ಆಕ್ಷೇಪಿಸಿದರು.

## ಸಿಎಂ ಗರಂ

ಏಕೆ ಟ್ವಿಟ್ ಮಾಡಲಿಲ್ಲ ಎಂದು ಗರಂ ಆಗಿ ಪ್ರಶ್ನಿಸಿದರು.

ಸಹಕಾರಿ ಬ್ಯಾಂಕ್ ನಲ್ಲಿ ಭದ್ರತಾ ಸಿಬ್ಬಂದಿ ಇರಲಿಲ್ಲ. ಐದಾರು ಮಂದಿ ಮಾತ್ರ ಬ್ಯಾಂಕ್ ಸಿಬ್ಬಂದಿ ಇದ್ದರು. ಆರೋಪಿಗಳು ಕನ್ನಡ ಮತ್ತು ಹಿಂದಿಯಲ್ಲಿ ಮಾತಾಡಿರುವುದು ದಾಖಲಾಗಿದೆ ಎಂದು ಪೊಲೀಸ್ ಅಧಿಕಾರಿಗಳು ಮುಖ್ಯಮಂತ್ರಿಗಳಿಗೆ ಮಾಹಿತಿ ನೀಡಿದರು.

ಎಲ್ಲಾ ಟೋಲ್ ಗಳಲ್ಲೂ ಬಿಗಿ ತಪಾಸಣೆ ನಡೆಸಬೇಕು. ನಾಲ್ಕು ಜಿಲ್ಲೆಗಳ ವ್ಯಾಪ್ತಿಯಲ್ಲಿ ನಾಕಾಬಂಧಿ ಹಾಕಿ ಆದಷ್ಟು ಬೇಗ ಆರೋಪಿಗಳನ್ನು ಬಂಧಿಸಿ ಕಠಿಣ ಕಾನೂನು ಕ್ರಮಕ್ಕೆ ಒಪ್ಪಿಸಿ ಎಂದು ಮುಖ್ಯಮಂತ್ರಿಗಳು ಸೂಚನೆ ನೀಡಿದರು.

# ಅಮೆರಿಕ ದೂತಾವಾಸ ಕಚೇರಿ ಆರಂಭ

**ಬೆಂಗಳೂರು:** ಈಗಾಗಲೇ 12 ದೂತಾವಾಸ ಕಚೇರಿ ಬೆಂಗಳೂರಲ್ಲಿವೆ. ಇನ್ನಷ್ಟು ದೇಶಗಳು ಇಲ್ಲಿ ದೂತವಾಸ ಕಚೇರಿ ತೆರೆಯಬೇಕೆಂದು ನಮ್ಮ ಬಯಕೆ ಇದೆ ಎಂದು ವಿದೇಶಾಂಗ ಸಚಿವ ಜೈಶಂಕರ್ ತಿಳಿಸಿದ್ದಾರೆ. ಅಮೆರಿಕ ಮತ್ತು ಭಾರತದ ಬಾಂಧವ್ಯ ವೃದ್ಧಿಗೆ ನಿರಂತರ ಪ್ರಯತ್ನ ನಡೆಯುತ್ತಿದೆ. ಬೆಂಗಳೂರಿಗೆ ಸಾಕಷ್ಟು ಸಾಮರ್ಥ್ಯ ಇದ್ದು ಅದರ ಬಳಕೆಯಾಗಬೇಕು. ಬೆಂಗಳೂರಿನಲ್ಲಿ 1 ವರ್ಷದಲ್ಲಿ 8.80 ಲಕ್ಷ ಪಾಸ್ ಪೋರ್ಟ್ ವಿತರಣೆಯಾಗಿದೆ. ಅಂದರೆ 10 ವರ್ಷ ಅವಧಿಯಲ್ಲಿ ಎಷ್ಟು ಪಾಸ್ ಪೋರ್ಟ್ ವಿತರಣೆಯಾಗಿರಬಹುದು, ಅದರ ಮಹತ್ವ ಅರಿಯಬೇಕು ಎಂದು ವಿದೇಶಾಂಗ ಸಚಿವ ಜೈಶಂಕರ್ ಹೇಳಿದರು.

ಶೀಘ್ರದಲ್ಲೇ ಅಮೆರಿಕಕ್ಕೆ ಭೇಟಿ ನೀಡಲಿದ್ದೇನೆ. ಅಲ್ಲಿನ ಹೊಸ ಸರ್ಕಾರದ ಜೊತೆ ಬೆಂಗಳೂರಿನ ದೂತಾವಾಸ ಕಚೇರಿಯಲ್ಲಿ ವೀಸಾ ನೀಡುವ ಪ್ರಕ್ರಿಯೆ ಆರಂಭಿಸುವ ಕುರಿತಾಗಿ ಚರ್ಚಿಸಲಿದ್ದೇನೆ. ಶೀಘ್ರದಲ್ಲೇ ಬೆಂಗಳೂರಿನ ದೂತಾವಾಸ ಕಚೇರಿಯಲ್ಲಿ ವೀಸಾ ಸೇವೆ ಆರಂಭವಾಗಲಿದೆ ಎಂದು ಭರವಸೆ ನೀಡಿದರು.

ಹೊರ ದೇಶದಲ್ಲಿ 35 ಲಕ್ಷ ಭಾರತೀಯ ವಿದ್ಯಾರ್ಥಿಗಳು ಅಧ್ಯಯನ ಮಾಡುತ್ತಿದ್ದಾರೆ. 50 ಲಕ್ಷ ಭಾರತೀಯ ಕುಟುಂಬಗಳಿವೆ. ಈ ದೂತವಾಸದಿಂದ ಅವರಿಗೆ ವೀಸಾ ಸೇವೆ ಹೆಚ್ಚಿನ ಅನುಕೂಲವಾಗಲಿದೆ. ಈಗ ಬೆಂಗಳೂನಿಂದ ಸ್ಯಾನ್ ಫ್ರಾನ್ಸಿಸ್ಕೋಗೆ ವಾರದಲ್ಲಿ ಮೂರು ದಿನ ವಿಮಾನ ಸಂಚರಿಸುತ್ತಿದೆ. ಇದರಿಂದ ಅಧ್ಯಯನ, ಶಿಕ್ಷಣ, ತಂತ್ರಜ್ಞಾನ, ರಕ್ಷಣಾ ಕ್ಷೇತ್ರದಲ್ಲಿ ಅಮೆರಿಕಾ-ಬೆಂಗಳೂರಿನ ಸಂಬಂಧ ವೃದ್ಧಿಸಲು ಅನುಕೂಲವಾಗಲಿದೆ ಎಂದರು.

**ಉದ್ಯಮಿಗಳಿಗೆ ಅನುಕೂಲ: ಡಿಕೆ ಶಿವಕುಮಾರ್**

ಅಮೆರಿಕ ಕಾನ್ಸುಲೆಟ್ ಕಚೇರಿ ಸ್ಥಾಪನೆಯಿಂದ ಸಾಕಷ್ಟು ಅನುಕೂಲವಾಗಲಿದೆ. ಐಟಿ-ಬಿಟಿ, ವಿದ್ಯಾರ್ಥಿಗಳಿಗೆ, ಉದ್ಯಮಿಗಳಿಗೆ ಅನುಕೂಲವಾಗಲಿದೆ. ಮುಂಬೈ ಬಳಿಕ ಬೆಂಗಳೂರಿನಲ್ಲಿ ಅಮೆರಿಕ ದೂತವಾಸ ಕಚೇರಿ ಆರಂಭವಾಗಿದೆ ಎಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹೇಳಿದರು.

ಅಮೆರಿಕಾದ ರಾಯಭಾರ ಕಚೇರಿ ಆಗಬೇಕೆಂದು ಎಸ್‌ಎಂ ಕೃಷ್ಣ ಅವರು ಸಿಎಂ ಆಗಿದ್ದಾಲೇ ಪ್ರಯತ್ನ ನಡೆಸಿದ್ದರು. ಅಂದು ಪ್ರಧಾನಿಯಾಗಿದ್ದ ವಾಜಪೇಯಿಯವರನ್ನು ಭೇಟಿ ಮಾಡಲಾಗಿತ್ತು. ಅಲ್ಲಿಂದ ಪ್ರಯತ್ನ ನಡೆದರೂ ಆಗಿರಲಿಲ್ಲ. ಇದೀಗ ಅನುಷ್ಠಾನವಾಗುತ್ತಿದೆ, ಖುಷಿಯ ವಿಚಾರ. ಬೆಂಗಳೂರು ಜಾಗತಿಕವಾಗಿ ಬೆಳೆದಿದೆ. ಯೋಜನಾ ಬದ್ಧವಾದ ನಗರ ಅಲ್ಲದ ಕಾರಣ ಒಂದಷ್ಟು ಸಮಸ್ಯೆ ಇರಬಹುದು, ಅದನ್ನು ಪರಿಹರಿಸಲು ಪ್ರಯತ್ನ ನಡೆಸಲಾಗಿದೆ ಎಂದರು.

ಕೇಂದ್ರ ವಿದೇಶಾಂಗ ಸಚಿವ ಜೈಶಂಕರ್, ಡಿಸಿಎಂ ಡಿಕೆ ಶಿವಕುಮಾರ್, ಸಚಿವ ಎಂಬಿ ಪಾಟೀಲ್, ಸಚಿವ ಪ್ರಿಯಾಂಕ್ ಖರ್ಗೆ, ಸಂಸದ ತೇಜಸ್ವಿ ಸೂರ್ಯ, ಸಂಸದ ಡಾ ಮಂಜುನಾಥ್ ಮತ್ತು ಅಮೆರಿಕಾ ರಾಯಭಾರಿ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

# ಸುಪ್ರೀಂಗೆ ಮೇಲ್ಮನವಿ: ಜ.24ರಂದು ವಿಚಾರಣೆ

**ಬೆಂಗಳೂರು:** ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ನಟ ದರ್ಶನ್ ಸೇರಿ 7 ಆರೋಪಿಗಳಿಗೆ ಮಂಜೂರಾಗಿರುವ ಜಾಮೀನು ರದ್ದು ಕೋರಿ ಸುಪ್ರೀಂಕೋರ್ಟ್‌ಗೆ ಸಲ್ಲಿಕೆಯಾಗಿರುವ ಮೇಲ್ಮನವಿಯ ಅರ್ಜಿಯ ವಿಚಾರಣೆಗೆ ದಿನ ನಿಗದಿಯಾಗಿದೆ.



ನಟ ದರ್ಶನ್‌ಗೆ ಜಾಮೀನು ಪ್ರಶ್ನಿಸಿ ಸಲ್ಲಿಸಿರುವ ಅರ್ಜಿ ವಿಚಾರಣೆ ಜನವರಿ 24 ರಂದು ಸುಪ್ರೀಂಕೋರ್ಟ್ ನಲ್ಲಿ ನಡೆಯಲಿದೆ ಎಂಬ ಮಾಹಿತಿ ಲಭ್ಯವಾಗಿದೆ. ಜನವರಿ 6 ರಂದು ಪೊಲೀಸರು ದರ್ಶನ್ ಗ್ಯಾಂಗ್ ಜಾಮೀನು ರದ್ದತಿಗೆ ಮೇಲ್ಮನವಿ ಸಲ್ಲಿಸಿದ್ದರು. ನಟ ದರ್ಶನ್ ಪವಿತ್ರಾಗೌಡ, ನಾಗರಾಜ್, ಲಕ್ಷ್ಮಣ್, ಅನುಕುಮಾರ್, ಜಗದೀಶ್ ಮತ್ತು ಪ್ರದೋಶ್ ಅವರ ಜಾಮೀನು ಅರ್ಜಿಯನ್ನು ಪ್ರಶ್ನಿಸಿ ಪೊಲೀಸರು ಮೇಲ್ಮನವಿ ಸಲ್ಲಿಸಿದ್ದಾರೆ. ಡಿಸೆಂಬರ್ ನಲ್ಲಿ ದರ್ಶನ್ ಸೇರಿ 7 ಮಂದಿ ಆರೋಪಿಗಳು ಹೈಕೋರ್ಟ್ ನಲ್ಲಿ ಪೂರ್ಣ ಪ್ರಮಾಣದ ಜಾಮೀನು ಪಡೆದಿದ್ದರು.

# ಪಲ್ಟಿ; ನಾಲ್ವರು ಸಾವು, 22 ಮಂದಿಗೆ ಗಾಯ

**ತಿರುಪತಿ:** ಚಿತ್ತೂರಿನ ಗಂಗಾಸಾಗರಂ ಬಳಿ ಶುಕ್ರವಾರ ಮುಂಜಾನೆ ಸಂಭವಿಸಿದ ರಸ್ತೆ ಅಪಘಾತದಲ್ಲಿ ನಾಲ್ವರು ಪ್ರಯಾಣಿಕರು ಸಾವಿಗೀಡಾಗಿದ್ದು, ಸುಮಾರು 22 ಮಂದಿ ಗಾಯಗೊಂಡಿದ್ದಾರೆ.ತಿರುಪತಿಯಿಂದ ತಿರುಚಿರಾಪಳ್ಳಿಗೆ ತೆರಳುತ್ತಿದ್ದ ಖಾಸಗಿ ಬಸ್ ಹೆದ್ದಾರಿ ನಿರ್ಮಾಣಕ್ಕೆ ನಿಂತಿದ್ದ ಟಿಪ್ಪರ್ ಲಾರಿಗೆ ಡಿಕ್ಕಿ ಹೊಡೆಯುವುದನ್ನು ತಪ್ಪಿಸುವ ಭರದಲ್ಲಿ ಡಿವೈಡರ್‌ಗೆ ಡಿಕ್ಕಿ ಹೊಡೆದಿದೆ. ಬಳಿಕ ಪಲ್ಟಿಯಾಗಿದೆ. ಬಸ್ ರಸ್ತೆಗೆ ಅಡ್ಡಲಾಗಿ ಬಿದ್ದಿದ್ದರಿಂದ ಸಂಚಾರ ದಟ್ಟಣೆ ಉಂಟಾಗಿತ್ತು.ಘಟನೆ ಕುರಿತು ಮಾಹಿತಿ ತಿಳಿದ ಜಿಲ್ಲಾಧಿಕಾರಿ ಸುಮಿತ್ ಕುಮಾರ್ ಅವರು ಸ್ಥಳಕ್ಕೆ ಧಾವಿಸಿದ್ದಾರೆ. ಗಾಯಾಳುಗಳನ್ನುಚಿತ್ತೂರು ಜಿಲ್ಲಾ ಆಸ್ಪತ್ರೆಗೆ ರವಾನಿಸಲಾಗಿದೆ. ಗಂಭೀರವಾಗಿ ಗಾಯಗೊಂಡವರನ್ನು ಸಿಎಂಸಿ ವೆಲ್ಲೂರಿಗೆ ವರ್ಗಾಯಿಸಲಾಗಿದೆ. ಸುಮಿತ್ ಕುಮಾರ್ ಮಾತನಾಡಿ, ಗಾಯಾಳುಗಳಿಗೆ ಚಿಕಿತ್ಸೆ ನೀಡಲಾಗುತ್ತಿದೆ. ಸಾರಿಗೆ ಸಚಿವ ಎಂ ರಾಮಪ್ರಸಾದ್ ರೆಡ್ಡಿ ಸಂತಾಪ ಸೂಚಿಸಿದ್ದು, ಗಾಯಾಳುಗಳಿಗೆ ಉತ್ತಮ ವೈದ್ಯಕೀಯ ನೆರವು ನೀಡುವಂತೆ ಚಿತ್ತೂರು ಜಿಲ್ಲಾ ವೈದ್ಯಕೀಯ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

# ಏಳು ಮಂದಿ ಸಾವು, ಹಲವರಿಗೆ ಗಾಯ

**ಚೆನ್ನೈ:** ತಮಿಳುನಾಡಿನಲ್ಲಿ ಕಾಣುಂ ಪೊಂಗಲ್ ದಿನದಂದು ನಡೆದ ಜಲ್ಲಿಕಟ್ಟು ಮತ್ತು ಮಂಜುವಿರಾಟ್ಟು ಸ್ಪರ್ಧೆಗಳಲ್ಲಿ ಪ್ರೇಕ್ಷಕರು ಮತ್ತು ಗೂಳಿ ಮಾಲೀಕ ಸೇರಿದಂತೆ ಏಳು ಜನರು ಮೃತಪಟ್ಟಿದ್ದು, ಪ್ರತ್ಯೇಕ ಘಟನೆಗಳಲ್ಲಿ ಎರಡು ಹೋರಿಗಳೂ ಸಾವಿಗೀಡಾಗಿವೆ ಎಂದು ಪೊಲೀಸರು ಶುಕ್ರವಾರ ತಿಳಿಸಿದ್ದಾರೆ.


ತಮಿಳುನಾಡಿನ ಎರಡು ಸ್ಥಳಗಳಲ್ಲಿ ನಡೆದ ಮಂಜುವಿರಾಟ್ಟು ಎಂಬ ಸಾಂಪ್ರದಾಯಿಕ ಗೂಳಿ ಪಳಗಿಸುವ ಆಟದ ವೇಳೆ ಎರಡು ಹೋರಿಗಳು ಸಾವಿಗೀಡಾಗಿವೆ. ಪುದುಕ್ಕೊಟ್ಟೈನಲ್ಲಿ ನಡೆದ ಸ್ಪರ್ಧೆಯ ವೇಳೆ ಗೂಳಿಯೊಂದು ಮೃತಪಟ್ಟಿದ್ದರೆ, ಶಿವಗಂಗೆಯ ಸಿರವಯಲ್‌ನಲ್ಲಿ ನಡೆದ ಮತ್ತೊಂದು ಘಟನೆಯಲ್ಲಿ ಗೂಳಿ ಮಾಲೀಕ ಹಾಗೂ ಆತನ ಗೂಳಿ ಪ್ರಾಣ ಕಳೆದುಕೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಶಿವಗಂಗೆ ಜಿಲ್ಲೆಯ ಸಿರವಯಲ್‌ನಲ್ಲಿ ನಡೆದ ಮಂಜುವಿರಾಟ್ಟು ಸ್ಪರ್ಧೆ ವೇಳೆ ನಡುವಿಕೊಟ್ಟೈ ಕೀಲಾ ಆವಂಧಿಪಟ್ಟಿ ಗ್ರಾಮದ ಥನೀಶ್ ರಾಜಾ ಎಂಬ ವ್ಯಕ್ತಿ ತನ್ನ ಗೂಳಿಯೊಂದಿಗೆ ಸಾವಿಗೀಡಾಗಿದ್ದಾನೆ. ರಾಜಾ ಸ್ಪರ್ಧೆಯಲ್ಲಿ ಭಾಗವಹಿಸಲು ಕರೆತಂದಿದ್ದ ಗೂಳಿಯು ಕಣದಿಂದ ಓಡಿಹೋಗಿ ಕಂಬನೂರಿನಲ್ಲಿರುವ ಕೃಷಿ ಬಾವಿಗೆ ಬಿದ್ದ ಪರಿಣಾಮ ಈ ದುರಂತ ಸಂಭವಿಸಿದೆ. ಗೂಳಿಯನ್ನು ರಕ್ಷಿಸುವ ಪ್ರಯತ್ನದಲ್ಲಿ, ರಾಜಾ ಬಾವಿಗೆ ಹಾರಿದ್ದು, ಆತ ಮತ್ತು ಗೂಳಿ ನೀರಿನಲ್ಲಿ ಮುಳುಗಿ ಪ್ರಾಣ ಬಿಟ್ಟಿದ್ದಾರೆ.

150 ಸ್ಪರ್ಧಿಗಳು ಮತ್ತು 250 ಹೋರಿಗಳು ಭಾಗವಹಿಸಿದ್ದ ಮಂಜುವಿರಾಟ್ಟು ಸ್ಪರ್ಧೆಯಲ್ಲಿ ಸುಮಾರು 130 ಜನರು ಗಾಯಗೊಂಡಿದ್ದಾರೆ. ದೇವಕೋಟೆಯ ಸುಬ್ಬಯ್ಯ ಎಂಬುವವರನ್ನು ಗೂಳಿ ತುಳಿದಿದ್ದು, ಆಸ್ಪತ್ರೆಗೆ ಸಾಗಿಸುವ ಮಾರ್ಗ ಮಧ್ಯೆ ಮೃತಪಟ್ಟಿದ್ದಾರೆ.

ಮಂಜುವಿರಾಟ್ಟು ಸ್ಪರ್ಧೆ ವೀಕ್ಷಿಸುತ್ತಿದ್ದ 55 ವರ್ಷದ ಪಿ ಪೆರಿಯಸಾಮಿ ಎಂಬ ವ್ಯಕ್ತಿಗೆ ಕೆರಳಿದ ಗೂಳಿಯೊಂದು ದಾಳಿ ಮಾಡಿದ್ದರಿಂದ ಗಾಯಗೊಂಡಿದ್ದಾರೆ. ಮಧುರೈ ಸಮೀಪದ ಅಲಂಗನಲ್ಲೂರ್ ಎಂಬ ಗ್ರಾಮದಲ್ಲಿ ಈ ಘಟನೆ ನಡೆದಿದೆ. ಈ ವೇಳೆ ಕನಿಷ್ಠ 70 ಜನರು ಗಾಯಗೊಂಡಿದ್ದಾರೆ. ಚಿಕಿತ್ಸೆಗೆ ಸ್ಪಂದಿಸದೆ ಮಧುರೈನ ರಾಜಾಜಿ ಸರ್ಕಾರಿ ಆಸ್ಪತ್ರೆಯಲ್ಲಿ ಪೆರಿಯಸಾಮಿ ಮೃತಪಟ್ಟಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

# ಭಾರತದ ವಾಹನ ಉದ್ಯಮವು ಅದ್ಭುತವಾಗಿದೆ: ಪ್ರಧಾನಿ ಮೋದಿ



**ನವದೆಹಲಿ:** ಭಾರತದ ವಾಹನ ಉದ್ಯಮವು ಅದ್ಭುತವಾಗಿದೆ ಮತ್ತು ಭವಿಷ್ಯಕ್ಕೂ ಸಿದ್ಧವಾಗಿದೆ ಎಂದು ಪ್ರಧಾನಿ ಮೋದಿ ಹೇಳಿದ್ದಾರೆ.

ಭಾರತ್ ಮಂಟಪದಲ್ಲಿ ನಡೆಯುತ್ತಿರುವ ಇಂಡಿಯಾ ಮೊಬಿಲಿಟಿ ಗ್ಲೋಬಲ್ ಎಕ್ಸ್‌ಪೋ 2025 ಅನ್ನು ಪ್ರಧಾನಿ ನರೇಂದ್ರ ಮೋದಿ ಉದ್ಘಾಟಿಸಿದರು. ಈ ವೇಳೆ ಕೇಂದ್ರ ಸಚಿವರಾದ ನಿತಿನ್ ಗಡ್ಕರಿ, ಎಚ್‌ಡಿ ಕುಮಾರಸ್ವಾಮಿ, ಜಿತನ್ ರಾಮ್ ಮಾಂಝಿ, ಮನೋಹರ್ ಲಾಲ್, ಪಿಯೂಷ್ ಗೋಯಲ್ ಮತ್ತು ಹರ್ದೀಪ್ ಸಿಂಗ್ ಪುರಿ ಮತ್ತು ಆಟೋಮೊಬೈಲ್ ವಲಯದ ನಾಯಕರು ಉದ್ಘಾಟನೆ ವೇಳೆ ಸಾಥ್ ನೀಡಿದರು.

ಕಾರ್ಯಕ್ರಮವೊಂದನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಿ ಅವರು, ಭಾರತ ಇಂದು ವಿಶ್ವದ ಐದನೇ ಅತಿದೊಡ್ಡ ಆರ್ಥಿಕತೆಯಾಗಿದೆ. ಭಾರತವು ವಿಶ್ವದ ಅಗ್ರ ಮೂರು ಆರ್ಥಿಕತೆಗಳಲ್ಲಿ ಒಂದಾದಾಗ ಭಾರತದ ವಾಹನ ಮಾರುಕಟ್ಟೆ ಎಲ್ಲಿರುತ್ತದೆ ಎಂದು ಊಹಿಸಿ. ಅಭಿವೃದ್ಧಿ ಹೊಂದಿದ ಭಾರತದ ಪ್ರಯಾಣವು ಮೊಬಿಲಿಟಿ ಕ್ಷೇತ್ರದ ಅಭೂತಪೂರ್ವ ವಿಸ್ತರಣೆಯ ಪ್ರಯಾಣವೂ ಆಗಲಿದೆ ಎಂದು ಪ್ರಧಾನಿ ಮೋದಿ ಹೇಳಿದರು.

ನಾನು ಕೊನೆಯ ಬಾರಿ ನಿಮ್ಮೊಂದಿಗೆ ಬಂದಾಗ ಲೋಕಸಭಾ ಚುನಾವಣೆಗಳು ದೂರವಿರಲಿಲ್ಲ. ಆ ಸಮಯದಲ್ಲಿ ನಿಮ್ಮೆಲ್ಲರ ವಿಶ್ವಾಸದಿಂದಾಗಿ ಮುಂದಿನ ಬಾರಿಯೂ ನಾನು ಖಂಡಿತವಾಗಿಯೂ 'ಭಾರತ್ ಮೊಬಿಲಿಟಿ ಎಕ್ಸ್‌ಪೋ'ಗೆ ಬರುತ್ತೇನೆ ಎಂದು ಹೇಳಿದ್ದೆ. ದೇಶವು ನಮಗೆ ಮೂರನೇ ಬಾರಿಗೆ ಆಶೀರ್ವದಿಸಿತು. ನೀವೆಲ್ಲರೂ ನನ್ನನ್ನು ಇಲ್ಲಿಗೆ ಕರೆದಿದ್ದೀರಿ. ಇದಕ್ಕಾಗಿ ನಾನು ನಿಮ್ಮೆಲ್ಲರಿಗೂ ನನ್ನ ಕೃತಜ್ಞತೆಯನ್ನು ಅರ್ಪಿಸುತ್ತೇನೆ. ಈ ವರ್ಷ ಇಂಡಿಯಾ ಮೊಬಿಲಿಟಿ ಎಕ್ಸ್‌ಪೋದ ವ್ಯಾಪ್ತಿ ಗಮನಾರ್ಹವಾಗಿ ಹೆಚ್ಚಾಗಿದೆ ಎಂದು ತಿಳಿಸಿದರು.

ಮುಂದಿನ 5-6 ದಿನಗಳಲ್ಲಿ ಹೆಚ್ಚಿನ ಸಂಖ್ಯೆಯ ಜನರು ಇಲ್ಲಿಗೆ ಬರುತ್ತಾರೆ. ಇಲ್ಲಿ ಅನೇಕ ಹೊಸ ವಾಹನಗಳು ಕೂಡ ಬಿಡುಗಡೆಯಾಗಲಿವೆ. ಇದು ಭಾರತದಲ್ಲಿ ಚಲನಶೀಲತೆಯ ಭವಿಷ್ಯದ ಬಗ್ಗೆ ಎಷ್ಟು ಸಕಾರಾತ್ಮಕತೆ ಇದೆ ಎಂಬುದನ್ನು ತೋರಿಸುತ್ತದೆ. ಇಂದಿನ ಭಾರತವು ಆಕಾಂಕ್ಷೆಗಳಿಂದ ತುಂಬಿದೆ, ಯುವಕರು ಶಕ್ತಿಯಿಂದ ತುಂಬಿದ್ದಾರೆ ಎಂದು ಪ್ರಧಾನಿ ಹೇಳಿದರು.

ಭಾರತದ ವಾಹನ ಉದ್ಯಮದಲ್ಲಿ ನಾವು ಈ ಆಕಾಂಕ್ಷೆಗಳನ್ನು ನೋಡುತ್ತೇವೆ. ಕಳೆದ ವರ್ಷದಲ್ಲಿ, ಭಾರತದ ವಾಹನ ಉದ್ಯಮವು ಸುಮಾರು ಶೇಕಡ 12 ರಷ್ಟು ಬೆಳೆದಿದೆ. ಮೇಕ್ ಇನ್ ಇಂಡಿಯಾ, ಮೇಕ್ ಫಾರ್ ದಿ ವರ್ಲ್ಡ್ ಎಂಬ ಮಂತ್ರವನ್ನು ಅನುಸರಿಸಿ, ಈಗ ರಫ್ತು ಕೂಡ ಹೆಚ್ಚುತ್ತಿದೆ. ಅಭಿವೃದ್ಧಿ ಹೊಂದಿದ ಭಾರತದ ಪ್ರಯಾಣವು ಅಭೂತಪೂರ್ವ ಪರಿವರ್ತನೆ ಮತ್ತು ಚಲನಶೀಲತೆಯ ಕ್ಷೇತ್ರದ ಹಲವು ಪಟ್ಟು ವಿಸ್ತರಣೆಯ ಪ್ರಯಾಣವಾಗಲಿದೆ ಎಂದು ಪ್ರಧಾನಿ ಹೇಳಿದರು.

ಭಾರತದಲ್ಲಿ ಪ್ರತಿ ವರ್ಷ ಮಾರಾಟವಾಗುವ ವಾಹನಗಳ ಸಂಖ್ಯೆಯಷ್ಟು ಜನಸಂಖ್ಯೆಯನ್ನು ಅನೇಕ ದೇಶಗಳು ಹೊಂದಿಲ್ಲ ಎಂಬುದು ಗಮನಾರ್ಹ. ಕಳೆದ ಬಾರಿ 800 ಕ್ಕೂ ಹೆಚ್ಚು ಪ್ರದರ್ಶಕರು ಭಾಗವಹಿಸಿದ್ದರು, 1.5 ಲಕ್ಷಕ್ಕೂ ಹೆಚ್ಚು ಜನರು ಭೇಟಿ ನೀಡಿದ್ದರು. ಈ ಬಾರಿ ಭಾರತ್ ಮಂಟಪದ ಜೊತೆಗೆ ಈ ಪ್ರದರ್ಶನವನ್ನು ದ್ವಾರಕಾದ ಯಶೋಭೂಮಿ ಮತ್ತು ಗ್ರೇಟರ್ ನೋಯ್ಡಾದ ಇಂಡಿಯಾ ಎಕ್ಸ್‌ಪೋ ಸೆಂಟರ್‌ನಲ್ಲಿಯೂ ಆಯೋಜಿಸಲಾಗಿದೆ.

# ಅಬಕಾರಿ ಇಲಾಖೆಯಲ್ಲಿ ವರ್ಗಾವಣೆಗೆ ಹೊಸ ನಿಯಮ

**ಬೆಂಗಳೂರು:** ಅಬಕಾರಿ ಇಲಾಖೆಯಲ್ಲಿ ಸುಧಾರಣೆ ಹಾಗೂ ಪಾರದರ್ಶಕತೆ ತರುವ ಹಿನ್ನೆಲೆಯಲ್ಲಿ ಹಲವು ಸುಧಾರಣಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದ್ದು, ಇಲಾಖೆಯಲ್ಲಿನ ವರ್ಗಾವಣೆಗೆ ಹೊಸ ನಿಯಮಗಳನ್ನು ರೂಪಿಸಲಾಗಿದೆ ಎಂದು ಅಬಕಾರಿ ಹಾಗೂ ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವ ಆರ್ ಬಿ ತಿಮ್ಮಾಪೂರ ಅವರು ತಿಳಿಸಿದ್ದಾರೆ.



ಅಬಕಾರಿ ಇಲಾಖೆಯ ವರ್ಗಾವಣೆ ನಿಯಮಗಳನ್ನು ಮಾರ್ಪಾಡು ಮಾಡುವ ಮೂಲಕ ಪಾರದರ್ಶಕ ಮತ್ತು ನಿಯಮಾಧಾರಿತ ವರ್ಗಾವಣೆ ಪದ್ಧತಿಯನ್ನು ಜಾರಿಗೊಳಿಸುವುದರಿಂದ ಇತರೆ ಪ್ರಭಾವಗಳಿಗೆ ಒಳಗಾಗುವುದನ್ನು ತಡೆಗಟ್ಟಲು ಸಾಧ್ಯವಾಗಲಿದೆ ಎಂದು ಸಚಿವ ತಿಮ್ಮಾಪೂರ ಅವರು ತಿಳಿಸಿದ್ದಾರೆ.

ಸನ್ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ನಿನ್ನೆ ನಡೆದ ಸಚಿವ ಸಂಪುಟ ಸಭೆಯಲ್ಲಿ ಕರ್ನಾಟಕ ನಾಗರೀಕ ಸೇವೆಗಳು (ಅಬಕಾರಿ ಇಲಾಖೆಯ ವರ್ಗಾವಣೆ) ನಿಯಮಗಳು, 2025 ಅನುಮೋದನೆ ನೀಡಲಾಗಿದ್ದು, ಅನುಬಂಧದಲ್ಲಿ ನೀಡಲಾದ ಕರಡನ್ನು ಹೊರಡಿಸಿ, ಸಂಬಂಧಪಟ್ಟವರಿಂದ ಆಕ್ಷೇಪಣೆ ಅಥವಾ ಸಲಹೆಗಳನ್ನು ಆಹ್ವಾನಿಸುವುದು. ಹಾಗೂ ಸ್ವೀಕೃತವಾಗಬಹುದಾದ ಆಕ್ಷೇಪಣೆ ಅಥವಾ ಸಲಹೆಗಳನ್ನು ಪರಿಗಣಿಸಿದ ನಂತರ ಕರ್ನಾಟಕ ನಾಗರೀಕ ಸೇವೆಗಳು (ಅಬಕಾರಿ ಇಲಾಖೆಯ ವರ್ಗಾವಣೆ) ನಿಯಮಗಳು, 2025 ನ್ನು ಅಂತಿಮಗೊಳಿಸಲು ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನಿಸಲಾಗಿದೆ ಎಂದು ಸಚಿವ ತಿಮ್ಮಾಪೂರ ಅವರು ತಿಳಿಸಿದ್ದಾರೆ.

ಅಬಕಾರಿ ಇಲಾಖೆಯಲ್ಲಿನ ಹುದ್ದೆಗಳನ್ನು ಕಾರ್ಯ ನಿರ್ವಾಹಕ ಮತ್ತು ಕಾರ್ಯನಿರ್ವಾಹಕೇತರ ಎಂದು ವಿಂಗಡಿಸಿ, ಅಬಕಾರಿ ನಿರೀಕ್ಷಕರು, ಅಬಕಾರಿ ಉಪ ನಿರೀಕ್ಷಕರು, ಅಬಕಾರಿ ಮುಖ್ಯ ಪೇದೆ ಮತ್ತು ಅಬಕಾರಿ ಪೇದೆಗಳ ವರ್ಗಾವಣೆಯನ್ನು ಕೌನ್ಸಿಲಿಂಗ್ ಮುಖಾಂತರ ಮಾಡಲು ನಿರ್ಧರಿಸಲಾಗಿದೆ. ಜೊತೆಗೆ ಒಬ್ಬ ಅಧಿಕಾರಿ/ಸಿಬ್ಬಂದಿಯನ್ನು ಸತತವಾಗಿ ಎರಡಕ್ಕಿಂತ ಹೆಚ್ಚು ಅವಧಿಗೆ ಕಾರ್ಯನಿರ್ವಾಹಕ ಹುದ್ದೆಗೆ ವರ್ಗಾಯಿಸುವಂತಿಲ್ಲ ಹಾಗೂ ಅಬಕಾರಿ ಅಧಿಕಾರಿಗಳ ಕಡ್ಡಾಯ ವರ್ಗಾವಣೆಗೆ ಹೊಸ ನಿಯಮದಲ್ಲಿ ಪ್ರಸ್ತಾಪಿಸಲಾಗಿದೆ ಎಂದು ಸಚಿವ ತಿಮ್ಮಾಪೂರ ತಿಳಿಸಿದ್ದಾರೆ.

ಕಳೆದ 05 ವರ್ಷಗಳಲ್ಲಿ ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿನ ಕಾರ್ಯನಿರ್ವಾಹಕ ಹುದ್ದೆಯಲ್ಲಿ ಕಾರ್ಯ ನಿರ್ವಹಿಸಿದ ಅಬಕಾರಿ ಜಂಟಿ ಆಯುಕ್ತರು, ಉಪ ಆಯುಕ್ತರು, ಅಧೀಕ್ಷಕರು, ನಿರೀಕ್ಷಕರು ಮತ್ತು ಉಪ ನಿರೀಕ್ಷಕರುಗಳನ್ನು ಸದರಿ ಜಿಲ್ಲೆಗಳನ್ನು ಹೊರತುಪಡಿಸಿ ಇತರೆ ಜಿಲ್ಲೆಗಳಿಗೆ ವರ್ಗಾಯಿಸಲು ಹೊಸ ನಿಯಮದಲ್ಲಿ ಉಲ್ಲೇಖಿಸಲಾಗಿದೆ.

## ಪಕ್ಷದಲ್ಲಿ ಆಂತರಿಕ ಕಲಹವಿಲ್ಲ

ಮೊದಲ ಪುಟದಿಂದ

ಸಂಸತ್‌ನಲ್ಲಿ ದೇಶದ ಗೃಹ ಸಚಿವ ಅಮಿತ್ ಶಾ ಕೇವಲ ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರಿಗೆ ಮಾತ್ರ ಅಪಮಾನ ಮಾಡಿಲ್ಲ. ಅಂಬೇಡ್ಕರ್ ಅವರ ತತ್ವಗಳನ್ನು ನಂಬುವವರ ಬಗ್ಗೆ ಅಪಹಾಸ್ಯ ಮಾಡಿದ್ದಾರೆ. ಸಂವಿಧಾನಿಕ ಅಧಿಕಾರವನ್ನು ಬಿಜೆಪಿಯಿಂದ ಬುಲ್ಡೋಜರ್ ಕೆಳಗೆ ಹಿಸುಕಲಾಗುತ್ತಿದೆ. ಹೀಗಾಗಿ ಜನವರಿ 21ರಂದು ಬೆಳಗಾವಿಯಲ್ಲಿ ಜೈ ಬಾಪು, ಜೈ ಭೀಮ, ಜೈ ಸಂವಿಧಾನ ರ್‍ಯಾಲಿ ಹಮ್ಮಿಕೊಂಡಿದ್ದೇವೆ ಎಂದು ಸುರ್ಜೇವಾಲ ತಿಳಿಸಿದರು.

ಜನವರಿ 27ರಂದು ಅಂಬೇಡ್ಕರ್ ಜನ್ಮಸ್ಥಳ ಮಧ್ಯಪ್ರದೇಶದಲ್ಲಿ ರ್‍ಯಾಲಿ ನಡೆಯಲಿದೆ. ಒಂದೆಡೆ ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರಿಗೆ ಅಪಮಾನ ಮಾಡುತ್ತಾರೆ. ಮತ್ತೊಂದೆಡೆ ದಲಿತರು, ಹಿಂದುಳಿದವರು, ಮಹಿಳೆಯರು, ಯುವಕರ ಅಧಿಕಾರ ಕಿತ್ತುಕೊಳ್ಳುತ್ತಾರೆ. ಹೀಗಾಗಿ ದೇಶಾದ್ಯಂತ ಇಂದು ಹೊಸ ಕ್ರಾಂತಿ ಮಾಡುವ ಅವಶ್ಯಕತೆ ಇದೆ. ಆ ನಿಟ್ಟಿನಲ್ಲಿ ಬೆಳಗಾವಿಯಿಂದ ಹೊರಹೊಮ್ಮುವ ಧ್ವನಿ ದೇಶದ ರಾಜಕಾರಣಕ್ಕೆ ಹೊಸ ದಿಕ್ಕು ನೀಡಲಿದೆ ಎಂದು ರಣದೀಪ್ ಸಿಂಗ್ ಸುರ್ಜೇವಾಲ ವಿಶ್ವಾಸ ವ್ಯಕ್ತಪಡಿಸಿದರು.

## ನುಡಿದಂತೆ ನಡೆದ ಸಿಎಂ

ಶ್ರೀಮಂತರು ಮತ್ತು ನಮ್ಮಂಥಾ ರಾಜಕಾರಣಿಗಳೂ ಸರ್ಕಾರಿ ಆಸ್ಪತ್ರೆಗೆ ಬರುವಂಥಾಗಬೇಕು ಎನ್ನುವ ದಿಕ್ಕಿನಲ್ಲಿ ಕಾರ್ಯಕ್ರಮಗಳನ್ನು ರೂಪಿಸುತ್ತಿದ್ದೇವೆ ಎಂದರು. ಜಿಲ್ಲೆಗೊಂದು ಸರ್ಕಾರಿ ವೈದ್ಯಕೀಯ ಕಾಲೇಜು ಇರಬೇಕು ಎನ್ನುವುದು ನನ್ನ ಗುರಿ. ಮಂಗಳೂರಿನಲ್ಲಿ ಉತ್ತಮ ಆರೋಗ್ಯ ಸೇವೆ ಇದ್ದರೂ ಈ ಜಿಲ್ಲೆಗೂ ಸರ್ಕಾರಿ ವೈದ್ಯಕೀಯ ಕಾಲೇಜಿನ ಅಗತ್ಯ ಇದೆ. ಈ ದಿಕ್ಕಿನಲ್ಲೂ ಸರ್ಕಾರ ಯೋಚಿಸಿ ಕ್ರಮ ಕೈಗೊಳ್ಳಲಿದೆ.

ರಾಜೀವ್ ಗಾಂಧಿ ಆರೋಗ್ಯ ವಿವಿ ಆರೋಗ್ಯ ಸೇವೆ ಸರಳವಾಗಿ ಜನರಿಗೆ ಸಿಗುವ ದಿಕ್ಕಿನಲ್ಲಿ ಸಂಶೋಧನೆಗಳನ್ನು ಹೆಚ್ಚೆಚ್ಚು ನಡೆಸಬೇಕು. ದೇಶದ ಅತ್ಯುತ್ತಮ ಆರೋಗ್ಯ ಸೇವೆ ಬಡವರಿಗೂ ಸುಲಭವಾಗಿ ಸಿಗುವಂತೆ ಮಾಡಬೇಕು ಎಂದು ಕರೆ ನೀಡಿದರು.ಈ ಕ್ಷೇತ್ರದ ಡಿಪ್ಲಮೋ ಮತ್ತು ಇತರೆ ಕೋರ್ಸ್ ಗಳಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳಿಗೆ ಕೌಶಲ್ಯ ತರಬೇತಿ ನೀಡಲಾಗುತ್ತಿದೆ. ವೈದ್ಯ ವಿಜ್ಞಾನ ಪದವೀಧರರೂ ಯುವ ನಿಧಿಗೆ ಅರ್ಹತೆ ಗಳಿಸಿದ್ದಾರೆ. ವೈದ್ಯ ವಿದ್ಯಾರ್ಥಿಗಳು ಇತರೆ ಕ್ಷೇತ್ರಗಳಿಗೆ ವಲಸೆ ಹೋಗದೆ ಆರೋಗ್ಯ ಕ್ಷೇತ್ರದಲ್ಲೇ ತಮ್ಮ ಸೇವೆ ಸಲ್ಲಿಸಬೇಕು ಎಂದು ಕರೆ ನೀಡಿದರು.

ಬಿಪಿಎಲ್ ಕಾರ್ಡ್ ಇದ್ದವರಿಗೆ ಎಲ್ಲಾ ರೀತಿಯ ಆರೋಗ್ಯ ಸೇವೆಯನ್ನು ಉಚಿತ ವಾಗಿ ನೀಡಿ ಎನ್ನುವ ಸೂಚನೆಯನ್ನು ವೈದ್ಯಕೀಯ ಕಾಲೇಜುಗಳಿಗೆ ಸೂಚನೆ ನೀಡಲಾಗಿದೆ ಎಂದರು.ಬಡವರಿಗೂ ಕೂಡ ದೊಡ್ಡ ದೊಡ್ಡ ಕಾಯಿಲೆಗಳು ಬರುತ್ತಿವೆ. ಕಿಡ್ನಿ ಕಸಿಗೆ 5000 ಮಂದಿ ಸಾಲಿನಲ್ಲಿದ್ದಾರೆ. ಕಿಡ್ನಿ ದಾನಿಗಳು ಸಿಕ್ಕರೆ ನಿತ್ಯ ಕಿಡ್ನಿ ಕಸಿ ಮಾಡುವ ನುರಿತ ವೈದ್ಯರ ತಂಡ ನಮ್ಮಲ್ಲಿದೆ ಎಂದರು.

ಇಂದು ನಾನು ಶಂಕುಸ್ಥಾಪನೆ ನೆರವೇರಿಸಿರುವ ಪ್ರಾದೇಶಿಕ ಕಚೇರಿಯ ನಿರ್ಮಾಣ ಮತ್ತು ಕಾರ್ಯಕ್ಷಮತೆ ಎರಡೂ ಗುಣಮಟ್ಟದಲ್ಲಿ ಕೂಡಲಿ ಎಂದು ಸೂಚಿಸಿದರು.

# ಚೂಡಾದಿಂದ 236 ನಿವೇಶನ ಹಂಚಿಕೆಗೆ ಸಾರ್ವಜನಿಕರಿಂದ ಅರ್ಜಿ ಆಹ್ವಾನ



**ಚಾಮರಾಜನಗರ:** ಚಾಮರಾಜನಗರ-ರಾಮಸಮುದ್ರ ನಗರಾಭಿವೃದ್ಧಿ ಪ್ರಾಧಿಕಾರವು (ಚೂಡಾ) ನಗರಕ್ಕೆ ಸಮೀಪದ ಚಾಮರಾಜನಗರ-ಟಿ.ನರಸೀಪುರದ ರಾಷ್ಟ್ರೀಯ ಹೆದ್ದಾರಿಗೆ ಹೊಂದಿಕೊಂಡಿರುವ ಚಾಮರಾಜನಗರ ಹಾಗೂ ಮಸಗಾಪುರದ ಬಳಿ 14.24 ಎಕರೆ ಭೂಮಿಯಲ್ಲಿ ನಿರ್ಮಾಣ ಮಾಡಲಾಗುತ್ತಿರುವ ವಸತಿ ಬಡಾವಣೆಯಲ್ಲಿ ವಿವಿಧ ಅಳತೆಯ ನಿವೇಶನಗಳನ್ನು ಹಂಚಿಕೆ ಮಾಡಲು ಸಾರ್ವಜನಿಕರಿಂದ ಅರ್ಜಿ ಆಹ್ವಾನಿಸಿದೆ ಎಂದು ಚೂಡಾ ಅಧ್ಯಕ್ಷ ಮಹಮ್ಮದ್ ಅಸ್ಗರ್ (ಮುನ್ನಾ) ತಿಳಿಸಿದರು.

ನಗರದ ಚೂಡಾ ಕಚೇರಿ ಸಭಾಂಗಣದಲ್ಲಿಂದು ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಚೂಡಾ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ (ಮುನ್ನಾ) ಅವರು ಪ್ರಾಧಿಕಾರದ ಶೇ. 50ರಷ್ಟು ಪಾಲಿನ ವಿವಿಧ ಅಳತೆಯ ನಿವೇಶನಗಳನ್ನು ವಿವಿಧ ಪ್ರವರ್ಗಗಳ ಅಡಿಯಲ್ಲಿ ಕಡಿಮೆ ದರದಲ್ಲಿ ನೀಡಲಿದ್ದು, ಇಂದಿನಿಂದಲೇ (ಜ.16) ಸಾರ್ವಜನಿಕರು ಅರ್ಜಿ ಸಲ್ಲಿಸಬಹುದು ಎಂದರು.

6.0 ಮೀ ಥ 8.3 ಮೀ ಅಳತೆಯ ನಿವೇಶನಕ್ಕೆ 6,69,810 ರೂ. ಮೌಲ್ಯ ನಿಗದಿ ಮಾಡಿದ್ದು ಶೇ. 10ರಷ್ಟು ಅಂದರೆ 66,980 ರೂ. ಗಳ ಪ್ರಾರಂಭಿಕ ಠೇವಣಿ, ನೊಂದಣಿ ಶುಲ್ಕವಾಗಿ 100 ರೂ. ಗಳನ್ನು ಪಾವತಿಸಬೇಕಿದೆ. 9.0 ಮೀ ಥ 15.0 ಮೀ ಅಳತೆಯ ನಿವೇಶನಕ್ಕೆ 18,15,750 ರೂ. ಮೌಲ್ಯ ನಿಗದಿ ಮಾಡಿದ್ದು ಶೇ. 10ರಷ್ಟು ಅಂದರೆ 1,81,575 ರೂ. ಗಳ ಪ್ರಾರಂಭಿಕ ಠೇವಣಿ, ನೊಂದಣಿ ಶುಲ್ಕವಾಗಿ 250 ರೂ. ಗಳನ್ನು ಪಾವತಿಸಬೇಕಿದೆ. 12.0 ಮೀ ಥ 18.0 ಮೀ ಅಳತೆಯ ನಿವೇಶನಕ್ಕೆ 29,05,200 ರೂ. ಮೌಲ್ಯ ನಿಗದಿ ಮಾಡಿದ್ದು ಶೇ. 10ರಷ್ಟು ಅಂದರೆ 2,90,520 ರೂ. ಗಳ ಪ್ರಾರಂಭಿಕ ಠೇವಣಿ, ನೊಂದಣಿ ಶುಲ್ಕವಾಗಿ 500 ರೂ. ಗಳನ್ನು ಪಾವತಿಸಬೇಕಿದೆ. ಅರ್ಜಿ ಶುಲ್ಕ 500 ರೂ.ಗಳಾಗಿದೆ ಎಂದು ಅವರು ತಿಳಿಸಿದರು.

ಪ್ರಾಧಿಕಾರದಿಂದ ನಿವೇಶನಗಳಿಗೆ ನಿಗದಿಪಡಿಸಿರುವ ದರ ಪ್ರತೀ ಚ.ಮೀ ಗೆ 13,450 ರೂ. ಗಳಾಗಿವೆ (ಚ. ಅಡಿಗೆ 1250 ರೂ.) ಆಗಿದ್ದು, ನಿವೇಶನಾಕಾಂಕ್ಷಿಗಳು ಚಾಮರಾಜನಗರದ ಇಂಡಿಯನ್ ಬ್ಯಾಂಕಿನಲ್ಲಿ ಅರ್ಜಿ ಪಡೆದು ಶೇ. 10ರಷ್ಟು ಶುಲ್ಕ ಮತ್ತು ನೊಂದಣಿ ಶುಲವನ್ನು ಫೆಬ್ರವರಿ 28ರೊಳಗೆ ಪಾವತಿಸಬೇಕಾಗುತ್ತದೆ. ಒಟ್ಟು 236 ನಿವೇಶನಗಳನ್ನು ಹಂಚಿಕೆ ಮಾಡಲಾಗುತ್ತಿದೆ ಎಂದರು.

ಹಂಚಿಕೆಯಲ್ಲಿ ರೋಸ್ಟರ್ ಪದ್ದತಿ ಪಾಲಿಸಲಾಗುತ್ತಿದ್ದು ಪರಿಶಿಷ್ಟಜಾತಿ, ಪರಿಶಿಷ್ಟವರ್ಗ, ಹಿಂದುಳಿದವರ್ಗ, ವಿಶೇಷಚೇತನರು, ಸೈನಿಕರು, ಇನ್ನಿತರ ವರ್ಗಗಳು, ಸಾಮಾನ್ಯ ವರ್ಗದವರಿಗೆ ನಿವೇಶನಗಳನ್ನು ನೀಡಲಾಗುತ್ತದೆ. ಸರ್ಕಾರದ ಮಾರ್ಗಸೂಚಿಗಳ ಪ್ರಕಾರ ವಸತಿ ಬಡಾವಣೆ ನಿರ್ಮಿಸಲಾಗುತ್ತಿದ್ದು, ನಿವೇಶನಗಳನ್ನು 3ರಿಂದ 4 ತಿಂಗಳೊಳಗೆ ನೀಡಲಿದ್ದೇವೆ. ಸಾರ್ವಜನಿಕರು ನಗರಾಭಿವೃದ್ಧಿ ಪ್ರಾಧಿಕಾರದ ಈ ಯೋಜನೆಯನ್ನು ಸದ್ಬಳಕೆ ಮಾಡಿಕೊಂಡು ನಗರದ ಬೆಳವಣಿಗೆಗೆ ಸಹಕರಿಸಬೇಕು ಎಂದು ಚೂಡಾ ಅಧ್ಯಕ್ಷರು ತಿಳಿಸಿದರು.

ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು, ಜಿಲ್ಲಾಧಿಕಾರಿಗಳ ಸಹಕಾರ ಮಾರ್ಗದರ್ಶನ ಹಾಗೂ ಉತ್ತೇಜನದಿಂದ ಚೂಡಾ ನಿವೇಶನ ಹಂಚಿಕೆ ಪ್ರಕ್ರಿಯೆಗೆ ಮುಂದಾಗಿದೆ. ಪ್ರಾಧಿಕಾರವು ಚಾಮರಾಜನಗರಕ್ಕೆ ಹೊಂದಿಕೊಂಡಿರುವ ಕೋಡಿಮೋಳೆ ಕೆರೆಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿ ಚಟುವಟಿಕೆಗಳಿಗಾಗಿ 4.25 ಕೋಟಿ ರೂ. ವೆಚ್ಚದಲ್ಲಿ ವಿಸ್ತೃತ ಯೋಜನಾ ವರದಿ ಸಿದ್ದಪಡಿಸಿ ಅನುಮೋದನೆಗಾಗಿ ಸರ್ಕಾರಕ್ಕೆ ಸಲ್ಲಿಸಿದೆ. ಪ್ರಾಧಿಕಾರದ ವ್ಯಾಪ್ತಿಯ ಉದ್ಯಾನವನಗಳ ಅಭಿವೃದ್ದಿಗೂ ಮುಂದಾಗಿದ್ದೇವೆ ಎಂದರು.

ಚೂಡಾ ವ್ಯಾಪ್ತಿಯ ವಿಸ್ತಾರ ಈ ಹಿಂದಿಗಿಂತಲೂ ಹನ್ನೊಂದು ಪಟ್ಟು ಹೆಚ್ಚಾಗಿದೆ. ಹರದನಹಳ್ಳಿ, ಚಂದಕವಾಡಿ, ಕೂಡ್ಲೂರು, ಮಾದಾಪುರ ಮತ್ತು ಭೋಗಾಪುರ, ಬದನಗುಪ್ಪೆಯ ಸ್ವಲ್ಪ ಭಾಗ ವ್ಯಾಪ್ತಿಗೆ ಒಳಪಡುತ್ತಿದೆ. ಚೂಡಾ ಮಾಸ್ಟರ್ ಪ್ಲಾನ್ ಅನುಷ್ಠಾನಕ್ಕೂ ಮುಂದಾಗಿದೆ. ನಗರ ಪ್ರಾಧಿಕಾರ ವ್ಯಾಪ್ತಿಯಲ್ಲಿ 14 ಮಹಡಿಗಳವರೆಗೂ ಕಟ್ಟಡ ಕಟ್ಟಲು ಸಹ ಅವಕಾಶ ನೀಡಲಾಗುತ್ತದೆ ಎಂದು ಚೂಡಾ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ (ಮುನ್ನಾ) ಅವರು ತಿಳಿಸಿದರು.

ನಗರಾಭಿವೃದ್ಧಿ ಪ್ರಾಧಿಕಾರದ ಸದಸ್ಯರಾದ ಪುಟ್ಟಸ್ವಾಮಿ, ಎಸ್.ರಾಜು, ರಾಜೇಂದ್ರ, ಅಂಬಿಕಾ, ಆಯುಕ್ತರಾದ ಹೆಚ್.ವಿ.ಸೀಮಾ, ಸಹಾಯಕ ನಿರ್ದೇಶಕರಾದ ರಿತೇಶ್, ಎಂಜಿನಿಯರ್ ಐಶ್ವರ್ಯ ಸುದ್ದಿಗೋಷ್ಠಿಯಲ್ಲಿ ಇದ್ದರು.

# ಜೂಜಾಟ: 11 ಜನರ ಮೇಲೆ ಪ್ರಕರಣ

**ಚಾಮರಾಜನಗರ:** ಅಂದರ್ ಬಾಹರ್ ಜೂಜಾಟದಲ್ಲಿ ತೊಡಗಿದ್ದ ಹನ್ನೊಂದು ಜನ ಮೇಲೆ ಚಾ.ನಗರ ಗ್ರಾಮಾಂತರ ಠಾಣಾ ವಲಯದಲ್ಲಿ ದೂರು ದಾಖಲಿಸಿ ಪಣಕ್ಕಿಟ್ಟಿದ್ದ ಹಣ ವಶಪಡೆದಿದ್ದಾರೆ.

ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯ ಮರಿಯಾಲದಿಂದ ಬೇಡರಪುರಕ್ಕೆ ಹೋಗುವ ಸರ್ಕಾರಿ ಜಮೀನಿನಲ್ಲಿ ಅಂದರ್ ಬಾಹರ್ ಜೂಜಾಟ ಆಡುತ್ತಿದ್ದವರ ಮೇಲೆ ಪೊಲೀಸ್ ಅಧಿಕಾರಿ ಸಿಬ್ಬಂದಿಯವರು ದಾಳಿ ನಡೆಸಿ, ನಗದು ವಶಪಡಿಸಿಕೊಂಡು ಒಟ್ಟು 11 ಜನರ ಮೇಲೆ ಪ್ರಕರಣ ದಾಖಲಿಸಿಜರ್ದ್ದಾರೆ.

ಚಾಮರಾಜನಗರ ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿ ಬೇಡರಪುರ ಗ್ರಾಮದ ಶಶಿಕುಮಾರ್, ಗಿರೀಶ್, ಶಿವರಾಜು, ಮಹೇಶ್, ಸಿದ್ದಶೆಟ್ಟಿ, ಶಿವರಾಜು, ಮಹೇಶ್, ಶಿವರಾಜು, ಮಂಜು ಬಸವಣ್ಣ, ಕೊಡಸೋಗೆ ಮಹೇಶ ಎಂಬುವವರ ಮೇಲೆ ಪ್ರಕರಣ ದಾಖಲಿಸಿದ್ದಾರೆ.

ಪಿಎಸ್ಐ ರಿಯಾನ್ ಬೇಗಂ..ಎಎಸ್ಐ ಚಂದ್ರಶೇಖರ್, ಸಿಬ್ಬಂದಿಗಳಾದ ರವಿಕುಮಾರ್, ವೆಂಕಟೇಶ್, ವಿಶ್ವನಾಥ, ಹರೀಶ್ ಕಾರ್ಯಚರಣೆಯಲ್ಲಿ ಭಾಗವಹಿಸಿದ್ದರು.

# ಸರ್ಕಾರಿ ಸವಲತ್ತುಗಳಿಂದ ವಂಚಿತರಾಗಬೇಡಿ

**ಮಾಗಡಿ:** ಮಹಿಳೆಯರು, ಮಕ್ಕಳು ಹಿರಿಯ ನಾಗರೀಕರು ತಮ್ಮ ಸಮಸ್ಯೆಗಳನ್ನು ತಿಳಿಸಿ ಸವಲತ್ತುಗಳನ್ನು ಪಡೆಯಲು ಉತ್ತಮ ವೇದಿಕೆಯಾಗಿದೆ ಎಂದು ಶ್ರೀಗಿರಿಪುರ ಗ್ರಾಮಪಂಚಾಯ್ತಿ ಅಧ್ಯಕ್ಷೆ ಎ.ಸಿ.ಲತಾ ಹೆಚ್. ರಮೇಶ್ ಹೇಳಿದರು.




ತಾಲೂಕಿನ ಶ್ರೀಗಿರಿಪುರ ಗ್ರಾಮಪಂಚಾಯ್ತಿ ಸಭಾಂಗಣದಲ್ಲಿ 2024-25ನೇ ಸಾಲಿನ ಗ್ರಾಮಸಭೆ ಉದ್ಘಾಟಿಸಿ ಮಾತನಾಡಿದ ಅವರು, ಮಹಿಳೆಯರಿಗೆ, ಮಕ್ಕಳಿಗೆ, ಹಿರಿಯ ನಾಗರೀಕರು ಸರಕಾರದ ಸೌಲಭ್ಯಗಳಿಂದ ವಂಚಿತರಾಗಬಾರದು ಎಂಬ ನಿಟ್ಟಿನಲ್ಲಿ ಸರಕಾರ ಈ ಕಾರ್ಯಕ್ರಮವನ್ನು ಅನುಷ್ಠಾನಮಾಡಿದೆ ಅರ್ಹರು ಈ ಸೌಲಭ್ಯಪಡೆದುಕೊಂಡು ಆರ್ಥಿಕವಾಗಿ ಸ್ವಾವಲಂಭಿಗಳಾಗುವಂತೆ ಕರೆ ನೀಡಿದರು.

ಗ್ರಾಮೀಣ ಭಾಗದ ಸರ್ವತೋಮುಖ ಅಭಿವೃದ್ದಿಗೆ ನರೇಗಾ ಯೋಜನೆ ಸಹಕಾರಿಯಾಗಿದೆ. ಈ ನಿಟ್ಟಿನಲ್ಲಿ ಗ್ರಾಮಸ್ಥರು ಕಡ್ಡಾಯವಾಗಿ ಗ್ರಾಮಸಭೆಗಳಿಗೆ ಭಾಗವಹಿಸಿ ಸರಕಾರದ ಸೌಲತ್ತುಗಳ ಬಗ್ಗೆ ತಿಳಿದು ಸವಲತ್ತು ಪಡೆದುಕೊಳ್ಳಿ. ಗ್ರಾಮೀಣ ಭಾಗದ ಜನರು ತಮ್ಮ ಸಮಸ್ಯೆಗಳನ್ನು ಹೊತ್ತು ಸರಕಾರಿ ಕಚೇರಿಗಳಿಗೆ ಅಲೆಯದೆ ಗ್ರಾಮಸಭೆಗಳಿಗೆ ಆಗಮಿಸುವ ಅಧಿಕಾರಿಗಳ ಬಳಿ ತಿಳಿಸಿ ಸಮಸ್ಯೆ ಬಗೆಹರಿಸಿಕೊಳ್ಳಿ ಇದಕ್ಕೆ ಗ್ರಾಮಸಭೆ ಉತ್ತಮ ವೇದಿಕೆಯಾಗಿದೆ ಎಂದರು.

ಗ್ರಾ.ಪಂ.ಅಭಿವೃದ್ದಿ ಅಧಿಕಾರಿ ಬಸವರಾಜು ಮಾತನಾಡಿ, ಗ್ರಾಮ ಪಂಚಾಯ್ತಿ ಮಿನಿ ವಿಧಾನಸೌಧ ಇದ್ದಂತೆ ಗ್ರಾಮಗಳಲ್ಲಿನ ಸಮಸ್ಯೆಗಳನ್ನು ಬಗೆಹರಿಸಲು ಗ್ರಾಮಸಭೆ ಪ್ರಮುಖ ಪಾತ್ರವಹಿಸಲಿದೆ. ಗ್ರಾಮಸ್ಥರು ತಮ್ಮ ಸುತ್ತಮುತ್ತಲಿನ ಪ್ರದೇಶವನ್ನು ಸ್ವಚ್ಚತೆ ಕಾಪಾಡಿಕೊಂಡರೆ ಉತ್ತಮ ಆರೋಗ್ಯ ವೃದ್ದಿಸಿಕೊಳ್ಳಬಹುದು. ದೀಪ, ಚರಂಡಿ. ನೀರು, ರಸ್ತೆ ಸಮರ್ಪಕವಾಗಿ ಇಲ್ಲದಿದ್ದರೆ ಸಭೆಯ ಗಮನಕ್ಕೆ ತಂದರೆ ಹಂತ,ಹಂತವಾಗಿ ಸಮಸ್ಯೆ ಬಗೆಹರಿಸಲಾಗುವುದು ಎಂದರು.

ಜೀವಿಕ ಗಂಗಹನುಮಯ್ಯ ಮಾತನಾಡಿ, ಬಾಲಕಾರ್ಮಿಕರನ್ನು ಗುರುತಿಸಿ ಅವರಿಗೆ ಶಿಕ್ಷಣ ಕೊಡಬೇಕಾದ ಕರ್ತವ್ಯ ಎಲ್ಲರೂ ಮಾಡಬೇಕು, ನೆರೆರಾಜ್ಯಗಳಿಂದ ಪ್ರತಿ ನಿತ್ಯ ಸಾಕಷ್ಟು ಮಂದಿ ಕೂಲಿ ಕಾರ್ಮಿಕರು ವಲಸೆ ಬಂದು ಇಟ್ಟಿಗೆ ಫ್ಯಾಕ್ಟರಿ, ಹೋಟೆಲ್, ಡಾಬಾ ಇತರೆಡೆಗಳಲ್ಲಿ ಕೆಲಸ ಮಾಡುತ್ತಿದ್ದಾರೆ ಇವರಲ್ಲಿ ಜೀತದಾಳುಗಳು ಕಂಡು ಬಂದರೆ ಅವರನ್ನು ಗ್ರಾ.ಪಂ. ಅಧಿಕಾರಿಗಳು ಹಾಗೂ ಸಂಬಂಧ ಪಟ್ಟವರು ಗುರುತಿಸಿ ಬಿಡುಗಡೆ ಪತ್ರ ನೀಡಬೇಕು. ತಮ್ಮ ಸುತ್ತಮುತ್ತಲಿನಲ್ಲಿ ಬಾಲ್ಯ ವಿವಾಹ ಕಂಡುಬಂದರೆ ತಡೆಗಟ್ಟುವ ಕೆಲಸ ಮಾಡಬೇಕು ಎಂದರು.

ಗ್ರಾಮಸಭೆ ನೋಡಲ್ ಅಧಿಕಾರಿ ಮಹಂತೇಶ್, ಗ್ರಾ.ಪಂ. ಉಪಾಧ್ಯಕ್ಷ ಬಿ.ಮಂಜುನಾಥ್, ಸದಸ್ಯರಾದ ಜಯಮ್ಮ, ನವ್ಯಶ್ರೀ, ಮೋಹನ್ ಕುಮಾರು,ಹೆಚ್. ಎಸ್.ಪ್ರಕಾಶ್, ಪ್ರೇಮಾ, ಮಂಜಣ್ಣ, ಕೆ.ಎನ್.ಮಹಾಲಕ್ಷ್ಮಿ, ಬಿಸಿ.ಲಕ್ಷ್ಮಿ ಜಯರಾಮಯ್ಯ,ಕೆ.ವಿನಯ್ ಕುಮಾರು, ಸಿ.ಕೆ.ಸುಮಾ, ಚಂದ್ರಶೇಖರ್,ಕಾರ್ಯದರ್ಶಿ ಯಶೋಧಮ್ಮ ಇತರರು ಇದ್ದರು.

# ಜನಪದ ಸಂಸ್ಕೃತಿ ಕಾರ್ಯಕ್ರಮ

**ಚಾಮರಾಜನಗರ:** ಪ್ರಸಾರ ಭಾರತಿ ಹಾಗೂ ಆಕಾಶವಾಣಿ ಮೈಸೂರು ಎಫ್.ಎಂ 100.6 ಸಹಯೋಗದಲ್ಲಿ ಮೈಸೂರು ಆಕಾಶವಾಣಿ-90ರ ಅಂಗವಾಗಿ ನಮ್ಮ ಜಾನಪದ “ಚಾಮರಾಜನಗರದ ಜನಪದ ಸಂಸ್ಕೃತಿ” ಮಾತು-ಹಾಡು-ಕುಣಿತ ಕಾರ್ಯಕ್ರಮವನ್ನು ಜನವರಿ 17ರಂದು ಬೆಳಿಗ್ಗೆ 10 ಗಂಟೆಗೆ ನಗರದ ಜೆ.ಎಸ್.ಎಸ್ ಶಿಕ್ಷಣ ಸಂಸ್ಥೆ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಸಂಸದ ಸುನೀಲ್ ಬೋಸ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ದೂರದರ್ಶನ (ದಕ್ಷಿಣ ವಲಯ) ಮತ್ತು ಆಕಾಶವಾಣಿ (ವಿ.ನಿ) ವಲಯ ಮುಖ್ಯಸ್ಥರಾದ ಅನಿಲ್ ಕುಮಾರ್ ಮಂಗಲಗಿ ಅವರು ಅತಿಥಿಗಳಾಗಿ ಪಾಲ್ಗೊಳ್ಳುವರು. ಮೈಸೂರು ಆಕಾಶವಾಣಿ ಉಪ ನಿರ್ದೇಶಕರಾದ ಎಸ್.ಎಸ್. ಉಮೇಶ್ ಅವರು ಅಧ್ಯಕ್ಷತೆ ವಹಿಸುವರು.

ಮೈಸೂರು ಆಕಾಶವಾಣಿ ಸಹಾಯಕ ನಿರ್ದೇಶಕರಾದ ಅಬ್ದುಲ್ ರಶೀದ್, ಟಿ.ವಿ.ವಿದ್ಯಾಶಂಕರ್, ಸಹಾಯಕ ಅಭಿಯಂತ ರರಾದ ಪಿ.ಆನಂದನ್, ಜೆ.ಎಸ್.ಎಸ್ ಪದವಿ ಕಾಲೇಜಿನ ಪ್ರಾಂಶುಪಾಲರಾದ ಡಾ. ಎನ್.ಎಂ. ಮಹದೇವಸ್ವಾಮಿ ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು. ಬೆಳಿಗ್ಗೆ 11 ಗಂಟೆಗೆ ವಿವಿಧ ವಿಷಯನ್ನೊಳಗೊಂಡ ಮಾತು-ಗೋಷ್ಠಿ ನಡೆಯಲಿದೆ. ಸಾಹಿತಿಗಳಾದ ಡಾ. ಕೃಷ್ಣಮೂರ್ತಿ ಅವರು ಧಾರ್ಮಿಕ ಶ್ರದ್ಧಾ ಕೇಂದ್ರಗಳು ವಿಷಯ ಕುರಿತು ಮಾತನಾಡುವರು. ಡಾ. ಉಮೇಶ್ ಅವರು ಧ್ವನಿ ಪರೀಕ್ಷೆ ಪೂರ್ವ ಸಿದ್ಧತೆಗಳ ಕುರಿತು, ಪ್ರೊ. ಪುಷ್ಪಲತಾ ಅವರು ಜನಪದ ಕಲಾವಿದರ ಸ್ಥಿತಿಗತಿಗಳು ಕುರಿತು, ಡಾ. ಸಿ. ಮಾದೇಗೌಡ ಅವರು ಬುಡಕಟ್ಟು ಸಾಂಸ್ಕೃತಿಕ ಅನನ್ಯತೆ ಕುರಿತು, ಮಂಜು ಕೋಡಿಉಗನೆ ಅವರು ಜನಪದ ಕಾವ್ಯಗಳ ಪ್ರಸ್ತುತತೆ ಕುರಿತು ಮಾತನಾಡುವರು. ಮಧ್ಯಾಹ್ನ 2.30 ಗಂಟೆಗೆ ಮಹದೇವಶೆಟ್ಟಿ ಮತ್ತು ಸಂಗಡಿಗರು ಮಂಟೇಸ್ವಾಮಿ ಕಾವ್ಯ, ಸಿ.ಎಂ ನರಸಿಂಹಮೂರ್ತಿ ಮತ್ತು ಸಂಗಡಿಗರು ಬಿಳಿಗಿರಿರಂಗಸ್ವಾಮಿ ಹಾಡು, ನಿಟ್ರೆ ಮಹದೇವಯ್ಯ ಮತ್ತು ಸಂಗಡಿಗರು ಮಾದೇಶ್ವರ ಕಾವ್ಯ, ರೇಚಂಬಳ್ಳಿ ಲಕ್ಷ್ಮಮ್ಮ ಮತ್ತು ಸಂಗಡಿಗರು ಸೋಬಾನೆ ಪದ ಹಾಡುವರು.

# ಬುದ್ಧ ದ್ಯಾನ ಮಂದಿರಕ್ಕೆ ಕಟ್ಟಡ ನೀಡುವಂತೆ ಮನವಿ



**ಮಾಲೂರು:** ತಾಲ್ಲೂಕಿನ ಮಡಿವಾಳ ಗ್ರಾಮದಲ್ಲಿ ಬುದ್ಧ ದ್ಯಾನ ಮಂದಿರಕ್ಕೆ ಕಟ್ಟಡವನ್ನು ನೀಡಬೇಕೆಂದು ಕದಸಂಸ ಅಂಬೇಡ್ಕರ್ ವಾದ ಸಂಘಟನೆ ಹಾಗೂ ಗ್ರಾಮಸ್ಥರು ತಹಶೀಲ್ದಾರ್ ಕೆ. ರಮೇಶ್ ಅವರಿಗೆ ಮನವಿ ಸಲ್ಲಿಸಿದರು

ಮಾಲೂರು ತಾಲ್ಲೂಕಿನಲ್ಲಿ ಕಸಬಾ ಹೋಬಳಿಯ ಮಡಿವಾಳ ಗ್ರಾಮದಲ್ಲಿ ಬುದ್ಧರ ಅನುಯಾಯಿಗಳು ಸಾಕ?ಟ್ಟಿ ಇದ್ದು ಅವರಿಗೆ ಬುದ್ಧದ್ಯಾನ ಮತ್ತು ಪ್ರಾರ್ಥನೆ ಮಾಡಲು ಒಂದು ಕಟ್ಟದ ಅವಶ್ಯಕತೆ ಇರುತ್ತದೆ ತಾವುಗಳು ಈಗಾಗಲೇ ಒಂದು ಸಾರ್ವಜನಿಕ
ಗ್ರಂಥಾಲಯವಿದ್ದು ಅದನ್ನು ಈಗ ನೂತನ ಕಟಡ ನಿರ್ಮಾಣ ಮಾಡಿ ಅದಕ್ಕೆ ವರ್ಗಾವಣೆ
ಮಾಡಿರುತ್ತಾರೆ. ಹಳೆಯ ಕಟ್ಟಡವು ಖಾಲಿಯಿದ್ದು, ಖಾಲಿ ಇರುವ ಕಟ್ಟಡವನ್ನು ನಮಗೆ ಬುದ್ದದ್ಯಾನ ಮಂದಿರ ಮಾಡಲು ನೀಡಬೇಕೆಂದು ಕರ್ನಾಟಕ ದಲಿತ ಸಂಘ?ರ್ಷ ಸಮಿತಿ (ಅಂಬೇಡ್ಕರ್ ವಾದ) ಸಂಘಟನೆ ಹಾಗೂ ಗ್ರಾಮಸ್ಥರು ಮನವಿ ನೀಡಿದರು.

ಈ ಸಂದರ್ಭದಲ್ಲಿ ಕದಸಂಸ ಅಂಬೇಡ್ಕರ್ ವಾದ ಜಿಲ್ಲಾ ಸಂಘಟನಾ ಸಂಚಾಲಕ ಲಕ್ಕೂರು ವೆಂಕಟೇಶ್, ತಾಲ್ಲೂಕು ಸಂಘಟನಾ ಸಂಚಾಲಕ ಅಗ್ರಹಾರ ಬಾಬು ಮಡಿವಾಳ ಶ್ರೀನಿವಾಸ್, ತಿಮ್ಮರಾಜು, ಶಶಿಕುಮಾರ್ ಸೇರಿದಂತೆ ಹಲವಾರು ಮುಖಂಡರು ಹಾಜರಿದ್ದರು.

# ಅಂಗವೈಕಲ್ಯವಿದ್ದರೂ ದೇವರು ವಿಶೇಷ ಕೌಶಲ್ಯಗಳನ್ನು ಸೃಷ್ಟಿಸಿರುತ್ತಾನೆ: ಹೇಮಾವತಿ



**ಶಿಡ್ಲಘಟ್ಟ:** ಅಂಗವೈಕಲ್ಯವಿದ್ದರೂ ದೇವರು ವಿಶೇಷ ಕೌಶಲ್ಯಗಳನ್ನು ಸೃಷ್ಟಿಸಿರುತ್ತಾನೆ. ಅವುಗಳನ್ನು ಅರಿತು ಜಾಗೃತಗೊಳಿಸಿಕೊಂಡು ಮುನ್ನುಗ್ಗಬೇಕು. ಸರ್ಕಾರದ ಸವಲತ್ತುಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ತಾಲ್ಲೂಕು ಪಂಚಾಯತಿ ಇ.ಒ.ಹೇಮಾವತಿ ತಿಳಿಸಿದರು.

ನಗರದ ಸ್ತ್ರೀಶಕ್ತಿ ಭವನದಲ್ಲಿ ಎಸ್‌ಸಿಐ ನವಜೀವನ ಸೇವಾ ಸಂಘ, ದಿ ಅಸೋಸಿಯೇಷನ್ ಆಫ್ ಪೀಪಲ್ ವಿತ್ ಡಿಸೆಬಿಲಿಟಿ, ಎಚ್‌ಸಿಎಲ್ ಫೌಂಡೇಷನ್, ಜಿಲ್ಲಾ ವಿಶೇಷಚೇತನ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಹಾಗೂ ಶಿಡ್ಲಘಟ್ಟದ ಎಂಆರ್. ಡಬ್ಲ್ಯು, ವಿ.ಆರ್. ಡಬ್ಲ್ಯೂ ಸಹಯೋಗದಲ್ಲಿ ವಿಶ್ವ ಅಂಗವಿಕಲರ ದಿನಾಚರಣೆ ಹಾಗೂ ಸಾಧನಾ ಸಲಕರಣೆ ವಿತರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಅನೇಕ ಅಂಗವಿಕಲರು ಹಲವಾರು ಕ್ಷೇತ್ರಗಳಲ್ಲಿ ಸಾಧನೆ ಮಾಡಿದ್ದಾರೆ ಅಂತಹ ಸಾಧಕರ ಜೀವನವನ್ನು ಮಾದರಿಯಾಗಿ ಅನುಸರಿಸಿ, ಕೀಳರಿಮೆ ತೊರೆದು ಉತ್ತಮವಾದುದನ್ನು ಸಾಧಿಸಲು ಶ್ರಮಿಸಬೇಕು ಎಂದರು.

ನವಜೀವನ ಸೇವಾ ಸಂಘದ ಅಧ್ಯಕ್ಷ ಎನ್.ಮುನಿರಾಜು ಮಾತನಾಡಿ,ತಾಲ್ಲೂಕಿನ ಹೃದಯಭಾಗದಲ್ಲಿ ಭವನ ನಿರ್ಮಿಸಿಕೊಡಬೇಕು. ಕನಿಷ್ಠ ಮೂರು ತಿಂಗಳಿಗೊಮ್ಮೆ ಕುಂದುಕೊರತೆ ಸಭೆ ನಡೆಸಬೇಕು,ಅಂಗವಿಕಲರಿಗೆ ವ್ಯಾಯಾಮ ತರಬೇತಿ ಕೇಂದ್ರವನ್ನು ಸ್ಥಾಪನೆ ಮಾಡಬೇಕೆಂದು ಹೇಳಿದರು.

ತಾಲ್ಲೂಕು ಪಂಚಾಯತಿ ಹಾಗೂ ಗ್ರಾಮ ಪಂಚಾಯತಿಗಳಲ್ಲಿ ಯಾರ್ಂಪ್ ಮತ್ತು ಅಂಗವಿಕಲರಿಗೆ ಅನುಕೂಲವಾಗುವಂತೆ ವೈಜ್ಞಾನಿಕವಾಗಿ ಶೌಚ ಗೃಹಗಳನ್ನು ನಿರ್ಮಿಸಿಕೊಡಬೇಕೆಂದರು.

ಇದೇ ವೇಳೆ ಅಂಗವಿಕಲರಿಗೆ ಗಾಲಿಕುರ್ಚಿ,ವಾಕರ್, ಕ್ರಚ್ಚಸ್, ವಾಕಿಂಗ್ ಸ್ಟಿಕ್, ನೋಟ್‌ಪುಸ್ತಕಗಳು ಹಾಗೂ ಬೆನ್ನುಹುರಿ ಅಪಘಾತಕ್ಕೆ ಒಳಗಾದವರಿಗೆ ದಿನನಿತ್ಯ ಬಳಸುವ ಔಷಧ ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ತಾಲ್ಲೂಕು ವೈದ್ಯಾಧಿಕಾರಿ ಡಾ.ವೆಂಕಟೇಶಮೂರ್ತಿ, ಮಹಿಳಾ ಮತ್ತು ಮಕ್ಕಳ ಇಲಾಖಾಧಿಕಾರಿ ನೌತಾಜ್ ಹಾಜರಿದ್ದರು.

# ನಾಗಮಂಗಲ ಕಾರ್ಯನಿರತ ಪತ್ರಕರ್ತರ ಸಂಘಕ್ಕೆ ತಾಲ್ಲೂಕು ಮಟ್ಟದ ಪ್ರಶಸ್ತಿ



**ನಾಗಮಂಗಲ:** ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಈ ಬಾರಿ ಉತ್ತಮ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಕಾರ್ಯ ಚಟುವಟಿಕೆ ಮಾಡಿರುವ ಸಂಘಗಳಿಗೆ ಪ್ರಶಸ್ತಿ ಪ್ರದಾನ ಮಾಡುತ್ತಿದ್ದು ಪ್ರಥಮವಾಗಿ ಈ ಬಾರಿ ಮಂಡ್ಯ ಜಿಲ್ಲೆ ನಾಗಮಂಗಲ ತಾಲ್ಲೂಕು ಕಾರ್ಯನಿರತ ಪತ್ರಕರ್ತರ ಸಂಘಕ್ಕೆ ಉತ್ತಮ ತಾಲ್ಲೂಕು ಮಟ್ಟದ ಪ್ರಶಸ್ತಿಗೆ ಭಾಜನವಾಗಿದೆ.

ನಾಗಮಂಗಲ ತಾಲ್ಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷರಾಗಿರುವ ಸೀತಾರಾಮ್ ರವರು ಸಂಘದ ಕಾರ್ಯ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಕೊಂಡು ಸಂಘದ ಕಾರ್ಯಕಾರಿ ಮಂಡಳಿಯ ಜೊತೆಗೂಡಿ ಕಾರ್ಯಕ್ರಮಗಳನ್ನ ಅನು?ನ ತರುವ ಜೊತೆಗೆ ಸಂಘದ ಸದಸ್ಯ ಜೊತೆಗೂಡಿ ಸಂಘದ ಅಭಿವೃದ್ಧಿಗೆ ಮುನ್ನುಡಿ ಬರೆದಿರುವ ಪ್ರಯತ್ನವೇ ರಾಜ್ಯಮಟ್ಟದ ತಾಲೂಕು ಉತ್ತಮ ಸಂಘದ ಪ್ರಶಸ್ತಿಗೆ ಆಯ್ಕೆಯಾಗಿರುವುದು ಸಂತಸವಾಗಿದೆ.

ತಾಲ್ಲೂಕು ಮಟ್ಟದ ಪ್ರಶಸ್ತಿಗೆ ಆಯ್ಕೆ ಕಾರ್ಯಕಾರಿ ಸಮಿತಿ ರಾಜ್ಯಮಟ್ಟದ ಪದಾಧಿಕಾರಿಗಳು ಜಿಲ್ಲಾಮಟ್ಟದ ಪದಾಧಿಕಾರಿಗಳಿಗೂ ನಾಗಮಂಗಲ ತಾಲೂಕು ಪತ್ರಕರ್ತರ ಸಂಘದ ಸದಸ್ಯರ ಅಭಿನಂದನೆಗಳು.

# ಸಾಮಾಜಿಕ ಮಾಧ್ಯಮಗಳಿಂದ ಆರೋಗ್ಯ ಸಮಸ್ಯೆ ಹೆಚ್ಚು

**ಶಿಡ್ಲಘಟ್ಟ:** ಸಾಮಾಜಿಕ ಮಾಧ್ಯಮಗಳ ಬಳಕೆಯಿಂದ ದೈಹಿಕ ಮತ್ತು ಮಾನಸಿಕ ಆರೋಗ್ಯ ಸಮಸ್ಯೆಗಳು ಹೆಚ್ಚಾಗುತ್ತಿರುವುದು ಆತಂಕದ ವಾತಾವರಣ ನಿರ್ಮಾಣವಾಗಿದೆ ಎಂದು ಪ್ರಗತಿ ಪರ ತಂತ್ರಜ್ಞ ರೈತ ಹಾಗು ಜೆಡಿಎಸ್ ಮುಖಂಡ ಬಿ.ಎನ್. ಸಚಿನ್ ರವರು ತಿಳಿಸಿದರು.

ತಾಲ್ಲೂಕಿನ ತುಮ್ಮನಹಳ್ಳಿ ಗ್ರಾ.ಪಂ. ವ್ಯಾಪ್ತಿಯ ಕನ್ನಮಂಗಲ ಗ್ರಾಮದ ಬಳಿ ಪ್ರಾರಂಭವಾದ ಎರಡು ದಿನಗಳ ಸುಭಾ? ಕ್ರಿಕೆಟ್ ಟೂರ್ನಿಯ ರಾಜ್ಯ ಮಟ್ಟದ ಪಂದ್ಯಾವಳಿಗೆ ಚಾಲನೆ ನೀಡಿದ ಬಳಿಕ ಅವರು ಮಾತನಾಡಿದರು.

ಚಿಕ್ಕ ವಯಸ್ಸಿನಲ್ಲಿಯೇ ಹೃದಯಾಘಾತ ಸೇರಿದಂತೆ ದೈಹಿಕ ಸಮಸ್ಯೆಗಳ ಪ್ರಮಾಣ ಹೆಚ್ಚುತ್ತಿರುವುದಕ್ಕೆ ಯುವಕರು ಹೊಲ, ಗದ್ದೆ ಹಾಗು ತೋಟಗಳಲ್ಲಿ ಶ್ರಮದ ಕೆಲಸಲ್ಲಿ ತೊಡಗಿಕೊಳ್ಳದೆ ದುಡಿಯುವುದು ಕಡಿಮೆಯಾಗಿದ್ದು ಶಾಲಾ-ಕಾಲೇಜುಗಳಲ್ಲೂ ದೈಹಿಕ ಶ್ರಮದ ಕೊರತೆಯಾಗಿದೆ ಎಂದು ಹೇಳಿದರು.

ಯುವಕರು ದೈಹಿಕ ಕಸರತ್ತು,ಗ್ರಾಮೀಣ ಆಟಗಳಿಂದ ದೂರವಾಗುತ್ತಿರುವುದು ಗಂಭೀರದ ವಿ?ಯ ಎಲ್ಲರೂ ಆರೋಗ್ಯ ಕಾಳಜಿ ವಹಿಸಬೇಕು ಎಂದು ನುಡಿದರು.

ಯುವಕರು ಮಾನಸಿಕ ಮತ್ತು ದೈಹಿಕವಾಗಿ ಸದೃಢರಾಗಿರುವಾಗ ಮಾತ್ರ ಉತ್ತಮ ಚಿಂತನೆ ಹಾಗು ಚಟುವಟಿಕೆಗಳಲ್ಲಿ ತೊಡಗಿಕೊಳ್ಳಲು ಸಾಧ್ಯ,ಇದರ ಮೂಲಕ ಉತ್ತಮ ಸಮಾಜ ನಿರ್ಮಾಣ ಸಾಧ್ಯ ಎಂದರು. ಕನ್ನಮಂಗಲದ ಯುವಕರು ಕ್ರಿಕೆಟ್ ಟೂರ್ನಿಯ ಮೂಲಕ ಒಗ್ಗಟ್ಟಿನ ಸಂದೇಶ ನೀಡಿದ್ದಾರೆ ಎಂದು ಪ್ರಶಂಸಿದರು.

ರೈತ ಸಂಘದ ರಾಜ್ಯ ಕಾರ್ಯಾಧ್ಯಕ್ಷ ಭಕ್ತರಹಳ್ಳಿ ಬೈರೇಗೌಡ ಮಾತನಾಡಿ, ಬಯಲು ಸೀಮೆಯ ರೈತರ ಮಕ್ಕಳು ಕ್ರಿಕೆಟ್ ಸೇರಿದಂತೆ ವಿವಿಧ ಕ್ರೀಡೆಗಳಲ್ಲಿ ರಾಜ್ಯ, ರಾಷ್ಟೀಯ ಮತ್ತು ಅಂತರಾಷ್ಟೀಯ ಮಟ್ಟದಲ್ಲಿ ಹೆಸರು ಮಾಡುತ್ತಿದ್ದಾರೆ ಎಂಬುದು ಹೆಮ್ಮೆಯ ವಿಷಯ ಎಂದರು.

ಈ ಸಂದರ್ಭದಲ್ಲಿ ಕೃಷಿ ಪಂಡಿತ ಪ್ರಶಸ್ತಿ ವಿಜೇತ ಹುಜಗೂರು ರಾಮಯ್ಯ, ರೈತ ಸಂಘದ ತಾದೂರು ಮಂಜುನಾಥ್, ವೀರಾಪುರ ಮುನಿನಂಜಪ್ಪ,ರಮೇಶ, ಬಸವರಾಜ್, ಕೆಂಪಣ್ಣ,ವಸಂತ್ ಕುಮಾರ್, ಶ್ರೀನಿವಾಸರಾವ್, ಕಿಷನ್ ಇನ್ನಿತರರು ಹಾಜರಿದ್ದರು.



# ರಾಜ್ಯ ಮಟ್ಟದ ಪ್ರಶಸ್ತಿಗೆ ಸುನೀಲ್ ಆಯ್ಕೆ

**ಮಾಲೂರು:** ಕರ್ನಾಟಕ ರಾಜ್ಯ ಯುವ ಸಂಘಗಳ ಒಕ್ಕೂಟ 2024-25ನೇ ಸಾಲಿನ ರಾಜ್ಯ ಯುವ ಪ್ರಶಸ್ತಿಗೆ ಮಾಲೂರಿನ ನಾಗೊಂಡಹಳ್ಳಿ ಸುನೀಲ್ ಆಯ್ಕೆಯಾಗಿದ್ದಾರೆ.



ಜ.18ರಂದು ದಕ್ಷಿಣ ಕನ್ನಡ ಜಿಲ್ಲೆಯ ಸವಣೂರಿನಲ್ಲಿ ಪ್ರಶಸ್ತಿ ಪ್ರಧಾನ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಮಾಲೂರು ತಾಲ್ಲೂಕಿನ ನಾಗೊಂಡಹಳ್ಳಿ ಸುನಿಲ್ ಪ್ರಸ್ತುತ ಶಿರಾ ನಗರದ ಪ್ರತಿಷ್ಠಿತ ಪ್ರೆಸಿಡೆನ್ಸಿ ಪದವಿ ಪೂರ್ವ ಕಾಲೇಜಿನಲ್ಲಿ ಉಪನ್ಯಾಸಕನಾಗಿ ಸೇವೆ ಸಲ್ಲಿಸುತ್ತಾ ಸಾಹಿತ್ಯ ಕೃಷಿಯಲ್ಲಿ ತೊಡಗಿಸಿಕೊಂಡು ಈಗಾಗಲೇ ಕೃತಿಗಳನ್ನು ಪ್ರಕಟಗೊಳಿಸಿದ್ದಾರೆ. ನಾಗೊಂಡಹಳ್ಳಿ ಸುನೀಲ್ ಅವರನ್ನು ಪ್ರೆಸಿಡೆನ್ಸಿ ಸಮೂಹ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷರು ಹಾಗೂ ವಿಧಾನ ಪರಿ?ತ್ತಿನ ಸದಸ್ಯ ಚಿದಾನಂದ್ ಎಂ ಗೌಡ ಮತ್ತು ಕಾಲೇಜಿನ ಪ್ರಾಂಶುಪಾಲ ಸುಬ್ರಹ್ಮಣ್ಯ ಡಿ.ಕೆ, ಕವಿ,ಸಾಹಿತಿ ನ.ಗುರುಮೂರ್ತಿ ಹಾಗೂ ಮಾಲೂರಿನ ಕನ್ನಡಾಭಿಮಾನಿಗಳು, ಸಾಹಿತಿಗಳು, ಸಂಘ ಸಂಸ್ಥೆಗಳು ಅಭಿನಂದಿಸಿದ್ದಾರೆ.

# ಫೆ.19ರಿಂದ ರಾಷ್ಟ್ರೀಯ ಸಮ್ಮೇಳನ

**ಚಾಮರಾಜನಗರ:** ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು ಇಕೊಟೂರಿಸಂ: ಅರ್ನೆಸ್ಸಿಂಗ್ ಟ್ರಾವೆಲ್ ಟೂ ಡಿಸ್ಕವರ್ ನೇಚರ್, ಪ್ರಮೋಟ್ ಕನ್ಸರ್ವೆಷನ್ ಅಂಡ್ ಸಪೋರ್ಟ್ ಸುಸ್ಟೈನಬಲ್ ಡೆವಲಪ್‌ಮೆಂಟ್ ವಿಷಯ ಕುರಿತು ಫೆಬ್ರವರಿ 19 ರಿಂದ 21 ರವರೆಗೆ 3 ದಿನಗಳ ರಾಷ್ಟ್ರೀಯ ಸಮ್ಮೇಳನವನ್ನು ಅಕಾಡೆಮಿಯ ಕಚೇರಿಯಲ್ಲಿ ಆಯೋಜಿಸಿದೆ.

ವಿವಿಧ ಪ್ರತಿಷ್ಠಿತ ಸಂಸ್ಥೆಗಳ ಹೆಸರಾಂತ ವಿಜ್ಞಾನಿಗಳು ತಾಂತ್ರಿಕ ಉಪನ್ಯಾಸವನ್ನು ನೀಡಲಿದ್ದಾರೆ. ಯುವ ವಿಜ್ಞಾನಿಗಳು ಮತ್ತು ಸಂಶೋಧನಾ ವಿದ್ಯಾರ್ಥಿಗಳು ರಿಸರ್ಚ್ ಪೇಪರ್ ಪ್ರಸೆಂಟೇಷನ್ ಮಂಡಿಸಲು ಅವಕಾಶ ಕಲ್ಪಿಸಲಾಗಿದೆ. ಆಯ್ಕೆಯಾದ ರಿಸರ್ಚ್ ಪೇಪರ್ ಗಳಿಗೆ ನಗದು ಬಹುಮಾನ ನೀಡಲಾಗುವುದು.

ಸಮ್ಮೇಳನದಲ್ಲಿ ಸ್ನಾತಕೋತ್ತರ ವಿಜ್ಞಾನ ವಿದ್ಯಾರ್ಥಿಗಳು, ಸಂಶೋಧನಾ ವಿದ್ಯಾರ್ಥಿಗಳು, ಪ್ರಾಧ್ಯಾಪಕರು, ಯುವ ವಿಜ್ಞಾನಿಗಳು, ಶೈಕ್ಷಣಿಕ ತಜ್ಞರು, ಯುವ ಉದ್ಯಮದಾರರು ಭಾಗವಹಿಸಬಹುದಾಗಿದೆ. ಆಸಕ್ತ ಪ್ರತಿನಿಧಿಗಳು ಫೆ.12ರೊಳಗೆ **(Googleform- https://forms.gle/WCW9krCt8sGQUP55A** ಮೂಲಕ ನೊಂದಾಯಿಸಿಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ಅಕಾಡೆಮಿಯ ಅಧಿಕಾರಿಗಳನ್ನು (ಮೊ.ಸಂ 9845258894, 9686449019 ಮತ್ತು 9620767819) ಸಂಪರ್ಕಿಸಬಹುದು ಅಥವಾ **https://kstacademy.in**ವೀಕ್ಷಿಸ ಬಹುದು ಎಂದು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನಅಕಾಡೆಮಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಎ.ಎಂ. ರಮೇಶ್ ತಿಳಿಸಿದ್ದಾರೆ.

# ಶ್ರೀ ಸೀತಾರಾಮಲಕ್ಷ್ಮಣ ಆಂಜನೇಯಸ್ವಾಮಿ ಪಲ್ಲಕಿ



**ಶಿಡ್ಲಘಟ್ಟ:** ತಾಲ್ಲೂಕಿನ ಮೇಲೂರು ಗ್ರಾಮದಲ್ಲಿ ಮಕರ ಸಂಕ್ರಾಂತಿ ಪ್ರಯುಕ್ತ ಪುರಾತನ ಕಾಲದಿಂದಲೂ ನಡೆದುಕೊಂಡು ಬಂದಿರುವ ಶ್ರೀಸೀತಾರಾಮಲಕ್ಷ್ಮಣ ಆಂಜನೇಯಸ್ವಾಮಿ ಪಲ್ಲಕ್ಕಿ ಉತ್ಸವ ನಡೆಯಿತು. ಶ್ರೀರಾಮ ಭಜನೆಮಂಡಳಿಯವರು ಧನುರ್ಮಾಸದ ಒಂದು ತಿಂಗಳ ಕಾಲ ಮುಂಜಾನೆ 4-30 ಗಂಟೆಗೆ ಊರಿನ ರಾಜ ಬೀದಿಗಳಲ್ಲಿ ಶ್ರೀರಾಮಚಂದ್ರರ ರಾಮ ನಾಮ ಧ್ಯಾನ ಮಾಡುತ್ತ ಭಜನೆ ಮಾಡಿಕೊಂಡು ಊರು ತುಂಬಾ ಭಕ್ತಿ ವಾತಾವರಣ ತುಂಬಿರುತ್ತಾರೆ,ಮಕರ ಸಂಕ್ರಾಂತಿ ದಿನ ಶ್ರೀಸೀತಾರಾಮಲಕ್ಷಣ ಆಂಜನೇಯಸ್ವಾಮಿಯ ಪಲ್ಲಕ್ಕಿಯೊಂದಿಗೆ ಭಜನೆ ಮಾಡುತ್ತಾರೆ.

ಮಹಿಳೆಯರು ಮನೆ ಮುಂದೆ ಸಾರಿಸಿ ರಂಗೋಲಿ ಹಾಕಿ ಉತ್ಸವ ಮೂರ್ತಿಗಳಿಗೆ ಪೂಜೆ ಸಲ್ಲಿಸಿದರು, ಸುತ್ತ ಮುತ್ತಲಿನ ಊರುಗಳಿಂದ ನೂರಾರು ಭಕ್ತಾದಿಗಳು ಭಾಗವಹಿಸಿ ಸ್ವಾಮಿಯವರ ಕೃಪೆಗೆ ಪಾತ್ರರಾದರು, ಅನ್ನದಾಸೋಹ ಏರ್ಪಡಿಸಲಾಗಿತ್ತು.

ದೇವತಾ ಕಾರ್ಯದಲ್ಲಿ ನಾರಾಯಣಸ್ವಾಮಿ, ಕೇಶವ, ನಾಗರಾಜ, ರವಿ, ಮಂಜುನಾಥ, ಡಮರೇಶ್ ಹಾಗೂ ಗ್ರಾಮದ ಅನೇಕ ಭಕ್ತಾದಿಗಳು ಪಾಲ್ಗೊಂಡಿದ್ದರು

# ಸಂಪ್ರಾದಾಯ ಉಳಿಕೆ ರಾಸುಗಳನ್ನು ಸಾಕಿ



**ಮಾಲೂರು:** ಶೋಕಿಗೆ ರಾಸುಗಳನ್ನು ಸಾಕಾಣಿಕೆ ಮಾಡದೇ ಸಂಪ್ರದಾಯವನ್ನು ಉಳಿಸಲು ರಾಸುಗಳನ್ನು ಸಾಕಾಣಿಕೆ ಮಾಡಿ ಹಿರಿಯರ ಪರಂಪರೆಯನ್ನು ಉಳಿಸಬೇಕು ಎಂದು ಶಾಸಕ ಕೆವೈ ನಂಜೇಗೌಡ ಹೇಳಿದ್ದಾರೆ.

ತಾಲ್ಲೂಕಿನ ತೊರ್ನಹಳ್ಳಿ ಗ್ರಾಮದ ಶ್ರೀ ಸಫಲಾಂಭ ದೇವಿ, ಶ್ರೀ ಭೀಮೇಶ್ವರಸ್ವಾಮಿ ಜಾತ್ರೆಯಲ್ಲಿ ಭಾಗವಹಿಸಿದ್ದ ರಾಸುಗಳಿಗೆ ಶಾಸಕ ಕೆ ವೈ ನಂಜೇಗೌಡ ಬಹುಮಾನ ವಿತರಿಸಿ ಮಾತನಾಡಿದರು

ಇತಿಹಾಸ ಪ್ರಸಿದ್ಧ ಶ್ರೀ ಸಫಲಾಂಭ ದೇವಿಯ ಜಾತ್ರಾ ಮಹೋತ್ಸವದಲ್ಲಿ ಅದ್ದೂರಿಯಾಗಿ ನಡೆದು ಕೊಂಡು ಬಂದಿದೆ ದೊಡ್ಡ ದೊಡ್ಡ ರಾಸುಗಳನ್ನು ಜಾತ್ರೆ ಭಾಗಿಯಾಗಿತ್ತು ಜಾತ್ರೆಗೆ ಬರುವ ರಾಸುಗಳಿಗೆ ಸಾರ್ವಜನಿಕರಿಗೆ ಮೂಲ ಸೌಕರ್ಯ ಒದಗಿಸಲು ಇಲಾಖೆಗಳಿಗೆ ಸೂಚಿಸಲಾಗಿಯಿತು,

ಇತ್ತೀಚೆಗೆ ರಾಸುಗಳ ಜಾತ್ರೆಗಳು ಕಣ್ಮರೆಯಾಗಿವೆ ಕ್ಷೇತ್ರನಹಳ್ಳಿ ವೆಂಕಟೇಶ್ ಗೌಡರು ದುಬಾರಿ ಬೆಲೆಯ ರಾಸುಗಳನ್ನು ಅದ್ದೂರಿಯಾಗಿ ಮೆರವಣಿಗೆ ನಡೆಸಿ 16 ಲಕ್ಷ 24 ಸಾವಿರ ರೂ.ಗೆ ಮಾರಾಟಮಾಡಿದ್ದಾರೆ, ಜಾತ್ರೆಗೆ ಹೊರ ರಾಜ್ಯಗಳಿಂದ ಹರಿದು ಬಂದಿದ್ದ ಭಕ್ತರಿಗೆ ನಮ್ಮ ಕಾಂಗ್ರೆಸ್ ಮುಖಂಡರು ಅನ್ನಸಂತರ್ಪಣೆ ಏರ್ಪಡಿಸಲಾಗಿತ್ತು ಸಫಲಾಂಭ ದೇವಿಯ ಇತಿಹಾಸವನ್ನು ಮುಂದುವರೆಸಿಕೊಂಡು ಬಂದಿದ್ದಾರೆ. ಮುಂದಿನ ದಿನಗಳಲ್ಲಿ ಇನ್ನೂ ಅದ್ದೂರಿಯಾಗಿ ಆಚರಿಸಲು ಮುಂದಾಗುವುದಾಗುವುದಾಗಿ ಹೇಳಿದರು.

ಜಾತ್ರೆಯಲ್ಲಿ ಭಾಗಿಯಾದ ರಾಸುಗಳಿಗೆ ಟೇಕಲ್ ನ ಕ್ಷೇತ್ರನಹಳ್ಳಿ ವೆಂಕಟೇಶ್ ಗೌಡ ಅವರು ಹಳ್ಳಿಕಾರ್ ಎತ್ತುಗಳಿಗೆ ಬಹುಮಾನವಾಗಿ ಮೂರು ಗ್ರಾಂ ಬೆಳ್ಳಿ ಹಾಗೂ ಪ್ರಮಾಣ ಪತ್ರ ಪಡೆದರು. ಉತ್ತಮ ರಾಸುಗಳ ಪ್ರಶಸ್ತಿ ಬೆಂಗಳೂರು ಗ್ರಾಮಾಂತರ ಹೊಸಕೋಟೆ ತಾಲ್ಲೂಕಿನ ಕೊಳತೂರು ಗ್ರಾಮದ ಚಿಕ್ಕ ಸಲ್ಲಪ್ಪ. ಮುನಿಶಾಮಪ್ಪ ಎರಡು ಹಲ್ಲಿನ ಎತ್ತುಗಳು 2 ಗ್ರಾಂ ಚಿನ್ನ ಹಾಗೂ ಪ್ರಮಾಣ ಪತ್ರವನ್ನು ಶಾಸಕ ಕೆ ವೈ ನಂಜೇಗೌಡ ವಿತರಿಸಿದರು. ಶಾಸಕ ನಂಜೇಗೌಡರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ತೀರ್ಮಾನಿಸಲಾಗಿತ್ತು ಅದರಂತೆ ಬಹುಮಾನ ನೀಡಲಾಗುತ್ತಿದೆ. ಅಲ್ಲದೆ ಶೋಕಿಗೆ ರಾಸುಗಳನ್ನು ಸಾಕಾಣಿಕೆ ಮಾಡದೇ ಸಂಪ್ರಾದಾಯ ಕ್ಕೆ ಹಿರಿಯರ ಪರಂಪರೆಯನ್ನು ಉಳಿಸಲು ರಾಸುಗಳನ್ನು ಸಾಕಾಣಿಕೆ ಮಾಡಬೇಕು ಎಂದು ಹೇಳಿದರು,

ಈ ಸಂದರ್ಭದಲ್ಲಿ ತಹಶಿಲ್ದಾರ್ ಕೆ.ರಮೇಶ್, ಗ್ರಾ.ಪಂ ಅಧ್ಯಕ್ಷೆ ಅಶ್ವಥಮ್ಮರಾಮಯ್ಯ, ಯೋಜನಾ ಪ್ರಾಧಿಕಾರದ ಅಧ್ಯಕ್ಷ ನಹೀಮ್ , ಮುಜರಾಯಿ ಇಲಾಖೆಯ ಇಒ ಸೇಲ್ವಮಣಿ, ಮುಖಂಡರಾದ ಕ್ಷೇತ್ರನಹಳ್ಳಿ ವೆಂಕಟೇಶ್ ಗೌಡ, ದಿನ್ನಹಳ್ಳಿ ರಮೇಶ್, ಮುನಿಸ್ವಾಮಿ, ಪಿಡಿಒ ಸಿ.ಆರ್. ಗೌಡ, ಪೂಜಾರಿ ಮುನಿಯಪ್ಪ, ಬೈರನಹಳ್ಳಿ ಆನಂದ್, ಶಬ್ಬೀರ್, ನಾಗರಾಜ್, ತಂಬಿಹಳ್ಳಿ ನಾರಾಯಣಸ್ವಾಮಿ ಸೇರಿದಂತೆ ಹಲವಾರು ಅಧಿಕಾರಿಗಳು ಹಾಜರಿದ್ದರು.

# ಅಪೂರ್ಣಾವಸ್ಥೆಯಲ್ಲಿರುವ ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣ ತ್ವರಿತಗತಿಯಲ್ಲಿ ಪೂರ್ಣಗೊಳಿಸಿ




**ಚಾಮರಾಜನಗರ:** ಚಾಮರಾಜನಗರ ಸ್ಕೇಟಿಂಗ್ ಅಕಾಡೆಮಿ ಹಾಗೂ ರೆಹಬರ್ ಅಸೋಸಿಯೇ?ನ್ ವತಿಯಿಂದ ನಗರದ ಡಾ.ಬಿ.ಆರ್.ಅಂಬೇಡ್ಕರ್‌ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಮಟ್ಟದ ಸ್ಕೇಟಿಂಗ್ ಪಂದ್ಯಾವಳಿ ಸಮಾರೋಪ ಸಮಾರಂಭ ಇತ್ತೀಚೆಗೆ ನಡೆಯಿತು.

ಸಮಾರೋಪ ಸಮಾರಂಭದಲ್ಲಿ ವಿಜೇತರಿಗೆ ಬಹುಮಾನ ವಿತರಿಸಿದ ಜಿಲ್ಲಾ ನೆಟ್ ಬಾಲ್‌ಅಸೋಸಿಯೇ?ನ್ ಆಧ್ಯಕ್ಷ ವಿ.ಶ್ರೀನಿವಾಸ್ ಪ್ರಸಾದ್ ಮಾತನಾಡಿ, ಚಾಮರಾಜನಗರದಲ್ಲಿ ಇತ್ತೀಚೆಗೆ ಕ್ರೀಡಾಕೂಟಗಳು ಹೆಚ್ಚಿನ ಮಟ್ಟದಲ್ಲಿ ಅಯೋಜನೆ ಮಾಡುತ್ತಿರುವುದುಗಮನಾರ್ಹ ಸಂಗತಿ, ಪ್ರತಿಯೊಬ್ಬರಲ್ಲಿ ಒಂದೊಂದು ಪ್ರತಿಭೆಅಡಗಿದ್ದು, ಅವುಗಳ ಅನಾವರಣಕ್ಕೆ ಕ್ರೀಡಾಕೂಟಗಳು ಪ್ರೇರಣೆಯಾಗಿವೆ ಎಂದರು.

ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಸುಸಜ್ಜಿತವಾದ ಸ್ಕೇಟಿಂಗ್ ಅಂಕಣ ನಿರ್ಮಾಣ ಮಾಡಿಕೊಡಬೇಕು, ಕಬ್ಬಡಿ, ಷಟಲ್ ಬ್ಯಾಡ್ಮಿಂಟನ್, ವಾಲಿಬಾಲ್, ಖೊಖೋ, ಇತರೇ ದೊಡ್ಡಮಟ್ಟದ ಕ್ರೀಡಾಕೂಟಗಳು ಇಲ್ಲಿಯೇ ಆಯೋಜನೆ ಮಾಡುವಂತ ವ್ಯವಸ್ಥೆ, ಜಿಲ್ಲಾಡಳಿತ ಹಾಗೂ ಸರ್ಕಾರದಿಂದಆಗಬೇಕಿದೆ. ಅಪೂರ್ಣಾವಸ್ಥೆಯಲ್ಲಿರುವ ಅಂಬೇಡ್ಕರ್ ಜಿಲ್ಲಾಕ್ರೀಡಾಂಗಣವನ್ನು ಶೀಘ್ರದಲ್ಲೇ ಪೂರ್ಣಗೊಳಿಸಬೇಕು, ಕ್ರೀಡಾಪಟುಗಳಿಗೆ ಬೇಕಾದ ಮೂಲಸೌಲಭ್ಯ ಒದಗಿಸಲು ಸರ್ಕಾರ ಮುಂದಾಗಬೇಕುಎಂದು ಆಗ್ರಹಿಸಿದರು.

ಸಮಾರಂಭದಲ್ಲಿ ಕೌಶಲ್ಯಾಭಿವೃದ್ದಿ ಇಲಾಖೆಯಅನ್ಸರ್, ಕ್ರೀಡಾತರಬೇತುದಾರ ಶಿವು, ಎಂಇಟಿ ಪ್ರೌಢ ಶಾಲಾ ಮುಖ್ಯ ಶಿಕ್ಷಕ ಅಜೀಂ, ರೆಹಬರ್ ಸಂಸ್ಥೆ ಅಧ್ಯಕ್ಷ, ಸ್ಕೇಟಿಂಗ್‌ಕೋಚ್ ಫುರ್ಕಾನ್ ಪಾಷಾ, ಈಜುತರಬೇತುದಾರ ಮನು ಸೇರಿದಂತೆರೆಹಬರ್ ಸಂಸ್ಥೆ ಪದಾಧಿಕಾರಿಗಳು ಭಾಗವಹಿಸಿದ್ದರು.

# ಬೆಂಬಲ ಬೆಲೆ ಯೋಜನೆಯಡಿ ಖರೀದಿಗೆ: ಸಚಿವರ ಸೂಚನೆ




**ಬೆಂಗಳೂರು:** ಸಕಾಲದಲ್ಲಿ ಬೆಂಬಲ ಬೆಲೆಯೊಂದಿಗೆ ಆಹಾರ ಧಾನ್ಯಗಳು ಹಾಗೂ ಎಣ್ಣೆ ಕಾಳುಗಳ ಖರೀದಿಗೆ ಅಧಿಕಾರಿಗಳು ಕ್ರಮವಹಿಸಬೇಕು ಎಂದು ಕೃಷಿ ಸಚಿವ ಎನ್ ಚಲುವರಾಯಸ್ವಾಮಿ ಸೂಚನೆ ನೀಡಿದ್ದಾರೆ.

ಬೆಂಬಲ ಬೆಲೆಯೊಂದಿಗೆ ಕೃಷಿ ಉತ್ಪನ್ನಗಳ ಖರೀದಿ ಕುರಿತು ವಿಧಾನ ಸೌಧದ ಸಮಿತಿ ಕೊಠಡಿಯಲ್ಲಿ ನಡೆದ ಕೃಷಿ ಮತ್ತ ತೋಟಗಾರಿಕೆ ಉತ್ಪನ್ನಗಳ ಬೆಲೆ ಸ್ಥಿರೀಕರಣ ಸಚಿವ ಸಂಪುಟ ಉಪ ಸಮಿತಿ ಸಭೆಯ ಅಧ್ಯಕ್ಷತೆ ವಹಸಿ ಅವರು ಮಾತನಾಡಿದರು.

ಆಹಾರ ಮತ್ತು ನಾಗರೀಕರ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರಾದ ವಿ.ಮುನಿಯಪ್ಪ, ಸಹಕಾರ ಸಚಿವರಾದ ಕೆ.ಎನ್.ರಾಜಣ್ಣ, ಸಕ್ಕರೆ ಮತ್ತು ಕೃಷಿ ಉತ್ಪನ್ನ ಮಾರುಕಟ್ಟೆ ಸಚಿವರಾದ ಶಿವಾನಂದ ಪಾಟೀಲ್ ಅವರು ಸಹ ಪಾಲ್ಗೊಂಡಿದ್ದ ಈ ಸಭೆಯಲ್ಲಿ ಬೆಂಬಲ ಬೆಲೆ ಯೋಜನೆಗಳನ್ನು ರೈತರಿಗೆ ಸರಿಯಾದ ಸಮಯದಲ್ಲಿ ತಲುಪಿಸುವ ಮಾರ್ಗೋಪಾಯಗಳ ಕುರಿತು ಸುಧೀರ್ಘ ಚರ್ಚೆ ನಡೆಸಲಾಯಿತು.

ಸಂಬಂಧ ಪಟ್ಟ ಇಲಾಖೆ ಹಾಗೂ ನಿಗಮ ಮಂಡಳಿ ಅಧಿಕಾರಿಗಳು ಮೊದಲೇ ಪೂರ್ವ ಸಿದ್ದತೆ ಮಾಡಿಕೊಂಡು ಕೇಂದ್ರದಿಂದ ಅನುಮತಿ ಬಂದ ತಕ್ಷಣದಿಂದ ಖರೀದಿ ಪ್ರಾರಂಭ ಮಾಡಬೇಕು ಎಂದು ಎನ್ ಚಲುವರಾಯಸ್ವಾಮಿ ನರ್ದೇಶನ ನೀಡಿದರು.

ಬೆಂಬಲ ಬೆಲೆ ವ್ಯವಸ್ಥೆ, ಖರೀದಿ ಪ್ರಕ್ರಿಯೆ ಕುರಿತು ರೈತರಿಗೆ ಕಾಲಾಕಾಲಕ್ಕೆ ಮಾಹಿತಿ ನೀಡಿ ನೊಂದಣಿ ಮಾಡಿಸಿ ಎಂದು ಅವರು ತಿಳಿಸಿದರು .

ಇಲಾಖೆ, ನಿಗಮ ಮಂಡಳಿಗಳ ಅಧಿಕಾರಿಗಳ ನಡುವೆ ಸೂಕ್ತ ಸಮನ್ವಯ ಬೇಕು.ಅನಗತ್ಯ ಕಾರಣ ಹೇಳಿ ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ದ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಕೃಷಿ ಸಚಿವರು ಎಚ್ಚರಿಸಿದರು.

ಬೆಂಬಲ ಬೆಲೆಯೊಂದಿಗೆ ಆಹಾರ ಧಾನ್ಯಗಳ ಖರೀದಿ ಬಗ್ಗೆ ಸುದ್ದಿ ಮಾದ್ಯಮಗಳ ಮೂಲಕ,ವಿವಿಧ ಸ್ವರೂಪಗಳಲ್ಲಿ ರೈತರಿಗೆ ಅರಿವು ಮೂಡಿಸಬೇಕು. ಗ್ರಾಮ ಪಂಚಾಯಿತಿ ಹಂತದಲ್ಲಿಯೂ ಜಾಗೃತಿ ಚಟುವಟಿಕೆಗಳನ್ನು ನಡೆಸಬೇಕೆಂದು ಅವರು ಸೂಚಿಸಿದರು.

ಸಭೆಯಲ್ಲಿ ಹಿಂಗಾರು ಬಿಳಿ ಜೋಳ ಖರೀದಿಗೆ ಬೆಂಬಲ ಬೆಲೆ ಸೌಲಭ್ಯ ದೊರೆಯದೆ ಇರುವ ಬಗ್ಗೆ ಸಭೆಯಲ್ಲಿ ಹಾಜರಿದ್ದ ಸಚಿವರು ಪ್ರಸ್ತಾಪಿಸಿದರು. ಮುಂದಿನ ದಿನಗಳಲ್ಲಿ ಈ ಬಗ್ಗೆಯೂ ಗಮನ ಹರಿಸಿ ಸೂಕ್ತ ಕ್ರಮ ವಹಿಸುವಂತೆ ಕೃಷಿ ಸಚಿವರು ನಿರ್ದೇಶನ ನೀಡಿದರು.

ಹಿಂದೆ 1.5 ಲಕ್ಷ ಟನ್ ಗಳಿಗೆ ಸೀಮಿತವಾಗಿದ್ದ ಬೆಂಬಲ ಬೆಲೆಯೊಂದಿಗಿನ ಭತ್ತ ಖರೀದಿಯನ್ನು ರಾಜ್ಯ ಸರ್ಕಾರದ ಮನವಿಯ ಮೇರೆಗೆ 5 ಲಕ್ಷ ಟನ್ ಗಳಿಗೆ ಏರಿಕೆ ಮಾಡಿದ್ದು, ರೈತರು ಇದರ ಅನುಕೂಲವನ್ನು ಪಡೆದುಕೊಳ್ಳಬೇಕು. ಈ ಬಗ್ಗೆ ಕೃಷಿಕರಿಗೆ ವ್ಯವಸ್ಥಿತವಾಗಿ ಮಾಹಿತಿ ನೀಡಬೇಕೆಂದು ಎನ್.ಚಲುವರಾಯಸ್ವಾಮಿ ಹೇಳಿದರು.

2024-25ನೇ ಸಾಲಿನ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಎಫ್.ಎ.ಕ್ಯೂ ಗುಣಮಟ್ಟದ ಪ್ರಮುಖ ಕೃಷಿ ಉತ್ಪನ್ನಗಳ ಖರೀದಿ ಪ್ರಕ್ರಿಯೆಯ ಪ್ರಗತಿ ವಿವರದ ಬಗ್ಗೆ ಚರ್ಚಿಸಲಾಯಿತು

2024-25ನೇ ಸಾಲಿಗೆ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ತೊಗರಿಯನ್ನು ಖರೀದಿಸಲು ಆವರ್ತ ನಿಧಿಯಿಂದ ಹಣ ಬಿಡುಗಡೆ ಮಾಡುವ ಬಗ್ಗೆ ಕೃಷಿ ಮಾರಾಟ ಮಂಡಳಿಯಿಂದ ರೈತರಿಗೆ ವ್ಯಾಪಕವಾಗಿ ಯೋಜನೆಗಳ ಮಾಹಿತಿ ಒದಗಿಸಲು ಮಾಹಿತಿ ಶಿಕ್ಷಣ ಹಾಗೂ ಸಂವಹನ ಕಾರ್ಯಕ್ರಮಗಳಿಗೆ ಆವರ್ತನಿಧಿಯಿಂದ ವಾರ್ಷಿಕವಾಗಿ ರೂ.3.00 ಕೋಟಿಗಳನ್ನು ಉಪಯೋಗಿಸಿಕೊಳ್ಳುವ ಕುರಿತು ಸಹ ಸಭೆಯಲ್ಲಿ ಚರ್ಚಿಸಲಾಯಿತು.

ಕರ್ನಾಟಕ ಆಹಾರ, ನಾಗರೀಕ ಸರಬರಾಜು ನಿಗಮಕ್ಕೆ, ಆವರ್ತ ನಿಧಿಯಿಂದ ಬಿಡುಗಡೆ ಮಾಡಲಾದ ಈವರೆಗಿನ ಮೊತ್ತಕ್ಕೆ ಆಕರಿಸಿದ ಬಡ್ಡಿಯನ್ನು ಆವರ್ತನಿಧಿಗೆ ಮರುಪಾವತಿಗೆ ಬಾಕಿಯಿರುವ ಕುರಿತು ಸಭೆಯಲ್ಲಿ ಚರ್ಚಿಸಿ ನಿರ್ದೇಶನಗಳನ್ನು ನೀಡಲಾಯಿತು.

# ಎಟಿಎಂ ದರೋಡೆಕೋರರು ಹೈದರಾಬಾದ್‌ನಲ್ಲಿ ಬಂಧನ

**ಹೈದರಾಬಾದ್/ಬೀದರ್:** ಬೀದರ್‌ನಲ್ಲಿ ಗುರುವಾರ ಬೆಳಗ್ಗೆ ಎಟಿಎಂಗೆ ಹಣ ತುಂಬಿಸುವ ಬ್ಯಾಂಕ್ ಸಿಬ್ಬಂದಿ ಮೇಲೆ ಗುಂಡಿನ ದಾಳಿ ನಡೆಸಿ ಹಣದೊಂದಿಗೆ ಪರಾರಿಯಾಗಿದ್ದ ಆರೋಪಿಗಳು ಹೈದರಾಬಾದ್‌ನಲ್ಲಿ ಪತ್ತೆಯಾಗಿದ್ದಾರೆ. ಪೊಲೀಸರು ಹಿಡಿಯುವ ವೇಳೆ ಮತ್ತೆ ಗುಂಡು ಹಾರಿಸಿದ್ದಾರೆ. ಮೂವರು ದರೋಡೆಕೋರರಲ್ಲಿ ಓರ್ವನನ್ನು ಪೊಲೀಸರು ಬಂಧಿಸಿದ್ದಾರೆ. ಇನ್ನಿಬ್ಬರು ತಪ್ಪಿಸಿಕೊಂಡಿದ್ದಾರೆ.

ಬೀದರ್‌ನಲ್ಲಿ ಬೆಳಗ್ಗೆ 10 ಗಂಟೆ ಸುಮಾರಿನಲ್ಲಿ ಎಟಿಎಂಗೆ ಹಣ ತುಂಬಿಸಲು ಬ್ಯಾಂಕ್ ಸಿಬ್ಬಂದಿ ತೆರಳಿದ್ದಾಗ, ದರೋಡೆಕೋರರು ಗುಂಡು ಹಾರಿಸಿ ಓರ್ವನನ್ನು ಕೊಂದು ಹಣದ ಸಮೇತ ಪರಾರಿಯಾಗಿದ್ದರು. ಪ್ರಕರಣ ದಾಖಲಿಸಿಕೊಂಡು ದುಷ್ಕರ್ಮಿಗಳ ಬೆನ್ನುಬಿದ್ದಿದ್ದ ಪೊಲೀಸರು, ಸುಳಿವು ಆಧರಿಸಿ ಹೈದರಾಬಾದ್‌ನಲ್ಲಿ ಶೋಧ ನಡೆಸುತ್ತಿರುವ ವೇಳೆ ಸಿಕ್ಕಿಬಿದ್ದಿದ್ದಾರೆ. ಈ ವೇಳೆ ಅಲ್ಲಿಯೂ ಆರೋಪಿಗಳು ಗುಂಡಿನ ದಾಳಿ ನಡೆಸಿದ್ದಾರೆ. ಇದರಿಂದ ಬಸ್ ಟ್ರಾವೆಲ್ ಮ್ಯಾನೇಜರ್ ಗಾಯಗೊಂಡಿದ್ದಾರೆ.

ರಾಯಪುರಕ್ಕೆ ಎಸ್ಕೇಪ್ ಪ್ಲಾನ್: ಬೀದರ್‌ನಲ್ಲಿ ಹಣ ದೋಚಿಕೊಂಡು ಬಂದಿದ್ದ ಆರೋಪಿಗಳು ಹೈದರಾಬಾದ್ ಮೂಲಕ ಛತ್ತೀಸ್‌ಗಢದ ರಾಯಪುರಕ್ಕೆ ಪರಾರಿಯಾಗಲು ಯೋಜನೆ ರೂಪಿಸಿದ್ದರು. ಇದಕ್ಕಾಗಿ ಮೂವರು ದುಷ್ಕರ್ಮಿಗಳು ಖಾಸಗಿ ಬಸ್ ಟ್ರಾವೆಲ್‌ನಲ್ಲಿ ಟಿಕೆಟ್ ಕಾಯ್ದಿರಿಸಿದ್ದರು. ಸಂಜೆ 7.30 ಕ್ಕೆ ಬಸ್ ಹೊರಡಬೇಕಿತ್ತು. ಅದಕ್ಕೂ ಮೊದಲು ಆರೋಪಿಗಳನ್ನು ಟ್ರಾವೆಲ್ ಏಜೆನ್ಸಿ ಅವರನ್ನು ಪಿಕಪ್ ಮಾಡಿದ್ದಾರೆ.

ಈ ವೇಳೆ ಆರೋಪಿಗಳ ಲಗೇಜ್ ಅನ್ನು ಬಸ್ ಸಿಬ್ಬಂದಿ ಪರಿಶೀಲನೆ ನಡೆಸಿದ್ದಾರೆ. ಬ್ಯಾಗ್‌ಗಳಲ್ಲಿ ಭಾರೀ ಪ್ರಮಾಣದಲ್ಲಿ ಹಣ ಕಂಡು ಬಂದಿದೆ. ಇದನ್ನು ಸಿಬ್ಬಂದಿ ಪ್ರಶ್ನಿಸಿದಾಗ ಅವರಿಗೇ ಸ್ವಲ್ಪ ಹಣ ನೀಡಲು ಮುಂದಾಗಿದ್ದಾರೆ. ಈ ವೇಳೆ, ಅದೇ ಪಿಕಪ್ ವ್ಯಾನ್‌ನಲ್ಲಿ ಇದ್ದ ಕರ್ನಾಟಕ ಪೊಲೀಸರು ಇದನ್ನ ಗಮನಿಸಿದ್ದಾರೆ.

ಪೊಲೀಸರು ಎಂದು ತಿಳಿದ ತಕ್ಷಣವೇ ಆರೋಪಿಗಳು ತಮ್ಮ ಬ್ಯಾಗ್‌ನಲ್ಲಿದ್ದ ಬಂದೂಕುಗಳಿಂದ ಗುಂಡು ಹಾರಿಸಿದ್ದಾರೆ. ಇದರಿಂದ ಟ್ರಾವೆಲ್ ಏಜೆನ್ಸಿ ಮ್ಯಾನೇಜರ್ ಹೊಟ್ಟೆಗೆ ಬುಲೆಟ್ ಹೊಕ್ಕಿದೆ.


ಸ್ಥಳದಲ್ಲಿದ್ದ ಮತ್ತೊಬ್ಬರಿಗೂ ಗಾಯವಾಗಿದೆ. ಪೊಲೀಸರು ಹರಸಾಹಪಟ್ಟು ಓರ್ವನನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಇನ್ನುಳಿದ ಇಬ್ಬರು ಪರಾರಿಯಾಗಿದ್ದಾರೆ ಎಂದು ಪ್ರತ್ಯಕ್ಷದರ್ಶಿ ಅಹಮ್ಮದ್ ಘಟನೆಯ ಬಗ್ಗೆ ವಿವರಿಸಿದ್ದಾರೆ.

ಮತ್ತೊಂದು ಕಡೆ ಮಾಹಿತಿ ಪಡೆದು ನಗರದ ಪೂರ್ವ ವಲಯ ಡಿಸಿಪಿ ಘಟನಾ ಸ್ಥಳಕ್ಕೆ ಧಾವಿಸಿದ್ದಾರೆ. ತಪ್ಪಿಸಿಕೊಂಡವರ ಬಂಧನಕ್ಕೆ ಹೈದರಾಬಾದ್ ಪೊಲೀಸರು ತೀವ್ರ ಪ್ರಯತ್ನ ಆರಂಭಿಸಿದ್ದಾರೆ.

ಮಾಹಿತಿಯ ಪ್ರಕಾರ, ದುಷ್ಕರ್ಮಿಗಳಿಂದ ಲೂಟಿ ಮಾಡಿದ್ದ ಹಣವನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಸದ್ಯ ಆರೋಪಿ ಅಫ್ಜಲ್‌ಗಂಜ್ ಪೊಲೀಸರ ವಶದಲ್ಲಿದ್ದು ಆತನನ್ನು ಬೀದರ್ ಪೊಲೀಸರು ಕಸ್ಟಡಿಗೆ ನೀಡಲು ಕೋರಲಿದ್ದಾರೆ.

# ಮೈಸೂರು ವಿಮಾನ ನಿಲ್ದಾಣ ವಿಸ್ತರಣೆಗೆ ಕೇಂದ್ರ ಸಚಿವರಿಗೆ ಯದುವೀರ್ ಮನವಿ



**ನವದೆಹಲಿ:** ಮೈಸೂರಿನಲ್ಲಿ ಆರ್ಥಿಕ ಚಟುವಟಿಕೆಗಳನ್ನು ಹೆಚ್ಚಿಸಲು ವಿಮಾನ ನಿಲ್ದಾಣ ವಿಸ್ತರಣೆ ಅತಿ ಮುಖ್ಯ. ಈ ನಿಟ್ಟಿನಲ್ಲಿ ತ್ವರಿತಗತಿಯಲ್ಲಿ ಕ್ರಮ ಕೈಗೊಳ್ಳಬೇಕು ಎಂದು ಕೇಂದ್ರ ನಾಗರಿಕ ವಿಮಾನಯಾನ ಸಚಿವ ಕಿಂಜರಪು ರಾಮ್ ಮೋಹನ್ ನಾಯ್ಡು ಅವರಿಗೆ ಮೈಸೂರು-ಕೊಡುಗೆ ಲೋಕಸಭಾ ಕ್ಷೇತ್ರದ ಸಂಸದ ಯದುವೀರ್ ಕೃ?ದತ್ತ ಚಾಮರಾಜ ಒಡೆಯರ್ ಮನವಿ ಸಲ್ಲಿಸಿದ್ದಾರೆ.

ನವದೆಹಲಿಯಲ್ಲಿ ಕೇಂದ್ರ ಸಚಿವರನ್ನು ಭೇಟಿ ಮಾಡಿದ ಸಂಸದ ಯದುವೀರ್, ವಿಮಾನ ನಿಲ್ದಾಣ ವಿಸ್ತರಣೆಗೆ ಇರುವ ಸಮಸ್ಯೆಗಳು ಹಾಗೂ ಮುಂದೆ ಆಗಬೇಕಾಗಿರುವ ಕೆಲಸಗಳ ಬಗ್ಗೆ ಮನವರಿಕೆ ಮಾಡಿಕೊಟ್ಟರು.

ಕೇಂದ್ರ ಸಚಿವರ ಭೇಟಿಯ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಸಂಸದ ಯದುವೀರ್, ಬೆಂಗಳೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿದ ನಂತರ ಭೂಸ್ವಾಧೀನ ಪ್ರಕ್ರಿಯೆಯನ್ನು ಪೂರ್ಣಗೊಳಿಸುವ ಸಂಬಂಧ ನಾಗರಿಕ ವಿಮಾನಯಾನ ಸಚಿವರಾಮ್ ಮೋಹನ್ ನಾಯ್ಡು ಅವರಿಗೆ ವಿ?ಯವನ್ನು ಮನವರಿಕೆ ಮಾಡಿಕೊಟ್ಟಿದ್ದೇನೆ. ಭೂಮಿ ಹಸ್ತಾಂತರ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಒತ್ತಡ ಹೇರಿ, ವಿಮಾನ ನಿಲ್ದಾಣ ಪ್ರಾಧಿಕಾರಕ್ಕೆ ಭೂಮಿ ಹಸ್ತಾಂತರ ಮಾಡಿಸುವ ಸಂಬಂಧ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಲಾಯಿತು ಎಂದರು.

ಭೂಸ್ವಾಧೀನ ಪ್ರಕ್ರಿಯೆಗೆ ಅಡ್ಡಿಯಾಗುತ್ತಿರುವ ವಿವಿಧ ಸಮಸ್ಯೆಗಳನ್ನು ಅವರ ಗಮನಕ್ಕೆ ತಂದಿದ್ದೇನೆ ಮತ್ತು ಅದನ್ನು ಪರಿಹರಿಸಲು ಸೂಚನೆ ನೀಡುವಂತೆಯೂ ಮನವಿ ಮಾಡಲಾಯಿತು ಎಂದು ಸಂಸದ ಯದುವೀರ್ ತಿಳಿಸಿದರು.

ಭೂ ಸ್ವಾಧೀನಕ್ಕೆ ವಿಶೇಷ ಜಿಲ್ಲಾಧಿಕಾರಿಗಳ ಒಪ್ಪಿಗೆ ಸಿಕ್ಕಿದೆ. ಭೂ ಮಾಲೀಕರಿಗೆ ಬಾಕಿ ಹಣ ಪಾವತಿಸಿ ಭೂಮಿ ಹಸ್ತಾಂತರಕ್ಕೆ ರಾಜ್ಯ ಸರ್ಕಾರ ಕೂಡ ಕ್ರಮಕ್ಕೆ ಮುಂದಾಗಿದೆ. ಈ ನಿಟ್ಟಿನಲ್ಲಿ ಮುಖ್ಯಮಂತ್ರಿಗಳೊಂದಿಗೆ ಕಳೆದ ವಾರ ಮಾತುಕತೆ ಕೂಡ ನಡೆಸಲಾಗಿತ್ತು. ಒಟ್ಟಾರೆಯಾಗಿ ಈ ಪ್ರಕ್ರಿಯೆಯನ್ನು ಕ್ಷಿಪ್ರಗತಿಯಲ್ಲಿ ಪೂರ್ಣಗೊಳಿಸಲು ಎಲ್ಲ ರೀತಿಯ ಪ್ರಯತ್ನ ಮಾಡುತ್ತಿದ್ದೇನೆ ಎಂದು ಯದುವೀರ್ ವಿವರಿಸಿದರು.

ಆರ್ಥಿಕವಾಗಿ ಅಭಿವೃದ್ಧಿ ಹೊಂದುತ್ತಿರುವ ಸಾಂಸ್ಕೃತಿಕ ರಾಜಧಾನಿ ಮೈಸೂರು ಅಭಿವೃದ್ಧಿ ಮಾಡುವುದೇ ನನ್ನ ಸದ್ಯದ ಗುರಿ. ದೇಶ-ವಿದೇಶಗಳಿಂದ ಆಗಮಿಸುವ ಪ್ರಯಾಣಿಕರಿಗೆ, ಉದ್ಯಮಿಗಳಿಗೆ, ಅನುಕೂಲವಾಗಲು ಮೈಸೂರು ವಿಮಾನ ನಿಲ್ದಾಣ ವಿಸ್ತರಣೆ ಮಾಡಬೇಕಾದ ತುರ್ತು ಅಗತ್ಯವಿದೆ. ಇದರಿಂದ ಸಂಪರ್ಕ ಸುಲಭವಾಗಲಿದೆ ಎಂದರು.

ಭೂ ಸ್ವಾಧೀನ ಪ್ರಕ್ರಿಯೆಗೆ ಕೆಲವು ತಾಂತ್ರಿಕ ಅಡೆತಡೆಗಳಿವೆ. ನಿಭಾಯಿಸಿಕೊಂಡು ನಾವು ಮುನ್ನುಗ್ಗಬೇಕು. ಭೂಮಿ ಹಸ್ತಾಂತರ ವಿಳಂಬವಾಗುತ್ತಿರುವ ಹಿನ್ನೆಲೆಯಲ್ಲಿ ವಿಮಾನ ನಿಲ್ದಾಣ ವಿಸ್ತರಣೆ ಯೋಜನೆಗೆ ಅಡ್ಡಿಯಾಗಿದೆ. ಈ ನಿಟ್ಟಿನಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಜಂಟಿ ಪ್ರಯತ್ನದಿಂದ ಪ್ರಕ್ರಿಯೆ ಪೂರ್ಣಗೊಳ್ಳಬೇಕು. ಇದಕ್ಕಾಗಿ ಸೂಕ್ತ ಮನವಿಯನ್ನು ಸಲ್ಲಿಸಿದ್ದೇನೆ ಎಂದು ಸಂಸದ ಯದುವೀರ್ ಸ್ಪ?ಪಡಿಸಿದರು.

ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಯನ್ನು ಮತ್ತೊಂದು ಹಂತಕ್ಕೆ ಕೊಂಡೊಯ್ಯಲು ಎಲ್ಲ ರೀತಿಯ ಪ್ರಯತ್ನ ಮಾಡುತ್ತಿದ್ದೇನೆ. ಜನರ ಸೇವೆ ಮಾಡಲು ಸಿಕ್ಕಿರುವ ಈ ಅವಕಾಶವನ್ನು ಸದ್ಬಳಕೆ ಮಾಡಿಕೊಳ್ಳುತ್ತೇನೆ ಎಂದು ಸಂಸದ ಯದುವೀರ್ ಉತ್ತರಿಸಿದರು.

# ಬಿಬಿಎಂಪಿಯಿಂದ ವಿವರಣೆ ಕೋರಿದ ಹೈಕೋರ್ಟ್

**ಬೆಂಗಳೂರು:** ವೈಟ್ ಟಾಪಿಂಗ್ ರಸ್ತೆಗಳು ವೈಜ್ಞಾನಿಕವಾಗಿರುತ್ತವೆಯೇ, ಇಲ್ಲವೇ ಎಂಬ ಬಗ್ಗೆ ವಿವರಣೆ ನೀಡುವಂತೆ ಹೈಕೋರ್ಟ್ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ನಿರ್ದೇಶಿಸಿದೆ.

ಬೆಂಗಳೂರು ಮಹಾನಗರದಲ್ಲಿನ ರಸ್ತೆ ಗುಂಡಿಗಳನ್ನು ಮುಚ್ಚುವ ಕುರಿತು ಹಾಗೂ ಮಳೆ ನೀರು ಕಾಲುವೆಗಳ ಒತ್ತುವರಿ ತೆರವುಗೊಳಿಸುವಂತೆ ಕೋರಿ ಕೋರಮಂಗಲದ ನಿವಾಸಿ ವಿಜಯ್ ಮೆನನ್ 2015ರಲ್ಲಿ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯು ಮುಖ್ಯ ನ್ಯಾಯಮೂರ್ತಿ ಎನ್.ವಿ.ಅಂಜಾರಿಯಾ ಮತ್ತು ನ್ಯಾಯಮೂರ್ತಿ ಎಂ.ಐ.ಅರುಣ್ ಅವರಿದ್ದ ಪೀಠ ಈ ಸೂಚನೆ ನೀಡಿ ವಿಚಾರಣೆ ಮುಂದೂಡಿದೆ.


ನೀವು ಎಲ್ಲೆಡೆ ವೈಟ್ ಟಾಪಿಂಗ್ ರಸ್ತೆಗಳನ್ನು ಮಾಡುತ್ತಿದ್ದೀರಿ. ಹಾಗಾಗಿ ಆ ರಸ್ತೆಗಳು ವೈಜ್ಞಾನಿಕವಾಗಿ ಎ?ು ಸೂಕ್ತ ಎಂಬ ಬಗ್ಗೆ ನೀವೇ ವಿವರಣೆ ನೀಡಬೇಕು. ವೈಟ್ ಟಾಪಿಂಗ್ ರಸ್ತೆಗಳು ಸೂಕ್ತವಲ್ಲ ಎಂಬ ಹಲವು ವರದಿಗಳಿವೆ.

ಸಾಮಾನ್ಯ ಡಾಂಬಾರು ರಸ್ತೆಯಲ್ಲಿ ಮಳೆ ನೀರು ಬಿದ್ದರೆ ಅದು ಮಣ್ಣಿನಲ್ಲಿ ಇಂಗಿ ಹೋಗುತ್ತದೆ. ಆದರೆ ವೈಟ್ ಟಾಪಿಂಗ್‌ನಲ್ಲಿ ಹಾಗೆ ಆಗುವುದಿಲ್ಲ. ಆದ್ದರಿಂದ ವೈಟ್ ಟಾಪಿಂಗ್ ರಸ್ತೆ ವೈಜ್ಞಾನಿಕವಾಗಿ ಸರಿಯೇ ಅಥವಾ ತಪ್ಪೇ ತಿಳಿಸಿ ಎಂಬುದನ್ನು ವಿವರಿಸಬೇಕು ಎಂದು ಸೂಚನೆ ನೀಡಿತು.

ಅದಕ್ಕೆ ಉತ್ತರಿಸಿದ ಬಿಬಿಎಂಪಿ ಪರ ವಕೀಲರು, ಮುಂದಿನ ವಿಚಾರಣೆ ವೇಳೆಗೆ ಉತ್ತರ ನೀಡಲಾಗುವುದು. ಅಲ್ಲಿಯವರೆಗೆ ಸಮಯ ನೀಡಿ ಎಂದು ಮನವಿ ಮಾಡಿದರು.

ಇದಕ್ಕೂ ಮುನ್ನ ಬಿಬಿಎಂಪಿ ಸಲ್ಲಿಕೆ ಮಾಡಿದ ಪ್ರಮಾಣಪತ್ರದಲ್ಲಿ ಗುಂಡಿಗಳನ್ನು ಮುಚ್ಚುವ ಬಗ್ಗೆ ಯಾವುದೇ ಉಲ್ಲೇಖ ಇಲ್ಲದಿರುವುದನ್ನು ನ್ಯಾಯಪೀಠ ಗಮನಿಸಿತು.

ಅದು ನೀವು ರಸ್ತೆ ಗುಂಡಿಗಳನ್ನು ಮುಚ್ಚುವ ದುರಸ್ತಿ ಕಾರ್ಯವನ್ನು ಆಗಾಗ್ಗೆ ಕೈಗೊಳ್ಳುತ್ತೀರೋ ಅಥವಾ ಮುಂಗಾರು ಮಳೆ ಬಂದಾಗ ಮಾತ್ರ ಮಾಡುತ್ತೀರೋ ಎಂದು ಬಿಬಿಎಂಪಿ ಪರ ವಕೀಲರನ್ನು ಪ್ರಶ್ನಿಸಿತು. ಜತೆಗೆ ವೈಟ್ ಟಾಪಿಂಗ್ ಬಗ್ಗೆ ಸಮಗ್ರ ಮಾಹಿತಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿ ಎಂದು ಹೈಕೋರ್ಟ್ ನಿರ್ದೇಶನ ನೀಡಿ ವಿಚಾರಣೆಯನ್ನು ಮುಂದೂಡಿತು.



# ಉನ್ನತ ಅಧಿಕಾರಿಗಳನ್ನು ಅಮಾನತುಗೊಳಿಸಿ



**ಬೆಂಗಳೂರು:** ಪ್ರಶ್ನೆ ಪತ್ರಿಕೆಯಲ್ಲಿ ಕನ್ನಡ ಭಾ?ಗೆ ಅಪಮಾನ ಮಾಡಿರುವ ಕೆಪಿಎಸ್ಸಿ ಆಯೋಗದ ಉನ್ನತ ಅಧಿಕಾರಿಗಳನ್ನು ಕೂಡಲೇ ಅಮಾನತುಗೊಳಿಸಿ ಹಾಗೂ ಮರು ಪರೀಕ್ಷೆ ನಡೆಸಿ ಹಾಗೂ ಜಾತಿಗಣತಿ ಕೂಡಲೇ ಜಾರಿಗೆ ತರಬೇಕು ಎಂದು ಆಮ್ ಆದ್ಮಿ ಪಕ್ಷದ ರಾಜ್ಯಾಧ್ಯಕ್ಷ ಡಾ. ಮುಖ್ಯಮಂತ್ರಿ ಚಂದ್ರು ಆಗ್ರಹಿಸಿದ್ದಾರೆ.

ನಗರದ ಸ್ವಾತಂತ್ರ್ಯ ಉದ್ಯಾನವನದಲ್ಲಿ ಅಖಿಲ ಕರ್ನಾಟಕ ರಾಜ್ಯ ವಿದ್ಯಾರ್ಥಿಗಳ ಸಂಘ ಏರ್ಪಡಿಸಿದ್ದ ಪ್ರತಿಭಟನೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಕೆಪಿಎಸ್ಸಿ ಆಯೋಗದಿಂದ ಗೆಜೆಟೆಡ್ ಪ್ರೊಬೇ?ನರಿ ಹುದ್ದೆಗಳಿಗೆ ನಡೆಸಿದ ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳಲ್ಲಿ ಅನೇಕ ತಪ್ಪುಗಳನ್ನು ಮಾಡಿ, ಪರೀಕ್ಷಾರ್ಥಿಗಳ ಭವಿ?ವನ್ನೇ ಅಂಧಕಾರದಲ್ಲಿ ದೂಡಿ ಕನ್ನಡ ಭಾ?ಗೆ ಅಪಮಾನ ಮಾಡಿರುವ ಆಯೋಗದ ಪರೀಕ್ಷ ನಿಯಂತ್ರಕ ಜ್ಞಾನೇಂದ್ರ ಕುಮಾರ್ ಗಂಗವಾಲ್ ಹಾಗೂ ಸಿಬ್ಬಂದಿಗಳನ್ನು ಕೂಡಲೇ ಅಮಾನತ್ತು ಮಾಡಬೇಕು ಹಾಗೂ ಜಾತಿ ಗಣತಿ ವರದಿಯನ್ನು ಮಂತ್ರಿಮಂಡಲದಲ್ಲಿ ಅನುಮೋದಿಸಬೇಕು. ಕೂಡಲೇ ಮರು ಪರೀಕ್ಷೆ ನಡೆಸಬೇಕು ಅಥವಾ ಎಲ್ಲ ಪರೀಕ್ಷಾರ್ಥಿಗಳಿಗೂ ಮುಖ್ಯ ಪರೀಕ್ಷೆಯಲ್ಲಿ ಭಾಗವಹಿಸುವ ಅವಕಾಶ ನೀಡುಬೇಕು ಎಂದು ಹೇಳಿದರು.

ಪ್ರಶ್ನೆ ಪತ್ರಿಕೆಗಳನ್ನು ಕನ್ನಡದಲ್ಲಿ ತಯಾರು ಮಾಡಿ ನಂತರ ಇನ್ನಿತರ ಭಾ?ಗಳಲ್ಲಿ ತರ್ಜುಮೆ ಮಾಡುವ ಕನಿ? ಜ್ಞಾನ ಇಲ್ಲಿನ ಅಧಿಕಾರಿಗಳಿಗೆ ಇಲ್ಲದಾಗಿದೆ. ಇಲ್ಲಿಯವರೆಗೂ ಆಯೋಗದಿಂದ ನಡೆಯುತ್ತಿರುವ ಪರೀಕ್ಷೆಗಳ ಫಲಿತಾಂಶಗಳನ್ನು ಕೂಡಲೇ ಪ್ರಕಟಿಸಬೇಕು, ಕನ್ನಡಿಗರಿಗೆ ಉದ್ಯೋಗದಲ್ಲಿ ಮೀಸಲಾತಿ ಕಾಯ್ದೆಯನ್ನು ಕೂಡಲೇ ಜಾರಿಗೆ ತರಬೇಕು , ಕೆಪಿಎಸ್ಸಿ ಆಯೋಗವನ್ನು ಆಮೂಲಾಗ್ರ ಸುಧಾರಣೆ ಮಾಡಬೇಕು, ಬ್ಯಾಂಕ್, ರೈಲ್ವೆಗಳ ನೇಮಕಾತಿ ಪರೀಕ್ಷೆಗಳಲ್ಲಿ ಕನ್ನಡ ಭಾ?ಗೆ ಆದ್ಯತೆ ನೀಡಬೇಕೆಂದು ಒತ್ತಾಯಿಸಿದರು.

ಸರ್ಕಾರ ಪರೀಕ್ಷಾರ್ಥಿಗಳಿಗೆ ಸೂಕ್ತ ನ್ಯಾಯ ದೊರಕಿಸಿ ಕೊಳ್ಳುತ್ತಿದ್ದಲ್ಲಿ ಮುಂಬರುವ ಜಿಲ್ಲಾ/ ತಾಲೂಕು ಪಂಚಾಯಿತಿ, ಬಿಬಿಎಂಪಿ ಚುನಾವಣೆಗಳಲ್ಲಿ ಇದೇ ವಿದ್ಯಾರ್ಥಿಗಳನ್ನು ನಿಮ್ಮ ವಿರುದ್ಧ ನಿಲ್ಲಿಸಿ ಗೆಲ್ಲಿಸಿಕೊಳ್ಳಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು. ವಿದ್ಯಾರ್ಥಿಗಳ ಸಂಘದ ಅಧ್ಯಕ್ಷ ಕಾಂತ ಕುಮಾರ್ ಹಾಗೂ ಅವರ ಎಲ್ಲ ಸ್ನೇಹಿತರುಗಳಿಗೆ ಪಕ್ಷದ ಸಂಪೂರ್ಣ ಬೆಂಬಲವಿದೆ ಎಂದು ಘೋಷಿಸಿದರು.

ಮುಖ್ಯಮಂತ್ರಿಗಳು ಕೇವಲ ತಮ್ಮ ಅಧಿಕಾರವನ್ನು ಉಳಿಸಿಕೊಳ್ಳುವುದಕ್ಕಾಗಿ ಬಲಾಢ್ಯರ ಒತ್ತಡಕ್ಕೆ ಮಣಿದು ಜಾತಿಗಣತಿ ವರದಿಯನ್ನು ಮಂತ್ರಿಮಂಡಲ ಸಭೆಯಲ್ಲಿ ಅನುಮೋದನೆ ನೀಡದಿರುವ ಕ್ರಮವನ್ನು ಕಟುಮಾತುಗಳಿಂದ ಮುಖ್ಯಮಂತ್ರಿ ಚಂದ್ರು ಕಟುಮಾಟು ಖಂಡನೆ ವ್ಯಕ್ತಪಡಿಸಿದರೂರು. ಕೂಡಲೇ ಜಾತಿಗಣತಿ ವರದಿಯನ್ನು ಅನುಮೋದಿಸಿ ಸದನದಲ್ಲಿ ಮಂಡಿಸಬೇಕೆಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ರಾಜ್ಯ ಯುವ ಘಟಕದ ಅಧ್ಯಕ್ಷ ಲೋಹಿತ್ ಕುಮಾರ್, ಪ್ರಧಾನ ಕಾರ್ಯದರ್ಶಿ ಜಗದೀಶ್ ಚಂದ್ರ, ಅನಿಲ್ ನಾಚಪ್ಪ , ಉಮೇಶ್ ಗೌಡ ಸೇರಿದಂತೆ ಅನೇಕ ನಾಯಕರುಗಳು ಕಾರ್ಯಕರ್ತರುಗಳು ಭಾಗವಹಿಸಿದ್ದರು.

# ಕೆನಡಾ ಪ್ರಧಾನಿ ಹುದ್ದೆಗೆ ನಾಮಪತ್ರ ಸಲ್ಲಿಸಿದ ಚಂದ್ರ ಆರ್ಯ

**ಕೆನಡಾ:** ಭಾರತ ಮೂಲದ ಚಂದ್ರ ಆರ್ಯ ಪ್ರಧಾನಿ ಹುದ್ದೆಗೆ ನಾಮಪತ್ರ ಸಲ್ಲಿಸಿ, ಕನ್ನಡದಲ್ಲಿಯೇ ಮಾತನಾಡಿದ್ದಾರೆ.

ತುಮಕೂರು ಜಿಲ್ಲೆ ಸಿರಾ ತಾಲೂಕಿನ ದ್ವಾರಾಳು ಗ್ರಾಮದ ಮೂಲದವರಾಗಿರುವ ಚಂದ್ರ ಆರ್ಯ ಪ್ರಧಾನಿ ಹುದ್ದೆಗೆ ಸ್ಪರ್ಧಿಸಿರುವುದು ಹೆಮ್ಮೆಯ ಸಂಗತಿ.

ನಾಮಪತ್ರ ಸಲ್ಲಿಕೆ ಬಳಿಕ ಚಂದ್ರ ಆರ್ಯ ಕನ್ನಡದಲ್ಲಿ ಹೇಳಿದ್ದೇನು?

"ಕೆನಡಾ ದೇಶದ ಸಂಸತ್ತಿನಲ್ಲಿ ನನ್ನ ಮಾತೃಭಾಷೆ ಕನ್ನಡದಲ್ಲಿ ಮಾತನಾಡಲು ಅವಕಾಶ ಸಿಕ್ಕಿರುವುದಕ್ಕೆ ಸಂತೋಷವಾಗುತ್ತಿದೆ. ಭಾರತ ದೇಶದ ಕರ್ನಾಟಕ ರಾಜ್ಯದ ತುಮಕೂರು ಜಿಲ್ಲೆಯ, ಸಿರಾ ತಾಲೂಕಿನ ವ್ಯಕ್ತಿಯೊಬ್ಬ ಕೆನಡಾದಲ್ಲಿ ಸಂಸತ್ ಸದಸ್ಯನಾಗಿ ಆಯ್ಕೆಯಾಗಿ ಮತ್ತು ಕನ್ನಡದಲ್ಲಿ ಮಾತನಾಡುವುದು, ಸುಮಾರು ಐದು ಕೋಟಿ ಕನ್ನಡಿಗರಿಗೆ ಹೆಮ್ಮೆಯ ವಿಚಾರ. ಕೆನಡಾ ದೇಶದ ಕನ್ನಡಿಗರು 2018ನೇ ಇಸವಿಯಲ್ಲಿ ಕೆನಡಾದ ಈ ಸಂಸತ್ತಿನಲ್ಲಿ ಕನ್ನಡ ರಾಜ್ಯೋತ್ಸವವನ್ನು ಆಚರಿಸಿದ್ದರು". ರಾಷ್ಟ್ರಕವಿ ಕುವೆಂಪು ಬರೆದಿರುವ ಹಾಗೂ ನಟಸಾರ್ವಭೌಮ ಡಾ. ರಾಜ್‌ಕುಮಾರ್ ಹಾಡಿರುವ ಭಾವಗೀತೆ ಎಲ್ಲಾದರೂ ಇರು ಎಂತಾದರೂ ಇರು ಎಂದೆಂದಿಗೂ ನೀ ಕನ್ನಡವಾಗಿರು, ಕನ್ನಡವೇ ಸತ್ಯ, ಕನ್ನಡವೇ ನಿತ್ಯ ಎಂದು ಹೇಳುವ ಮೂಲಕ ಮಾತು ಮುಗಿಸಿದರು.



ದೇಶವನ್ನು ಸಾರ್ವಭೌಮ ಗಣರಾಜ್ಯವನ್ನಾಗಿ ಮಾಡುವ, ನಿವೃತ್ತಿ ವಯಸ್ಸನ್ನು ಹೆಚ್ಚಿಸುವ, ಪೌರತ್ವ ಆಧಾರಿತ ತೆರಿಗೆ ವ್ಯವಸ್ಥೆಯನ್ನು ಪರಿಚಯಿಸುವ ಮತ್ತು ಪ್ಯಾಲೆಸ್ಟೈನ್ ರಾಜ್ಯವನ್ನು ಗುರುತಿಸುವ ಭರವಸೆ ನೀಡುವ ಅಭಿಯಾನದೊಂದಿಗೆ ಲಿಬರಲ್ ನಾಯಕತ್ವಕ್ಕಾಗಿ ಸ್ಪರ್ಧಿಸುವುದಾಗಿ ಈ ಮೊದಲೇ ಹೇಳಿದ್ದರು.

2040 ರಲ್ಲಿ ನಿವೃತ್ತಿ ವಯಸ್ಸನ್ನು ಎರಡು ವರ್ಷಗಳವರೆಗೆ ಹೆಚ್ಚಿಸುವುದು, ಪೌರತ್ವ ಆಧಾರಿತ ತೆರಿಗೆ ವ್ಯವಸ್ಥೆಯನ್ನು ಪರಿಚಯಿಸುವುದು ಮತ್ತು ಪ್ಯಾಲೆಸ್ಟೈನ್ ಅನ್ನು ಒಂದು ರಾಷ್ಟ್ರವಾಗಿ ಗುರುತಿಸುವುದು ಚಂದ್ರ ಆರ್ಯ ಭರವಸೆಗಳನ್ನು ಈಗಾಗಲೇ ನೀಡಿದ್ದರು.

ನಮ್ಮ ರಾಷ್ಟ್ರವನ್ನು ಪುನರ್ನಿರ್ಮಿಸಲು ಮತ್ತು ಭವಿಷ್ಯದ ಪೀಳಿಗೆಗೆ ಸಮೃದ್ಧಿಯನ್ನು ಖಚಿತಪಡಿಸಿಕೊಳ್ಳಲು ಸಣ್ಣ, ಹೆಚ್ಚು ಪರಿಣಾಮಕಾರಿ ಸರ್ಕಾರವನ್ನು ಮುನ್ನಡೆಸಲು ಕೆನಡಾದ ಮುಂದಿನ ಪ್ರಧಾನಿಯಾಗಲು ನಾನು ಸ್ಪರ್ಧಿಸುತ್ತಿದ್ದೇನೆ ಎಂದು 2015ರಲ್ಲಿ ನೇಪಿಯನ್‌ನ ಉಪನಗರ ರೈಡಿಂಗ್‌ನಲ್ಲಿ ಮೊದಲ ಬಾರಿಗೆ ಆಯ್ಕೆಯಾದ ಆರ್ಯ ಹೇಳಿದ್ದರು.

# ಮೂಲಭೂತವಾದಿ ಬಾಬರ್ ಬಿಡುಗಡೆ

**ಢಾಕಾ:** ಭಾರತಕ್ಕೆ ಆಘಾತಕಾರಿ ಬೆಳವಣಿಗೆಯೊಂದರಲ್ಲಿ, ಭಾರತದ ಈಶಾನ್ಯ ರಾಜ್ಯಗಳಲ್ಲಿ ಬಂಡಾಯ ಉತ್ತೇಜಿಸಲು ಶಸ್ತ್ರಾಸ್ತ್ರಗಳನ್ನು ಕಳ್ಳಸಾಗಣೆ ಮಾಡಿದ ಪ್ರಕರಣದ ಪ್ರಮುಖ ಆರೋಪಿಗಳಲ್ಲಿ ಒಬ್ಬನಾದ ಬಾಂಗ್ಲಾದೇಶದ ಮಾಜಿ ಸಚಿವ ಲುಟ್ಫೋಝುಮಾನ್ ಬಾಬರ್ ಈತನನ್ನು ಗುರುವಾರ ಢಾಕಾದ ಕೇಂದ್ರ ಕಾರಾಗೃಹದಿಂದ ಬಿಡುಗಡೆ ಮಾಡಲಾಗಿದೆ.

ಮುಹಮ್ಮದ್ ಯೂನುಸ್ ನೇತೃತ್ವದ ಮಧ್ಯಂತರ ಸರ್ಕಾರದ ಈ ಮತ್ತೊಂದು ವಿವಾದಾತ್ಮಕ ನಿರ್ಧಾರದಿಂದ ಈಗಾಗಲೇ ಅಸ್ಥಿರತೆಯಿಂದ ಬಳಲುತ್ತಿರುವ ಬಾಂಗ್ಲಾದೇಶದ ಮೂಲಭೂತವಾದಿ ಶಕ್ತಿಗಳಿಗೆ ಮತ್ತಷ್ಟು ಬಲ ತುಂಬಲಿದೆ ಎಂದು ವಿಶ್ಲೇಷಕರು ಹೇಳಿದ್ದಾರೆ.

ಬಾಬರ್ 2004 ರಲ್ಲಿ ಖಲೀದಾ ಜಿಯಾ ನೇತೃತ್ವದ ಬಾಂಗ್ಲಾದೇಶ ನ್ಯಾಷನಲಿಸ್ಟ್ ಪಾರ್ಟಿ (ಬಿಎನ್‌ಪಿ) ಜಮಾತ್-ಎ-ಇಸ್ಲಾಮಿ ಮೈತ್ರಿ ಸರ್ಕಾರದಲ್ಲಿ ಗೃಹ ರಾಜ್ಯ ಸಚಿವರಾಗಿ ಸೇವೆ ಸಲ್ಲಿಸಿದ್ದಾರೆ. ಮಾಜಿ ಪ್ರಧಾನಿ ಶೇಖ್ ಹಸೀನಾ ಅವರ ಮೇಲೆ ಗ್ರೆನೇಡ್ ದಾಳಿ ಮತ್ತು ಭಾರತದಿಂದ ಅಸ್ಸಾಂ ರಾಜ್ಯವನ್ನು ಪ್ರತ್ಯೇಕಗೊಳಿಸಲು ಕೆಲಸ ಮಾಡುತ್ತಿರುವ ನಿಷೇಧಿತ ಭಯೋತ್ಪಾದಕ ಸಂಘಟನೆ ಯುನೈಟೆಡ್ ಲಿಬರೇಶನ್ ಫ್ರಂಟ್ ಆಫ್ ಅಸ್ಸಾಂ (ಉಲ್ಫಾ) ಗೆ ಚಿತ್ತಗಾಂಗ್ ಮೂಲಕ 10 ಟ್ರಕ್ ಲೋಡ್ ಶಸ್ತ್ರಾಸ್ತ್ರ ಮತ್ತು ಮದ್ದು ಗುಂಡುಗಳನ್ನು ಸಾಗಿಸಿದ ಆರೋಪದ ಮೇಲೆ ಇವರನ್ನು ಮೇ 2007 ರಲ್ಲಿ ಬಂಧಿಸಲಾಗಿತ್ತು.

ಮರಣದಂಡನೆಗೆ ಒಳಗಗಾಗಿದ್ದ ಬಾಬರ್: ಶಸ್ತ್ರಾಸ್ತ್ರ ಕಾಯ್ದೆ ಮತ್ತು ವಿಶೇಷ ಅಧಿಕಾರ ಕಾಯ್ದೆಯಡಿ ಮರಣದಂಡನೆ ಮತ್ತು ಜೀವಾವಧಿ ಶಿಕ್ಷೆಗೊಳಗಾಗಿದ್ದ ಈತ ಜೈಲಿನಲ್ಲಿ ಬಂಧಿಯಾಗಿದ್ದ. ಆದರೆ ಕಳೆದ ವರ್ಷದ ಆಗಸ್ಟ್‌ನಲ್ಲಿ ಹಸೀನಾ ಸರ್ಕಾರ ಪತನವಾಗಿ ಯೂನುಸ್ ನೇತೃತ್ವದ ಮಧ್ಯಂತರ ಆಡಳಿತ ಜಾರಿಗೆ ಬಂದ ನಂತರ ಈತನ ಮೇಲಿನ ಮೇಲಿರುವ ಹಲವಾರು ಪ್ರಕರಣಗಳನ್ನು ಕೈಬಿಡುವ ಪ್ರಕ್ರಿಯೆ ಆರಂಭಿಸಲಾಗಿತ್ತು.

# ಆಗ್ರಾದ ಮೆಡ್ಲಿ ಬ್ರೆಡ್ ಕಾರ್ಖಾನೆಯಲ್ಲಿ ಸ್ಫೋಟ; 13 ಜನರಿಗೆ ಗಾಯ

**ನವದೆಹಲಿ:** ಆಗ್ರಾದ ಮೆಡ್ಲಿ ಬ್ರೆಡ್ ಕಾರ್ಖಾನೆಯಲ್ಲಿ ಭಾರಿ ಓವನ್ ಸ್ಫೋಟ ಸಂಭವಿಸಿದ್ದು, 13 ಕಾರ್ಮಿಕರು ಗಾಯಗೊಂಡಿರುವ ಘಟನೆ ಹರಿಪರ್ವತ್ ಸಾರಿಗೆ ನಗರದಲ್ಲಿ ನಡೆದಿದೆ.

ಈ ಸ್ಫೋಟವು ಕಿಲೋ ಮೀಟರ್ ದೂರದಲ್ಲಿ ಕೇಳಿ ಬಂದಿದ್ದು, ಆ ಪ್ರದೇಶದಲ್ಲಿ ಆಘಾತ ತರಂಗಗಳನ್ನು ಉಂಟು ಮಾಡಿತು. ಆಡಳಿತ ಮತ್ತು ಇತರ ತುರ್ತು ಸೇವೆಗಳು ತ್ವರಿತ ತುರ್ತು ಪ್ರತಿಕ್ರಿಯೆ ನಡೆಸಿತು.



ಬ್ರೆಡ್ ತಯಾರಿಕಾ ಕಾರ್ಖಾನೆಯೊಳಗೆ 20ಕ್ಕೂ ಹೆಚ್ಚು ಕಾರ್ಮಿಕರು ಕೆಲಸ ಮಾಡುತ್ತಿದ್ದಾಗ ಮಧ್ಯಾಹ್ನ 1 ಗಂಟೆ ಸುಮಾರಿಗೆ ಸ್ಫೋಟ ಸಂಭವಿಸಿದೆ. ಈ ಸಮಯದಲ್ಲಿ ದೊಡ್ಡದಾದ, ಅನಿಲ ಚಾಲಿತ ಓವನ್ ಯಾವುದೇ ಎಚ್ಚರಿಕೆಯಿಲ್ಲದೆ ಸಿಡಿದಿದೆ ಎಂದು ಕಾರ್ಖಾನೆ ವ್ಯವಸ್ಥಾಪಕ ಜಿತೇಂದ್ರ ಹೇಳಿದ್ದಾರೆ. ಇದು ಸಂಭಾವ್ಯ ಅನಿಲ ಸೋರಿಕೆಯ ಕಾರಣದಿಂದ ಸಂಭವಿಸಿದೆ ಎಂದು ಸುಳಿವು ನೀಡಿದ್ದಾರೆ.

ಈ ಸ್ಫೋಟದ ಪ್ರಭಾವದಿಂದ ಕಾರ್ಮಿಕರು ಹಾರಿ ಬಿದ್ದಿದ್ದಾರೆ. ಇದರ ಪರಿಣಾಮವಾಗಿ ವಿವಿಧ ಗಾಯಗಳು ಸಂಭವಿಸಿವೆ. ಈ ದೊಡ್ಡ ಶಬ್ದದಿಂದ ಎಚ್ಚೆತ್ತ ಸ್ಥಳೀಯ ನಿವಾಸಿಗಳು ಕಾರ್ಖಾನೆಗೆ ಧಾವಿಸಿ ತಕ್ಷಣದ ಸಹಾಯ ನೀಡಿದರು. ಗಾಯಗೊಂಡ 13 ಕಾರ್ಮಿಕರನ್ನು ಆಂಬ್ಯುಲೆನ್ಸ್ ಮತ್ತು ಖಾಸಗಿ ವಾಹನಗಳ ಮೂಲಕ ಹತ್ತಿರದ ಆಸ್ಪತ್ರೆಗಳಿಗೆ ಸಾಗಿಸಲಾಯಿತು. ಗಂಭೀರವಾಗಿ ಗಾಯಗೊಂಡವರಲ್ಲಿ ಮೂವರು ಖಾಸಗಿ ಆಸ್ಪತ್ರೆಯಲ್ಲಿ ಗಂಭೀರ ಚಿಕಿತ್ಸೆ ಪಡೆಯುತ್ತಿದ್ದಾರೆ.

# ದೋಣಿ ಮಗುಚಿ 40 ಪಾಕಿಸ್ತಾನಿಗಳು ಸೇರಿ 50 ಮಂದಿ ಸಾವು

**ಮೊರಾಕೊ:** 80 ವಲಸಿಗರನ್ನು ಹೊತ್ತು ಅಕ್ರಮವಾಗಿ ಸ್ಪೇನ್‌ಗೆ ತೆರಳಲು ಪ್ರಯತ್ನಿಸುತ್ತಿದ್ದ ದೋಣಿ ಮೊರಾಕೊದ ಸಮುದ್ರದಲ್ಲಿ ಮಗುಚಿದ ಪರಿಣಾಮ 40 ಪಾಕಿಸ್ತಾನಿಗಳು ಸೇರಿ ಒಟ್ಟು 50 ಮಂದಿ ಸಾವನ್ನಪ್ಪಿದ್ದಾರೆ ಎನ್ನುವ ಮಾಹಿತಿ ಲಭ್ಯವಾಗಿದೆ.

ಮೊರೊಕನ್ ಅಧಿಕಾರಿಗಳು ದೋಣಿ ಮೂಲಕ 30 ಜನರನ್ನು ರಕ್ಷಿಸಿದರು. ಈ ದೋಣಿ ಜನವರಿ 2 ರಂದು ಮಾರಿಷಸ್‌ನಿಂದ ಹೊರಟಿತ್ತು.

50ಕ್ಕೂ ಹೆಚ್ಚು ವಲಸಿಗರು ಅಪಘಾತದಲ್ಲಿ ಮುಳುಗಿ ಸಾವನ್ನಪ್ಪಿರುವ ಶಂಕೆ ಇದೆ ಎಂದು ವಲಸೆ ಹಕ್ಕುಗಳ ಗುಂಪು 'ವಾಕಿಂಗ್ ಬಾರ್ಡರ್ಸ್' ಹೇಳಿದೆ. ಮೃತರ ಗುರುತುಗಳನ್ನು ದೃಢೀಕರಿಸಲು ಮತ್ತು ಬದುಕುಳಿದವರಿಗೆ ನೆರವು ನೀಡಲು ಪ್ರಯತ್ನಗಳು ನಡೆಯುತ್ತಿವೆ. ಈ ಭೀಕರ ಘಟನೆಯ ನಂತರ ಪರಿಸ್ಥಿತಿಯನ್ನು ನಿಭಾಯಿಸಲು ಮೊರಾಕೊ ಮತ್ತು ಪಾಕಿಸ್ತಾನ ಎರಡೂ ಅಧಿಕಾರಿಗಳು ಒಟ್ಟಾಗಿ ಕೆಲಸ ಮಾಡುತ್ತಿದ್ದಾರೆ.

ಘಟನೆ ಕುರಿತು ಪಾಕಿಸ್ತಾನದ ವಿದೇಶಾಂಗ ಕಚೇರಿ ಹೇಳಿಕೆ ನೀಡಿದೆ. ರಕ್ಷಣಾ ಕಾರ್ಯಾಚರಣೆಯಲ್ಲಿ ನೆರವಾಗಲು ಮೊರಾಕೊದಲ್ಲಿರುವ ತನ್ನ ರಾಯಭಾರ ಕಚೇರಿ ಸ್ಥಳೀಯ ಅಧಿಕಾರಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದೆ ಎಂದು ಪಾಕಿಸ್ತಾನ ಹೇಳಿದೆ. ಹೆಚ್ಚುವರಿಯಾಗಿ, ಪಾಕಿಸ್ತಾನಿ ಪ್ರಜೆಗಳಿಗೆ ಸಹಾಯ ಮಾಡಲು ಮತ್ತು ಅಗತ್ಯ ನೆರವು ನೀಡಲು ಮೊರಾಕೊದಲ್ಲಿರುವ ಪಾಕಿಸ್ತಾನಿ ರಾಯಭಾರ ಕಚೇರಿಯ ತಂಡವನ್ನು ದಖ್ಲಾಗೆ ಕಳುಹಿಸಲಾಗಿದೆ.



# ಮುಂಬೈ ಅಸುರಕ್ಷಿತ ಎನ್ನುವುದು ಅನ್ಯಾಯ

**ಮುಂಬೈ:** , "ದೇಶದ ಎಲ್ಲಾ ಮಹಾ ನಗರಗಳ ಪೈಕಿ ಮುಂಬೈ ಅತ್ಯಂತ ಸುರಕ್ಷಿತ ನಗರ ಎಂದು ನಾನು ಭಾವಿಸುತ್ತೇನೆ. ಕೆಲವೊಮ್ಮೆ ಕೆಲವು ಘಟನೆಗಳನ್ನು ಗಂಭೀರವಾಗಿ ಪರಿಗಣಿಸಬೇಕಾದದ್ದು ನಿಜ. ಆದರೆ, ಈ ಘಟನೆಯಿಂದಾಗಿ ಮುಂಬೈ ಅಸುರಕ್ಷಿತವಾಗಿದೆ ಎಂದು ಹೇಳುವುದು ಅನ್ಯಾಯವಾಗುತ್ತದೆ ಎಂದು ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಹೇಳಿದ್ದಾರೆ.

ಬಾಲಿವುಡ್ ನಟ ಸೈಫ್ ಅಲಿ ಖಾನ್ ಮೇಲೆ ನಡೆದ ಹಲ್ಲೆಯ ಬಗ್ಗೆ ಪ್ರತಿಕ್ರಿಯಿಸಿದ ಅವರು, ಪೊಲೀಸರು ಈಗಾಗಲೇ ನಿಮಗೆ ಇದರ ಬಗ್ಗೆ ಎಲ್ಲಾ ಮಾಹಿತಿಯನ್ನು ಒದಗಿಸಿದ್ದಾರೆ. ಈ ಹಲ್ಲೆಗೆ ಕಾರಣವೇನೆಂಬುದರ ತನಿಖೆ ನಡೆಯುತ್ತಿದೆ ಎಂದಿದ್ದಾರೆ.

"ಮುಂಬೈ ಇನ್ನು ಮುಂದೆ ಸುರಕ್ಷಿತ ಸ್ಥಳವಲ್ಲ" ಎಂದು ವಿರೋಧ ಪಕ್ಷದ ನಾಯಕರು ಮಾಡುತ್ತಿರುವ ಟೀಕೆಗಳ ಬಗ್ಗೆ ಪ್ರತಿಕ್ರಿಯಿಸಿದ ಸಿಎಂ, ಕೆಲವೊಮ್ಮೆ ಕೆಲವು ಘಟನೆಗಳನ್ನು ಗಂಭೀರವಾಗಿ ಪರಿಗಣಿಸಬೇಕಾದದ್ದು ನಿಜ. ಆದರೆ, ಈ ಘಟನೆಯಿಂದಾಗಿ ಮುಂಬೈ ಅಸುರಕ್ಷಿತವಾಗಿದೆ ಎಂದು ಹೇಳುವುದು ಅನ್ಯಾಯ. ಇದು ಮುಂಬೈ ನಗರದ ಪ್ರತಿಷ್ಠೆಯನ್ನು ಹಾಳು ಮಾಡುತ್ತದೆ. ಮುಂಬೈ ಇನ್ನಷ್ಟು ಸುರಕ್ಷಿತವಾಗುವಂತೆ ನೋಡಿಕೊಳ್ಳಲು ಸರ್ಕಾರ ಖಂಡಿತವಾಗಿಯೂ ಪ್ರಯತ್ನಿಸುತ್ತದೆ" ಎಂದಿದ್ದಾರೆ.

# ರಷ್ಯಾದಿಂದ ಹಿಂತಿರುಗಲು ಭಾರತೀಯರಿಗೆ ಒತ್ತಾಯ

**ನವದೆಹಲಿ:** ಉಕ್ರೇನ್ ವಿರುದ್ಧದ ಯುದ್ಧಕ್ಕಾಗಿ ರಷ್ಯಾದ ಮಿಲಿಟರಿ ಬೆಂಬಲ ಸೇವೆಯಿಂದ ನೇಮಕಗೊಂಡಿದ್ದ ಕೇರಳದ ವ್ಯಕ್ತಿಯೊಬ್ಬರ ಸಾವನ್ನು ವಿದೇಶಾಂಗ ಸಚಿವಾಲಯ (ಎಂಇಎ) ದೃಢಪಡಿಸಿದೆ. ಇದರ ನಡುವೆ ರಷ್ಯಾ ಸೇನೆಯಲ್ಲಿ ಉಳಿದಿರುವ ಭಾರತೀಯ ಪ್ರಜೆಗಳನ್ನು ಆದಷ್ಟು ಬೇಗ ಸ್ವದೇಶಕ್ಕೆ ಕಳುಹಿಸಬೇಕೆಂಬ ತನ್ನ ಬೇಡಿಕೆಯನ್ನು ಪುನರುಚ್ಚರಿಸಿದೆ.

"ಈ ವಿಷಯವನ್ನು ಇಂದು ಮಾಸ್ಕೋದಲ್ಲಿರುವ ರಷ್ಯಾದ ಅಧಿಕಾರಿಗಳೊಂದಿಗೆ ಹಾಗೂ ನವದೆಹಲಿಯಲ್ಲಿರುವ ರಷ್ಯಾದ ರಾಯಭಾರ ಕಚೇರಿಯೊಂದಿಗೆ ಚರ್ಚಿಸಲಾಗಿದೆ. ರಷ್ಯಾ ಸೇನೆಯಲ್ಲಿನ ಉಳಿದ ಭಾರತೀಯ ಪ್ರಜೆಗಳನ್ನು ಆದಷ್ಟು ಬೇಗ ಬಿಡುಗಡೆ ಮಾಡಬೇಕೆಂಬ ನಮ್ಮ ಬೇಡಿಕೆಯನ್ನು ನಾವು ಪುನರುಚ್ಚರಿಸಿದ್ದೇವೆ" ಎಂದು ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಹೇಳಿದ್ದಾರೆ.

"ರಷ್ಯಾದ ಸೇನೆಯಲ್ಲಿ ಸೇವೆ ಸಲ್ಲಿಸಲು ನೇಮಕಗೊಂಡಿದ್ದ ಕೇರಳದ ಭಾರತೀಯ ಪ್ರಜೆಯ ದುರದೃಷ್ಟಕರ ಸಾವಿನ ಬಗ್ಗೆ ನಮಗೆ ತಿಳಿದುಬಂದಿದೆ. ಇದೇ ರೀತಿಯ ನೇಮಕಾತಿ ಪಡೆದಿದ್ದ ಕೇರಳದ ಮತ್ತೊಬ್ಬ ಭಾರತೀಯ ಪ್ರಜೆ ಗಾಯಗೊಂಡು ಮಾಸ್ಕೋದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಮೃತರ ಕುಟುಂಬಕ್ಕೆ ನಾವು ನಮ್ಮ ಸಂತಾಪವನ್ನು ವ್ಯಕ್ತಪಡಿಸುತ್ತೇವೆ" ಎಂದಿದ್ದಾರೆ.

ರಷ್ಯಾದ ಸೇನೆಯಲ್ಲಿ ಕೆಲಸ ಮಾಡುತ್ತಿದ್ದ ಕೇರಳದ ಭಾರತೀಯ ಪ್ರಜೆಯೊಬ್ಬರು ಇತ್ತೀಚೆಗೆ ಸಾವನ್ನಪ್ಪಿದ್ದರು ಮತ್ತು ಇನ್ನೊಬ್ಬರು ಗಾಯಗೊಂಡಿದ್ದರು. ಮಾಸ್ಕೋದಲ್ಲಿರುವ ರಾಯಭಾರ ಕಚೇರಿಯು ಮೃತದೇಹಗಳನ್ನು ಸಾಗಿಸಲು ಮತ್ತು ಗಾಯಾಳುಗಳನ್ನು ಭಾರತಕ್ಕೆ ವಾಪಸ್ ಕಳುಹಿಸಲು ಪ್ರಯತ್ನಿಸುತ್ತಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಇಂದು ಭಾರತವು ರಷ್ಯಾದ ಸೇನೆಯಲ್ಲಿ ಕೆಲಸ ಮಾಡುತ್ತಿರುವ ಭಾರತೀಯ ಪ್ರಜೆಗಳನ್ನು ಬೇಗನೆ ಬಿಡುಗಡೆ ಮಾಡಬೇಕೆಂಬ ತನ್ನ ಬೇಡಿಕೆಯನ್ನು ಪುನರುಚ್ಚರಿಸಿತು.


# ವಿದಾಯ ಭಾಷಣದಲ್ಲಿ ಬೈಡನ್ ಭಾವುಕ

**ಅಮೆರಿಕ:** ಅಮೆರಿಕದ ನೂತನ ಅಧ್ಯಕ್ಷರಾಗಿ ಡೊನಾಲ್ಡ್ ಟ್ರಂಪ್ ಆಯ್ಕೆಯಾಗಿದ್ದು, ಕೆಲವೇ ದಿನಗಳಲ್ಲಿ ಅಧಿಕಾರ ಸ್ವೀಕರಿಸಲಿದ್ದಾರೆ. ಇದೀಗ ಜೋ ಬೈಡನ್ ಅವರ ಅಧಿಕಾರಾವಧಿ ಪೂರ್ಣಗೊಂಡಿದ್ದು, ತಮ್ಮ ವಿದಾಯ ಭಾಷಣ ಮಾಡಿದ್ದಾರೆ. ತಮ್ಮ ನಾಲ್ಕು ವರ್ಷಗಳ ಅಧಿಕಾರಾವಧಿಯನ್ನು ಉಲ್ಲೇಖಿಸುವಾಗ ಭಾವುಕರಾದರು.

ಪಶ್ಚಿಮ ಏಷ್ಯಾದಲ್ಲಿ ಶಾಂತಿಯನ್ನು ಪುನಃಸ್ಥಾಪಿಸಲು ಪ್ರಮುಖ ಉಪಕ್ರಮವನ್ನು ತೆಗೆದುಕೊಳ್ಳಲಾಗಿದೆ ಎಂಬುದು ಗಮನಾರ್ಹ. ಇಸ್ರೇಲ್ ಮತ್ತು ಹಮಾಸ್ ನಡುವೆ ಕದನ ವಿರಾಮಕ್ಕೆ ಒಪ್ಪಿಗೆ ನೀಡಲಾಗಿದ್ದು, ಇದನ್ನು ಜಾಗತಿಕ ನಾಯಕರು ಸ್ವಾಗತಿಸಿದ್ದಾರೆ. ಕೆಲವು ಅಪಾಯಗಳ ಬಗ್ಗೆ ನಾನು ದೇಶವನ್ನು ಎಚ್ಚರಿಸಲು ಬಯಸುತ್ತೇನೆ ಎಂದು ಬೈಡನ್ ಹೇಳಿದರು, ಇಂದು ಅಧಿಕಾರ ಬೆರಳೆಣಿಕೆಯ ಜನರ ಕೈಗೆ ಸೀಮಿತವಾಗಿದೆ.

ಬೆರಳೆಣಿಕೆಯಷ್ಟು ಶ್ರೀಮಂತರ ಕೈಯಲ್ಲಿ ಅಧಿಕಾರ ಕೇಂದ್ರೀಕರಣವು ಅಪಾಯಕಾರಿ ಮತ್ತು ದೇಶದ ಪ್ರಜಾಪ್ರಭುತ್ವಕ್ಕೆ ಅಪಾಯವನ್ನುಂಟುಮಾಡುತ್ತದೆ. ಇದು ಜನರ ಮೂಲಭೂತ ಹಕ್ಕುಗಳಿಗೆ ಬೆದರಿಕೆ ಹಾಕುತ್ತದೆ ಏಕೆಂದರೆ ಇದು ಎಲ್ಲರಿಗೂ ಮುಂದುವರೆಯಲು ನೀಡಿದ ನ್ಯಾಯಯುತ ಅವಕಾಶಗಳನ್ನು ನಾಶಪಡಿಸುತ್ತದೆ ಎಂದರು.

ಅವರ ಕಪಿಮುಷ್ಠಿಯಿಂದ ದೇಶವನ್ನು ಹೊರತರಬೇಕಾಗುತ್ತದೆ, ಎಲ್ಲರಿಗೂ ನ್ಯಾಯಯುತ ಅವಕಾಶಗಳು ಸಿಗುತ್ತವೆ. ಆದರೆ ನೀವು ಕಷ್ಟಪಟ್ಟು ಕೆಲಸ ಮಾಡುವುದನ್ನು ನಿಲ್ಲಿಸಬಾರದು ಏಕೆಂದರೆ



ನಿಮ್ಮ ಕಠಿಣ ಪರಿಶ್ರಮ ಮತ್ತು ನಿಮ್ಮ ಪ್ರತಿಭೆ ಮಾತ್ರ ನಿಮ್ಮನ್ನು ಮುಂದೆ ಕೊಂಡೊಯ್ಯುತ್ತದೆ ಎಂದು ಹೇಳಿದರು.

ಅಧಿಕಾರ ಮತ್ತು ಕರ್ತವ್ಯಗಳ ಸಮತೋಲನವನ್ನು ಕಾಪಾಡಿಕೊಳ್ಳುವುದು ಯಾವಾಗಲೂ ಪರಿಪೂರ್ಣವಲ್ಲ ಆದರೆ ಇದು ಸುಮಾರು 250 ವರ್ಷಗಳಿಂದ ನಮ್ಮ ಪ್ರಜಾಪ್ರಭುತ್ವವನ್ನು ಬಲಪಡಿಸಿದೆ. ಇಷ್ಟು ವರ್ಷಗಳಲ್ಲಿ ನಾವು ಒಟ್ಟಾಗಿ ಏನು ಮಾಡಿದ್ದೇವೆ ಅದರ ಪರಿಣಾಮ ಏನಾಗಿದೆ? ಇದನ್ನು ಅರ್ಥಮಾಡಿಕೊಳ್ಳಲು ಸಮಯ ತೆಗೆದುಕೊಳ್ಳುತ್ತದೆ.


ಆದರೆ ನಾವು ಬಿತ್ತಿದ ಬೀಜಗಳು ಬೃಹತ್ ಮರಗಳಾಗಿ ಬೆಳೆಯುತ್ತವೆ ಮತ್ತು ದಶಕಗಳವರೆಗೆ ಪ್ರಯೋಜನಗಳನ್ನು ನೀಡುತ್ತಲೇ ಇರುತ್ತವೆ. ನ್ಯಾಟೋವನ್ನು ಬಲಪಡಿಸುವುದು, ಬಂದೂಕು ಸುರಕ್ಷತಾ ಕಾನೂನುಗಳನ್ನು ಜಾರಿಗೊಳಿಸುವುದು ಮತ್ತು ವಯಸ್ಸಾದವರಿಗೆ ಔಷಧಿ ಬೆಲೆಗಳನ್ನು ಕಡಿಮೆ ಮಾಡುವುದು ನಮ್ಮ ಆಡಳಿತದ ಕೆಲವು ಸಾಧನೆಗಳು ಎಂದು ಬೈಡನ್ ಹೇಳಿದರು.

# 2ಕ್ಕಿಂತ ಕಡಿಮೆ ಮಕ್ಕಳಿದ್ದರೆ ಚುನಾವಣೆಯಲ್ಲಿ ಸ್ಪರ್ಧಿಸಲು ಅವಕಾಶವಿಲ್ಲ: ಆಂಧ್ರ ಮುಖ್ಯಮಂತ್ರಿ

**ಹೈದರಾಬಾದ್:** ಎರಡಕ್ಕಿಂತ ಹೆಚ್ಚು ಮಕ್ಕಳನ್ನು ಹೊಂದಿರುವ ವ್ಯಕ್ತಿಗಳಿಗೆ ಮಾತ್ರ ಪಂಚಾಯತ್ ಮತ್ತು ಪುರಸಭೆಯ ಚುನಾವಣೆಗಳಲ್ಲಿ ಸ್ಪರ್ಧಿಸಲು ಅವಕಾಶ ನೀಡುವ ಪ್ರಸ್ತಾಪವನ್ನು ಟಿಡಿಪಿ ಗಂಭೀರವಾಗಿ ಪರಿಗಣಿಸಿದೆ ಎಂದು ಆಂಧ್ರಪ್ರದೇಶದ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಹೇಳಿದ್ದಾರೆ.

ಈ ಮೂಲಕ 2 ಮಕ್ಕಳಿಗಿಂತ ಕಡಿಮೆ ಮಕ್ಕಳನ್ನು ಹೊಂದಿರುವವರಿಗೆ ಸ್ಥಳೀಯ ಚುನಾವಣೆಯಲ್ಲಿ ಸ್ಪರ್ಧಿಸಲು ಅವಕಾಶ ನೀಡದಿರುವ ಸುಳಿವನ್ನು ಅವರು ನೀಡಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡುತ್ತಾ ಆಂಧ್ರದ ಸಿಎಂ ಚಂದ್ರಬಾಬು ನಾಯ್ಡು, ಎರಡಕ್ಕಿಂತ ಹೆಚ್ಚು ಮಕ್ಕಳನ್ನು ಹೊಂದಿರುವ ಜನರು ಸ್ಥಳೀಯ ಸಂಸ್ಥೆ, ನಾಗರಿಕ ಸಂಸ್ಥೆಗಳ ಚುನಾವಣೆಯಲ್ಲಿ ಸ್ಪರ್ಧಿಸುವುದನ್ನು ತಡೆಯುವ



ಕಾನೂನನ್ನು ಆಂಧ್ರಪ್ರದೇಶ ರಾಜ್ಯ ವಿಧಾನಸಭೆ ರದ್ದುಗೊಳಿಸಿದ ಕೆಲವು ತಿಂಗಳುಗಳ ನಂತರ ಅವರು ಹೇಳಿದ್ದಾರೆ.

ಮಕ್ಕಳ ಸಂಖ್ಯೆಯನ್ನು ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಸ್ಪರ್ಧಿಸುವ ಅರ್ಹತೆಗೆ ಜೋಡಿಸುವ ವಿವಾದಾತ್ಮಕ ನೀತಿಯನ್ನು ಆಂಧ್ರಪ್ರದೇಶದ ಮುಖ್ಯಮಂತ್ರಿ ಎನ್ ಚಂದ್ರಬಾಬು ನಾಯ್ಡು ಪ್ರಸ್ತಾಪಿಸಿದ್ದಾರೆ. ಎರಡು ಮಕ್ಕಳಿಗಿಂತ ಕಡಿಮೆ ಮಕ್ಕಳಿರುವ ವ್ಯಕ್ತಿಗಳು ಸರಪಂಚ್, ಪುರಸಭೆ ಕೌನ್ಸಿಲರ್ ಅಥವಾ ಮೇಯರ್ ಹುದ್ದೆಗಳಿಗೆ ಸ್ಪರ್ಧಿಸುವುದನ್ನು ನಿಷೇಧಿಸಬೇಕು ಎಂದು ಅವರು ಸೂಚಿಸಿದ್ದಾರೆ.

ಇದು ಆಂಧ್ರಪ್ರದೇಶದಲ್ಲಿ ಕ್ಷೀಣಿಸುತ್ತಿರುವ ಫಲವತ್ತತೆ ದರವನ್ನು ಪರಿಹರಿಸಬಹುದು ಎಂದು ಅವರು ಸುಳಿವು ನೀಡಿದರು.

ಕಳೆದ ವರ್ಷ ನವೆಂಬರ್‌ನಲ್ಲಿ ಆಂಧ್ರಪ್ರದೇಶದ ಶಾಸಕಾಂಗ ಸಭೆಯು ಎರಡಕ್ಕಿಂತ ಹೆಚ್ಚು ಮಕ್ಕಳಿರುವವರು ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಸ್ಪರ್ಧಿಸುವುದನ್ನು ನಿಷೇಧಿಸುವ ಎಪಿ ಪಂಚಾಯತ್ ರಾಜ್ ಮತ್ತು ಎಪಿ ಪುರಸಭೆ ಕಾಯ್ದೆಗಳನ್ನು ತಿದ್ದುಪಡಿ ಮಾಡಲು ಮಸೂದೆಗಳನ್ನು ಅಂಗೀಕರಿಸಿತು. ಅದರ ಬೆನ್ನಲ್ಲೇ ಮಾತನಾಡಿರುವ ಸಿಎಂ ಚಂದ್ರಬಾಬು ನಾಯ್ಡು, ನಿಮ್ಮ ಪೋಷಕರು ನಾಲ್ಕರಿಂದ ಐದು ಮಕ್ಕಳನ್ನು ಹೆತ್ತರು. ನೀವು ಅದನ್ನು ಒಂದಕ್ಕೆ ಇಳಿಸಿದ್ದೀರಿ. ಇಂದು ಬುದ್ಧಿವಂತರು ಕೂಡ ಎರಡು ಪಟ್ಟು ಆದಾಯದ, ಮಕ್ಕಳಿಲ್ಲದ ಜೀವನಶೈಲಿಯನ್ನು ಆರಿಸಿಕೊಳ್ಳುತ್ತಿದ್ದಾರೆ. ಅವರ ಪೋಷಕರು ಇದೇ ರೀತಿ ಯೋಚಿಸಿದ್ದರೆ ಇಂದು ಅವರು ಅಸ್ತಿತ್ವದಲ್ಲೇ ಇರುತ್ತಿರಲಿಲ್ಲ. ಜಪಾನ್ ಮತ್ತು ದಕ್ಷಿಣ ಕೊರಿಯಾದಂತಹ ದೇಶಗಳು ಈಗಾಗಲೇ ವಯಸ್ಸಾದ ಜನಸಂಖ್ಯೆ ಮತ್ತು ಕುಸಿಯುತ್ತಿರುವ ಜನನ ದರಗಳೊಂದಿಗೆ ಹೋರಾಡುತ್ತಿವೆ ಎಂದು ಅವರು ಒತ್ತಿ ಹೇಳಿದ್ದರು.

# ಪರಮಾಣು ವಿದ್ಯುತ್ ಉತ್ಪಾದನೆ: ಖಾಸಗಿ ವಲಯಗಳಿಂದ ಹೂಡಿಕೆಗೆ ಕೇಂದ್ರ ಸರ್ಕಾರ ಕ್ರಮ

**ನವದೆಹಲಿ:** ಕಳೆದ ವರ್ಷ ಲೋಕಸಭೆ ಚುನಾವಣೆ ನಂತರ ಕೇಂದ್ರ ಬಜೆಟ್ ನಲ್ಲಿ ಮಾಡಿದ ಘೋಷಣೆಗೆ ಅನುಗುಣವಾಗಿ ಮತ್ತು ಅಮೆರಿಕ ಸೇರಿದಂತೆ ಅಂತಾರಾಷ್ಟ್ರೀಯ ಪಾಲುದಾರರಿಗೆ ಸಕಾರಾತ್ಮಕ ಸೂಚನೆ ನೀಡುವ ಕಾರ್ಯತಂತ್ರದ ಕ್ರಮದ ಭಾಗವಾಗಿ ಕೇಂದ್ರ ಸರ್ಕಾರವು ಪರಮಾಣು ವಲಯವನ್ನು ಖಾಸಗಿ ಹೂಡಿಕೆಗೆ ಮುಕ್ತಗೊಳಿಸಲು ಕ್ರಮಗಳನ್ನು ತೆಗೆದುಕೊಂಡಿದೆ.

ದೇಶದ ಏಕೈಕ ಪರಮಾಣು ವಿದ್ಯುತ್ ನಿರ್ವಾಹಕವಾದ ನ್ಯೂಕ್ಲಿಯರ್ ಪವರ್ ಕಾರ್ಪೊರೇಷನ್ ಆಫ್ ಇಂಡಿಯಾ ಲಿಮಿಟೆಡ್, ಪ್ರಸ್ತಾವನೆಗಳಿಗಾಗಿ ವಿನಂತಿಯನ್ನು ಹೊರಡಿಸಿದ್ದು, ಸರ್ಕಾರಿ ನಿಯಮಗಳ ಪ್ರಕಾರ ಕ್ಯಾಪ್ಟಿವ್ ಬಳಕೆ ಮತ್ತು ವಿದ್ಯುತ್ ಮಾರಾಟಕ್ಕಾಗಿ 220 ಮೆಗಾ ವ್ಯಾಟ್ ಭಾರತ್ ಸ್ಮಾಲ್ ರಿಯಾಕ್ಟರ್‌ಗಳ ಪ್ರಸ್ತಾವಿತ ಉದ್ದೇಶಗಳಿಗೆ ಹಣಕಾಸು ಒದಗಿಸಲು ಭಾರತೀಯ ಕೈಗಾರಿಕೆಗಳನ್ನು ಆಹ್ವಾನಿಸಿದೆ ಎಂದು ಸಾರ್ವಜನಿಕ ವಲಯ ಘಟಕ ತಿಳಿಸಿದೆ.

ಪ್ರಸ್ತಾವನೆಗಳನ್ನು ಸಲ್ಲಿಸಲು ಮಾರ್ಚ್ 31 ಕೊನೆಯ ದಿನವಾಗಿದೆ. ಅಂತಹ ಪರಮಾಣು ರಿಯಾಕ್ಟರ್‌ಗಳ ಸ್ಥಾಪನೆಯು ಇಂಗಾಲದ ಹೊರಸೂಸುವಿಕೆ ಕಡಿಮೆ ಮಾಡುವ ಮೂಲಕ 2070 ರ ಸರ್ಕಾರದ ಶೂನ್ಯ ಹೊರಸೂಸುವಿಕೆ ಗುರಿಯೊಂದಿಗೆ ಹೊಂದಿಕೆಯಾಗುತ್ತದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಪರಮಾಣು ಶಕ್ತಿ ನವೀಕರಿಸಬಹುದಾದ ಶಕ್ತಿಯಲ್ಲ ಆದರೆ ಇದು ಶೂನ್ಯ-ಹೊರಸೂಸುವ ಶುದ್ಧ ಇಂಧನ ಮೂಲವಾಗಿದೆ.

ಬಿಎಸ್ ಆರ್‌ಗಳನ್ನು ಖಾಸಗಿ ಬಂಡವಾಳದೊಂದಿಗೆ ಸ್ಥಾಪಿಸಲು ಉದ್ದೇಶಿಸಲಾಗಿದೆ, ಈಗಿರುವ ಕಾನೂನು ಚೌಕಟ್ಟು ಮತ್ತು ಅನುಮೋದಿತ ವ್ಯವಹಾರ ಮಾದರಿಗಳಲ್ಲಿ ಕಾರ್ಯನಿರ್ವಹಿಸುತ್ತದೆ. ಕಾರ್ಯಾಚರಣೆಯ ಉದ್ದೇಶಗಳಿಗಾಗಿ, ಸ್ಥಾವರ ಸ್ವತ್ತುಗಳನ್ನು ಎನ್ ಪಿಸಿಐಎಲ್ ಗೆ ವರ್ಗಾಯಿಸಲಾಗುತ್ತದೆ. ಭಾರತೀಯ ಕಾನೂನುಗಳ ಪ್ರಕಾರ, ಎನ್ ಪಿಸಿಐಎಲ್ ದೇಶದ ಪರಮಾಣು ವಿದ್ಯುತ್ ಸ್ಥಾವರಗಳ ಏಕೈಕ ನಿರ್ವಾಹಕವಾಗಿದೆ. ಬಳಕೆದಾರರು ಉತ್ಪಾದಿಸಿದ ಶಕ್ತಿಯನ್ನು ತನ್ನದೇ ಆದ ಕ್ಯಾಪ್ಟಿವ್ ಅಗತ್ಯಗಳಿಗಾಗಿ ಬಳಸಬೇಕೆಂದು ನಿರೀಕ್ಷಿಸಲಾಗಿದೆ. ಆದರೆ ಭಾರತೀಯ ಕಾನೂನುಗಳಿಗೆ ಅನುಸಾರವಾಗಿ ಪರಮಾಣು ಇಂಧನ ಇಲಾಖೆ ನಿಗದಿಪಡಿಸಿದ ಸುಂಕದಲ್ಲಿ ಇತರ ಗ್ರಾಹಕರಿಗೆ ವಿದ್ಯುತ್ ನ್ನು ಮಾರಾಟ ಮಾಡಬಹುದು.

ಯೋಜನಾ ಪೂರ್ವ ಹಂತಗಳು, ನಿರ್ವಹಣೆ, ಹಾನಿಯ ಸಂದರ್ಭದಲ್ಲಿ ಆಸ್ತಿ ಮರುಸ್ಥಾಪನೆ ಮತ್ತು ನಿಷ್ಕ್ರಿಯಗೊಳಿಸುವಿಕೆ ಸೇರಿದಂತೆ ಎಲ್ಲಾ ಬಂಡವಾಳ ಮತ್ತು ನಿರ್ವಹಣಾ ವೆಚ್ಚಗಳಿಗೆ ಬಳಕೆದಾರರು ಜವಾಬ್ದಾರರಾಗಿರುತ್ತಾರೆ. ಎನ್ ಪಿಸಿಐಎಲ್ ನ ಮೇಲ್ವಿಚಾರಣೆಯಲ್ಲಿ ಬಳಕೆದಾರರು ಯೋಜನೆಯನ್ನು ನಿರ್ಮಿಸುತ್ತಾರೆ ಮತ್ತು ಪೂರ್ಣಗೊಂಡ ನಂತರ, ಸ್ಥಾವರವನ್ನು ಕಾರ್ಯಾಚರಣೆಗಾಗಿ ಎನ್ ಪಿಸಿಐಎಲ್ ಗೆ ವರ್ಗಾಯಿಸಲಾಗುತ್ತದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಡಿಸೆಂಬರ್ 4 ರಂದು ಲೋಕಸಭೆಗೆ ಲಿಖಿತ ಪ್ರತಿಕ್ರಿಯೆಯಾಗಿ ತನ್ನ ಪರಮಾಣು ವಿದ್ಯುತ್ ಕಾರ್ಯಕ್ರಮದ ಭಾಗವಾಗಿ ಬಿಎಸ್‌ಆರ್‌ಗಳಿಗಾಗಿ ಸರ್ಕಾರದ ದೃಷ್ಟಿಕೋನವನ್ನು ವಿವರಿಸಿದ ಕೇಂದ್ರ ವಿದ್ಯುತ್ ಖಾತೆ ರಾಜ್ಯ ಸಚಿವ ಜಿತೇಂದ್ರ ಸಿಂಗ್ ಅವರ ಹೇಳಿಕೆಯ ನಂತರ ಆರ್‌ಎಫ್‌ಪಿ ಘೋಷಣೆ ಮಾಡಲಾಗಿದೆ.

ಭಾರತ್ ಶೂನ್ಯ ರಿಯಾಕ್ಟರ್‌ಗಳು 220 ಮೆಗಾ ವ್ಯಾಟ್ ಒತ್ತಡದ ಭಾರೀ ನೀರಿನ ರಿಯಾಕ್ಟರ್‌ಗಳಾಗಿವೆ, ಭಾರತವು ಈಗಾಗಲೇ 220 ಮೆಗಾವ್ಯಾಟ್ ಒತ್ತಡದ ಭಾರೀ ನೀರಿನ ರಿಯಾಕ್ಟರ್ ವಿನ್ಯಾಸವನ್ನು ನಿರ್ವಹಿಸುತ್ತಿದೆ, ಅವುಗಳಲ್ಲಿ ಹಲವು ಉತ್ತರ ಪ್ರದೇಶದ ನರೋರಾ ಮತ್ತು ಗುಜರಾತ್‌ನ ಕಾಕ್ರಾಪರ್ ಸೇರಿದಂತೆ ದೇಶಾದ್ಯಂತ ಕಾರ್ಯನಿರ್ವಹಿಸುತ್ತಿವೆ.

# ಹತ್ತಿ ಬೆಳೆಗಾರರಿಗೆ ಡ್ರಿಪ್ ಇರಿಗೇಶನ್ ಸಿಸ್ಟಂ ಬಜೆಟ್‌ನಲ್ಲಿ 500 ಕೋಟಿ ರೂ ನೀಡಲು ಒತ್ತಾಯ

**ನವದೆಹಲಿ:** ಹತ್ತಿ ಬೆಳೆಯುವ ರೈತರಿಗೆ ಡ್ರಿಪ್ ಇರಿಗೇಶನ್ ಅನ್ನು ಉತ್ತೇಜಿಸಲು ಬಜೆಟ್‌ನಲ್ಲಿ 500 ರೂ ಒದಗಿಸಿ ಎಂದು ಭಾರತೀಯ ಹತ್ತಿ ಸಂಸ್ಥೆ ಸಿಎಐ ಮನವಿ ಮಾಡಿದೆ.

ಭಾರತದಲ್ಲಿ ಶೇ.67ರಷ್ಟು ಹತ್ತಿಯನ್ನು ಮಳೆಯಾಶ್ರಿತ ಪ್ರದೇಶಗಳಲ್ಲಿ ಬೆಳೆಯಲಾಗುತ್ತಿದೆ. ಈ ಮಳೆಯಾಶ್ರಿತ ಪ್ರದೇಶಗಳಲ್ಲಿ ಹನಿ ನೀರಾವರಿ ವ್ಯವಸ್ಥೆ ಅಳವಡಿಸುವುದರಿಂದ ಹತ್ತಿ ಫಸಲು ಹೆಚ್ಚಲು ನೆರವಾಗುತ್ತದೆ ಎಂಬುದು ಈ ಸಂಸ್ಥೆಯ ವಾದ.

ಮಳೆಯಾಶ್ರೀತ ಪ್ರದೇಶಗಳಲ್ಲಿ ರೈತರು ನೀರಿಗಾಗಿ ಸಂಪೂರ್ಣವಾಗಿ ಮಳೆಯ ಮೇಲೆಯೇ ಅವಲಂಬಿತರಾಗಿರುತ್ತಾರೆ. ಹತ್ತಿ ಬೆಳವಣಿಗೆಯಲ್ಲಿ ಹೂ ಮತ್ತು ಹಣ್ಣು ಬಿಡುವುದು ಪ್ರಮುಖ ಹಂತವಾಗಿದ್ದು, ಈ ಸಂದರ್ಭದಲ್ಲಿ ನೀರಿನ ಅವಶ್ಯಕತೆ ಅತಿಹೆಚ್ಚು ಇರುತ್ತದೆ. ಹತ್ತಿ ಬೆಳೆಗೆ ಒಟ್ಟಾರೆ ಅಗತ್ಯ ಇರುವ ನೀರಿನಲ್ಲಿ ಶೇ. 80ರಷ್ಟು ಅಗತ್ಯಗಳು ಹೂ ಮತ್ತು ಹಣ್ಣು ಬಿಡುವ ಸಂದರ್ಭದಲ್ಲೇ ಇರುತ್ತವೆ ಎಂದು ಸಿಎಐನ ವಾರ್ಷಿಕ ಮಹಾಸಭೆಯಲ್ಲಿ ಅದರ ಅಧ್ಯಕ್ಷರಾದ ಅತುಲ್ ಗಣಾತ್ರ ಹೇಳಿದ್ದಾರೆ.

ನೀರಾವರಿ ಭೂಮಿಗಳಿಗೆ ಹೋಲಿಸಿದರೆ ಮಳೆಯಾಧರಿತ ಕೃಷಿ ಭೂಮಿಗಳಲ್ಲಿ ಹತ್ತಿ ಬೆಳೆಯ ಫಸಲು ಬಹಳ ಕಡಿಮೆ ಇರುತ್ತದೆ. ಮಹಾರಾಷ್ಟ್ರ, ಕರ್ನಾಟಕ, ಮಧ್ಯಪ್ರದೇಶ, ಆಂಧ್ರಪ್ರದೇಶ, ತಮಿಳುನಾಡು, ಗುಜರಾತ್ ರಾಜ್ಯಗಳಲ್ಲಿ ಮಳೆ ನೀರಿನ ಕೊರತೆಯಿಂದಾಗಿ ಹತ್ತಿ ಫಸಲು ಕಡಿಮೆ ಇದೆ ಎಂದು ಅತುಲ್ ಅವರು ವಿವರಿಸಿದ್ದಾರೆ.

ಮಳೆಯಾಶ್ರಿತ ಪ್ರದೇಶಗಳಲ್ಲಿನ ರೈತರು ಹನಿ ನೀರಾವತಿ ತಂತ್ರಜ್ಞಾನವನ್ನು ಅಳವಡಿಸಿಕೊಳ್ಳಲು ಉತ್ತೇಜಿಸಲು ಸರ್ಕಾರವು ಬಜೆಟ್‌ನಲ್ಲಿ ನೆರವು ಒದಗಿಸಬೇಕು. ಡ್ರಿಪ್ ಇರಿಗೇಶನ್ ವಿಧಾನದಿಂದ ಶೇ. 50ರಷ್ಟು ನೀರನ್ನು ಉಳಿಸಲೂ ಸಾಧ್ಯವಾಗುತ್ತದೆ ಎಂದು ಸಿಎಐ ಅಧ್ಯಕ್ಷರು ತಿಳಿಸಿದ್ದಾರೆ.

'ಭಾರತದಲ್ಲಿ ಹನಿ ನೀರಾವರಿ ವ್ಯವಸ್ಥೆಯನ್ನು ಸ್ಥಾಪಿಸಲು ಸಾಕಷ್ಟು ವೆಚ್ಚವಾಗುತ್ತದೆ. ಹೀಗಾಗಿ, ಬಜೆಟ್‌ನಲ್ಲಿ ಕನಿಷ್ಠ 500 ಕೋಟಿ ರೂನಷ್ಟು ನೆರವನ್ನಾದರೂ ಒದಗಿಸಬೇಕು' ಎಂದು ಅವರು ಒತ್ತಾಯಿಸಿದ್ದಾರೆ.

ಭಾರತದಲ್ಲಿ ಈ ಸೀಸನ್‌ನಲ್ಲಿ ಹತ್ತಿ ಉತ್ಪಾದನೆ ಶೇ. 7.70ರಷ್ಟು ಕಡಿಮೆ ಆಗಬಹುದು ಎನ್ನುವ ಅಂದಾಜು ಇದೆ. ಕಳೆದ ವರ್ಷ 32.74 ಮಿಲಿಯನ್ ಬೇಲ್‌ನಷ್ಟು ಹತ್ತಿ ಫಸಲು ಬಂದಿತ್ತು. ಈ ವರ್ಷದ ಸೀಸನ್‌ನಲ್ಲಿ ಅದು 30.22 ಮಿಲಿಯನ್ ಬೇಲ್‌ಗೆ ಇಳಿಕೆ ಆಗುವ ನಿರೀಕ್ಷೆ ಇದೆ. 2024-25ರಲ್ಲಿ ಭಾರತವು 2.5 ಮಿಲಿಯನ್ ಬೇಲ್‌ನಷ್ಟು ಹತ್ತಿಯನ್ನು ಅಮದು ಮಾಡಿಕೊಳ್ಳಬೇಕಾಗಬಹುದು ಎಂದು ಸಿಎಐ ಅಂದಾಜು ಮಾಡಿದೆ.

# ಪ್ರತಿಯೊಬ್ಬ ಹೀರೋನೂ ಕೊನೆಯಲ್ಲಿ ಬೋರ್ ಆಗ್ತಾನೆ



ಕನ್ನಡ ಚಿತ್ರರಂಗದ ಅಭಿನಯ ಚಕ್ರವರ್ತಿ ಕಿಚ್ಚ ಸುದೀಪ್ ನಟನೆ ಮ್ಯಾಕ್ಸ್ ಸಿನಿಮಾ ಸೂಪರ್ ಹಿಟ್ ಪ್ರದರ್ಶನ ಪಡೆದಿದೆ. ಇದರ ಜೊತೆಯಲ್ಲಿ ಬಿಗ್ ಬಾಸ್ ಸೀಸನ್ 11 ರಿಯಾಲಿಟಿ ಶೋ ಮುಕ್ತಾಯ ಆಗಲಿದೆ. ಸುಮಾರು 11 ವರ್ಷಗಳಿಂದ ನಡೆಸಿಕೊಂಡು ಬಂದ ಕಾರ್ಯಕ್ರಮಕ್ಕೆ ಗುಡ್ ಬೈ ಹೇಳು ಸಮಯ ಬಂದಿದೆ. ಹೀಗಾಗಿ ಸುದೀಪ್ ಮುಂದಿನ ಪ್ಲ್ಯಾನ್ ಏನು? ಅಲ್ಲದೆ ಸುದೀಪ್ ನಿವೃತ್ತಿ ಪಡೆಯುತ್ತಾರೆ ಎಂದು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿದೆ. ಇದರ ಬಗ್ಗೆ ಸ್ವತಃ ನಟ ಹೇಳುವುದು ಏನು?

ರಾಘವೇಂದ್ರ ಪಾಡ್‌ಕಾಸ್ಟ್‌ನಲ್ಲಿ ಮಾತನಾಡಿದ ಸುದೀಪ್‌ರನ್ನು ನಿವೃತ್ತಿ ಬಗ್ಗೆ ಪ್ರಶ್ನೆ ಮಾಡಲಾಗಿತ್ತು. ಒಂದು ವೇಳೆ ನಿವೃತ್ತಿ ಪಡೆದರೂ ಕೂಡ ಅದು ಪ್ಯಾಷನ್‌ನಿಂದ ಹಿಂದೆ ಸರೆಯುವುದು ಅಲ್ಲ ಎಂದಿದ್ದಾರೆ. 'ಕೊನೆಯಲ್ಲಿ ಪ್ರತಿಯೊಬ್ಬ ಹೀರೋ ಬೋರ್ ಆಗ್ತಾನೆ. ಲೀಡಿಂಗ್ ಮ್ಯಾನ್ ಆಗಿ ಪ್ರತಿಯೊಬ್ಬರಿಗೂ ಶೆಲ್ಫ್ ಲೈಫ್ ಇರುತ್ತದೆ. ಹೀರೋ ಆಗಿ ನಾನು ಯಾವತ್ತೂ ಯಾರಿಗೂ ಸೆಟ್‌ನಲ್ಲಿ ಕಾಯಿಸಿಲ್ಲ. ಮುಂದಿನ ದಿನಗಳಲ್ಲಿ ನಾನು ಸಪೋರ್ಟಿಂಗ್ ಪಾತ್ರ ಮಾಡಿದ್ದರೂ ಕೂಡ ಅಲ್ಲಿ ನಾನು ಮತ್ತೊಬ್ಬರಿಗೆ ಕಾಯಲು ಇಷ್ಟ ಪಡುವುದಿಲ್ಲ' ಎಂದು ಮಾತನಾಡಿದ್ದಾರೆ.

ಆದರೆ ಇತ್ತೀಚಿಗೆ ಸುದೀಪ್ ಕಡಿಮೆ ಸಿನಿಮಾಗಳನ್ನು ಒಪ್ಪಿಕೊಳ್ಳುತ್ತಿದ್ದಾರೆ ಅನ್ನೋ ಮಾತುಗಳು ಕೇಳಿ ಬರುತ್ತಿದೆ. ಪ್ರಾಜೆಕ್ಟ್‌ನಲ್ಲಿ ಇರುವ ಕ್ವಾಲಿಟಿ ಬಗ್ಗೆ ಇಲ್ಲಿ ಮಾತನಾಡುತ್ತಿಲ್ಲ ಅದು ಏನೇ ಇದ್ದರೂ ಎಟಣಟಿಛಿಣ ಮತ್ತು ಡಿಸೈಯರ್ ಎಂದಿದ್ದಾರೆ. ಒಂದು ವೇಳೆ ನಿವೃತ್ತಿ ಪಡೆದರೂ ಕೂಡ ಸಿನಿಮಾ ಇಂಡಸ್ಟ್ರಿಯನ್ನು ಎಂದೂ ಬಿಟ್ಟು ಹೋಗುವುದಿಲ್ಲ ಎಂಬ ನಂಬಿಕೆಯನ್ನು ಅಭಿಮಾನಿಗಳಿಗೆ ನೀಡಿದ್ದಾರೆ. ಸಿನಿಮಾ ನಿರ್ದೇಶನ ಮಾಡುವುದು ಅಥವಾ ನಿರ್ಮಾಣ ಮಾಡುವ ಕಡೆ ಸುದೀಪ್ ಮುಂದುವರೆಯಬಹುದು. ಎಲ್ಲಿಂದ ಸುದೀಪ್ ನಿವೃತ್ತಿ ಪಡೆಯುತ್ತಾರೆ ಎಂದು ಗಾಸಿಪ್ ಹಬ್ಬಿದೆ ಗೊತ್ತಿಲ್ಲ ಆದರೆ ಯಾವುದೇ ಕಾರಣ ಕನ್ನಡ ಚಿತ್ರರಂಗವನ್ನು ಸುದೀಪ್ ಬಿಡುವುದಿಲ್ಲ ಹಾಗೂ ಬಿಟ್ಟು ಕೊಡುವುದಿಲ್ಲ. ಇಂಡಸ್ಟ್ರಿಯಲ್ಲಿ ಏನೇ ಸಮಸ್ಯೆ ಆದರೂ ಸರಿಯಾದ ಸಮಯಕ್ಕೆ ಸುದೀಪ್ ಧ್ವನಿ ಎತ್ತಿದ್ದಾರೆ ಅಲ್ಲದೆ ಇತರ ಕಲಾವಿದರಿಗೆ ಸಹಾಯ ಕೂಡ ಮಾಡಿದ್ದಾರೆ. ಸುದೀಪ್ ರವರಿಗೆ ದೊಡ್ಡ ಸ್ಥಾನ ನೀಡಿದ್ದಾರೆ ಅಭಿಮಾನಿಗಳು ಹೀಗಾಗಿ ನಿವೃತ್ತಿ ಪಡೆದರೂ ಪರ್ವಾಗಿಲ್ಲ ಆಗಾಗ ಸಿನಿಮಾ ಮಾಡಿ ಅಂತಿದ್ದಾರೆ.

# ಸೀರೆಯಲ್ಲಿ 'ಅಪ್ಸರೆ' ಸಂಗೀತ



ಕನ್ನಡ ಬಿಗ್ ಬಾಸ್ 10ರ ಚೆಲುವೆ, ನಟಿ ಸಂಗೀತ ಶೃಂಗೇರಿ ಬಿಗ್ ಬಾಸ್ ಮನೆಯಲ್ಲಿ ತಮ್ಮ ಅದ್ಭುತ ಆಟದ ಮೂಲಕ ಧೂಳೆಬ್ಬಿಸಿದ್ದರು. ಅಲ್ಲಿಂದ ಹೊರ ಬಂದ ಮೇಲೆ ನಟಿ ಸೋಷಿಯಲ್ ಮೀಡಿಯಾದಲ್ಲಿ ಸಿಕ್ಕಾಪಟ್ಟೆ ಆಕ್ಟೀವ್ ಆಗಿದ್ದಾರೆ. ಹೆಚ್ಚಾಗಿ ತಮ್ಮ ಫೋಟೋ ಶೂಟ್ ಶೇರ್ ಮಾಡುತ್ತಲೇ ಇರುತ್ತಾರೆ.

ಬಿಗ್ ಬಾಸ್ ಮುಗಿದ ಬಳಿಕ ಸಂಗೀತಾ ಅಭಿನಯದ ಮಾರಿಗೋಲ್ಡ್ ಸಿನಿಮಾ ಕೂಡ ರಿಲೀಸ್ ಆಗಿತ್ತು, ಈ ಸಿನಿಮಾದಲ್ಲಿ ಸಂಗೀತಾ, ದಿಗಂತ್ ಗೆ ನಾಯಕಿಯಾಗಿ ನಟಿಸಿದ್ದರು. ಈ ಸಿನಿಮಾ ಅಷ್ಟೊಂದು ಸದ್ದು ಮಾಡಿಲ್ಲ. ಅದಾದ ಬಳಿಕ ಯಾವ ಸಿನಿಮಾದಲ್ಲಿ ಸಂಗೀತಾ ನಟಿಸಿರಲಿಲ್ಲ. ಆದರೆ ತಮ್ಮ ಸ್ಪಿರೀಚುವಲ್ ಜರ್ನಿ ಹಾಗೂ ತಮ್ಮ ಹೊಸ ಬ್ಯುಸಿನೆಸ್ ಮೂಲಕ ಜನರ ಜೊತೆ ಮತ್ತಷ್ಟು ಕನೆಕ್ಟ್ ಆದರು ಈ ಬೆಡಗಿ.

ಹೌದು ಸಂಗೀತ ಶೃಂಗೇರಿ ತಮ್ಮದೇ ಆದ ಕ್ರಿಸ್ಟಲ್ ಬೀಡ್ಸ್ ಗಳ ಬ್ಯುಸಿನೆಸ್ ಆರಂಭಿಸಿದ್ದರು. ಇದರಿಂದ ಸಿಂಹಿಣಿ ಬೈ ಸಂಗೀತಾ ಶೃಂಗೇರಿ ಅಂತಾನೆ ಹೆಸರಿಟ್ಟಿದ್ದರು. ಇದಕ್ಕೆ ಕಾರಣ, ಸಂಗೀತಾರ ಬಿಗ್ ಬಾಸ್ ಆಟ, ಕಾಂಪಿಟೀಶನ್ ಎಲ್ಲಾ ನೋಡಿ, ಜನ ಆಕೆಯನ್ನು ಸಿಂಹಿಣಿ ಅಂತಾನೆ ಕರೆಯುತ್ತಿದ್ದಾರೆ. ಹಾಗಾಗಿ ಸಂಗೀತ ಅದೇ ಹೆಸರಿನಲ್ಲಿ ತಮ್ಮ ಹೊಸ ಬ್ಯುಸಿನೆಸ್ ಕೂಡ ಆರಂಭಿಸಿದ್ದರು.

ಆಧ್ಯಾತ್ಮಿಕತೆಯ ಕಡೆಗೆ ಒಲವು ಬೆಳೆಸಿಕೊಂಡಿರುವ ಸಂಗೀತ ಶೃಂಗೇರಿ ಆದಿ ಯೋಗಿ, ಕಾಶಿ, ವಾರಣಾಸಿ ಎನ್ನುತ್ತಾ, ಕಳೆದ ವರ್ಷ ತಮ್ಮ ಸ್ಪಿರೀಚುವಲ್ ಜರ್ನಿಗೆ ಹೆಚ್ಚು ಆದ್ಯತೆ ನೀಡಿದ್ದರು. ಇತ್ತೀಚೆಗೆ ಅಂದರೆ ಸಂಕ್ರಾಂತಿ ದಿನ ಸಂಗೀತಾ ವಿಡಿಯೋ ಮೂಲಕ ತಮ್ಮ ಅಭಿಮಾನಿಗಳಿಗೆ ಶುಭಾಶಯ ಕೂಡ ತಿಳಿಸಿದ್ದರು.

ಇದೀಗ ಸಂಗೀತ ಶೃಂಗೇರಿ ಹೊಸ ಫೋಟೊ ಶೂಟ್ ಮಾಡಿಸಿಕೊಂಡಿದ್ದು, ತಮ್ಮ ಸೋಶಿಯಲ್ ಮೀಡಿಯಾದಲ್ಲಿ ಶೇರ್ ಮಾಡಿದ್ದಾರೆ. ನೇರಳೆ ಬಣ್ಣದ ಸೀರೆಯುಟ್ಟಿರುವ ಸಂಗೀತಾ ಶೃಂಗೇರಿ ತುಂಬಾನೆ ಮುದ್ದಾಗಿ ಕಾಣಿಸುತ್ತಿದ್ದಾರೆ. ಸಂಗೀತಾ ಫೋಟೊ ನೋಡಿ ಅಭಿಮಾನಿಗಳು ಕಾಮೆಂಟ್ ಮಾಡುವ ಮೂಲಕ ಮೆಚ್ಚುಗೆ ಸೂಚಿಸಿದ್ದಾರೆ.

# 'ವಿದಾಮುಯಾರ್ಚಿ' ಟ್ರೇಲರ್ ರಿಲೀಸ್



ಅಜಿತ್ ಕುಮಾರ್ ನಟನೆಯ 'ವಿದಾಮುಯರ್ಚಿ' ಚಿತ್ರದ ಟ್ರೇಲರ್ ಬಿಡುಗಡೆಯಾಗಿದ್ದು, ಅಭಿಮಾನಿಗಳಲ್ಲಿ ಭಾರಿ ನಿರೀಕ್ಷೆ ಮೂಡಿಸಿದೆ. ಭರ್ಜರಿ ಆಕ್ಷನ್ ದೃಶ್ಯಗಳು ಮತ್ತು ಅಜಿತ್ ಅವರ ಎರಡು ವಿಭಿನ್ನ ಲುಕ್‌ಗಳು ಟ್ರೇಲರ್‌ನ ಹೈಲೈಟ್ ಆಗಿದೆ.

ಫೆ.6 ರಂದು ಬಿಡುಗಡೆಯಾಗಲಿರುವ ಈ ಚಿತ್ರದಲ್ಲಿ ಅರ್ಜುನ್ ಸರ್ಜಾ ಕೂಡ ಪ್ರಮುಖ ಪಾತ್ರದಲ್ಲಿದ್ದಾರೆ.

ಅಜಿತ್ ಕುಮಾರ್ ಅವರು 'ವಿದಾಮುಯರ್ಚಿ' ಸಿನಿಮಾದಲ್ಲಿ ಎರಡು ಶೇಡ್‌ನಲ್ಲಿ ಕಾಣಿಸಿಕೊಂಡಿದ್ದಾರೆ. ಯಂಗ್ ಲುಕ್‌ನಲ್ಲಿ ಕಾಣಿಸುವ ಅವರು ನಂತರ ಗಡ್ಡ ಮೀಸೆ ಬಿಟ್ಟು ಬೇರೆಯದೇ ಲುಕ್‌ನಲ್ಲಿ ಗಮನ ಸೆಳೆದಿದ್ದಾರೆ. ಅವರ ಮ್ಯಾನರಿಸಂ ಇಷ್ಟ ಆಗಿದೆ. ಕಥಾ ನಾಯಕ ಅಪಘಾತದಲ್ಲಿ ಎಲ್ಲವನ್ನೂ ಮರೆಯುತ್ತಾನೆ. ಆ ಬಳಿಕ ಏನಾಗುತ್ತದೆ ಎಂಬುದು ಚಿತ್ರದ ಕಥೆ ಎಂದು ಟ್ರೇಲರ್ ನೋಡಿದವರು ಅಭಿಪ್ರಾಯಪಟ್ಟಿದ್ದಾರೆ.

ಅರ್ಜುನ್ ಸರ್ಜಾ ಕೂಡ ಚಿತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಇದರಲ್ಲಿ ಅವರದ್ದು ವಿಲನ್ ಪಾತ್ರವೋ ಅಥವಾ ಒಳ್ಳೆಯ ವ್ಯಕ್ತಿಯ ಪಾತ್ರವೋ ಎಂದು ಗೊಂದಲ ಮೂಡಿಸುವ ರೀತಿಯಲ್ಲಿ ಟ್ರೇಲರ್ ಮೂಡಿ ಬಂದಿದೆ. ಈ ಚಿತ್ರಕ್ಕೆ ಸಿನಿಮಾದಲ್ಲೇ ಉತ್ತರ ಸಿಗಬೇಕಿದೆ.

'ವಿದಾಮುಯರ್ಚಿ' ಚಿತ್ರವನ್ನು ಬೇರೆ ಬೇರೆ ದೇಶಗಳಲ್ಲಿ ಶೂಟ್ ಮಾಡಲಾಗಿದೆ. ಅವರ ಸಿನಿಮಾಗಳಲ್ಲಿ ಆಕ್ಷನ್ ದೃಶ್ಯಗಳು ಭರ್ಜರಿ ಇರುತ್ತವೆ. ಅದು 'ವಿದಾಮುಯರ್ಚಿ' ಚಿತ್ರದಲ್ಲೂ ಮುಂದುವರಿದಿದೆ. ಈ ಟ್ರೇಲರ್ ನೋಡಿ ಫ್ಯಾನ್ಸ್ ಥ್ರಿಲ್ ಆಗಿದ್ದಾರೆ. ಈ ಸಿನಿಮಾ ಅಜಿತ್‌ಗೆ ದೊಡ್ಡ ಯಶಸ್ಸು ತಂದುಕೊಡುತ್ತದೆಯೇ ಎಂಬುದನ್ನು ಕಾದು ನೋಡಬೇಕಿದೆ. ಈ ಚಿತ್ರಕ್ಕೆ ತ್ರಿಷಾ ನಾಯಕಿ.

'ವಿದಾಮುಯರ್ಚಿ' ಚಿತ್ರವನ್ನು ಮಕಿಳ್ ತಿರುಮೇನಿ ಅವರು ನಿರ್ದೇಶನ ಮಾಡುತ್ತಿದ್ದಾರೆ. 'ತಾಡಮ್' ರೀತಿಯ ಸಿನಿಮಾಗಳನ್ನು ಅವರು ನಿರ್ದೇಶನ ಮಾಡಿದ್ದಾರೆ. ಅವರು ನಟನಾಗಿ, ಚಿತ್ರಕಥೆ ಬರಹಗಾರನಾಗಿಯೂ ಗುರುತಿಸಿಕೊಂಡಿದ್ದಾರೆ.

# ಶೆಟ್ಟಿ ತುಳು ಸಿನಿಮಾ ಮಾಡುವ ಆಸೆ




**ಮಂಗಳೂರು** : ನಾನು ಮುಂಬೈನಲ್ಲಿ ಬೆಳೆದರೂ, ಹುಟ್ಟೂರು ತುಳುನಾಡಿನ ಬಗ್ಗೆ ನನಗೆ ಅತೀವ ಹೆಮ್ಮೆ ಇದೆ. ಇಲ್ಲಿನ ಸಂಸ್ಕೃತಿ, ಜಾಗ ಅದ್ಭುತವಾಗಿದೆ. ಇದೀಗ ಜೈ ತುಳು ಸಿನಿಮಾದಲ್ಲಿ ಗೆಸ್ಟ್ ರೋಲ್ ಮಾಡುತ್ತಿದ್ದೇನೆ. ಮುಂದೊಂದು ದಿನ ಹೇರ ಫೇರಿಯಂತೆ ಪೂರ್ಣ ಪ್ರಮಾಣದಲ್ಲಿ ತುಳು ಕಾಮಿಡಿ ಸಿನಿಮಾ ಮಾಡುವ ಆಸೆಯಿದೆ ಎಂದು ಹೆಸರಾಂತ ಬಾಲಿವುಡ್ ನಟ ಸುನೀಲ್ ಶೆಟ್ಟಿ ಹೇಳಿದ್ದಾರೆ.

ಬಿಗ್‌ಬಾಸ್ ವಿನ್ನರ್, ನಟ ರೂಪೇಶ್ ಶೆಟ್ಟಿ ಅಭಿನಯ ಹಾಗೂ ನಿರ್ದೇಶನದ ಜೈ ತುಳು ಸಿನಿಮಾದಲ್ಲಿ ಅಭಿನಯಿಸಲು ಎರಡು ದಿನಗಳ ಹಿಂದೆ ಮಂಗಳೂರಿಗೆ ಆಗಮಿಸಿರುವ ಅವರು ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ತುಳು ಸಿನಿಮಾದಲ್ಲಿ ಇದೇ ಮೊದಲ ಬಾರಿಗೆ ಅಭಿನಯ ಮಾಡುತ್ತಿದ್ದೇನೆ. ತುಳು ಸಿನಿಮಾದವರು ತಾನು ತುಳು ಸಿನಿಮಾದಲ್ಲಿ ನಟಿಸಬೇಕೆಂದು ನಿರಂತರವಾಗಿ ಕೇಳುತ್ತಾ ಬಂದಿದ್ದರೂ ಸಮಯಾವಕಾಶ ಕೂಡಿ ಬಂದಿರಲಿಲ್ಲ. ಈಗ ಜೈ ಸಿನಿಮಾದಲ್ಲಿ ಅತಿಥಿ ಪಾತ್ರ ಮಾಡುತ್ತಿದ್ದೇನೆ. ಇದನ್ನೂ ಮೀರಿ ಪೂರ್ಣ ಪ್ರಮಾಣದಲ್ಲಿ ತುಳು ಕಾಮಿಡಿ ಸಿನಿಮಾ ಮಾಡುವ ಆಸೆಯಿದೆ. ತುಳು ಭಾಷೆಯಲ್ಲಿರುವ ಕಾಮಿಡಿ ಸೀನ್‌ಗಳನ್ನು ನೋಡಿ ಖುಷಿ ಪಟ್ಟಿದ್ದೇನೆ. ಅದನ್ನು ಗೆಳೆಯರ ಜೊತೆಗೆ ಶೇರ್ ಮಾಡಿದ್ದೇನೆ ಎಂದರು.

ಮಲಯಾಳಂ, ಬೆಂಗಾಲಿ, ಮರಾಠಿ ಭಾಷೆಗಳ ಸಿನಿಮಾಗಳು ಜಗತ್ತಿನ ಗಮನ ಸೆಳೆಯುತ್ತಿರುವುದು ಬಜೆಟ್‌ನಿಂದಲ್ಲ. ಇದು ಸಾಧ್ಯವಾದದ್ದು, ಸಿನಿಮಾದ ಕಂಟೆಂಟ್‌ನಿಂದ. ತುಳು ಭಾಷೆಗೂ ಇಂತಹ ಸಾಮರ್ಥ್ಯ ಇದೆ. ಆದರೆ ತುಳುನಾಡಿನ ಸಮಸ್ಯೆ ಎಂದರೆ, ಇಲ್ಲಿ ಕಲಿತು ಬೇರೆ ಕಡೆ ಕೆಲಸಕ್ಕೆ ತೆರಳುತ್ತಾರೆ. ಎಲ್ಲ ಕ್ಷೇತ್ರಗಳಲ್ಲೂ ಹೀಗೇ ಆಗಿದೆ. ಸಿನಿಮಾದ ಸಬ್ಜೆಕ್ಟ್ ಚೆನ್ನಾಗಿದ್ದರೆ ಗೆದ್ದೇ ಗೆಲ್ಲುತ್ತದೆ ಎಂದು ತಿಳಿಸಿದರು.

ನಾನು ತುಳು ಸಿನಿಮಾದಲ್ಲಿ ನಟಿಸುತ್ತಿರುವ ವಿಚಾರ ತಿಳಿದು ಕಳೆದ ಎರಡು ದಿನಗಳಿಂದ ಸಾಕಷ್ಟು ಗೆಳೆಯರು ಕರೆ ಮಾಡಿ ಅಚ್ಚರಿ ಪಡುತ್ತಿದ್ದಾರೆ. ತುಳು ಭಾಷೆಯ ಸಿನಿಮಾ ಬಗ್ಗೆ ವಿಚಾರಿಸುತ್ತಿದ್ದಾರೆ ಎಂದು ಹೇಳಿದರು.

ಕಾಂತಾರ ಸಿನಿಮಾದಲ್ಲಿ ನಮ್ಮ ಸಂಸ್ಕೃತಿಯ ಹಿರಿಮೆ ಇದೆ. ನಾನು ನಮ್ಮ ಸಂಸ್ಕೃತಿಯ ಬಗ್ಗೆ ಮುಂಬಯಿಯಲ್ಲಿ ಗೆಳೆಯರಲ್ಲಿ ಹೇಳುತ್ತಿದ್ದೆ. ಕಾಂತಾರ ಸಿನಿಮಾ ನೋಡಿ ನಾನು ಅಚ್ಚರಿಗೊಂಡೆ. ಇದು ನಮ್ಮ ಸಂಸ್ಕೃತಿ ಎಂಬುದನ್ನು ಹೇಳಿದೆ. ಜೈ ಸಿನಿಮಾದಲ್ಲಿ ಗೆಸ್ಟ್ ರೋಲ್ ಮಾಡಿದ್ದು, ಈ ಸಿನಿಮಾದಲ್ಲಿ ನಟಿಸಿದ್ದು ಖುಷಿ ತಂದಿದೆ. ಸಿನಿಮಾ ಪ್ರೊಮೋಷನ್‌ಗೂ ಬರುತ್ತೇನೆ ಎಂದು ತಿಳಿಸಿದರು.

ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. **RNI.KAR/KAN/2009/31934,** ದೂರವಾಣಿ: **9448074878**
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
**RNI.KAR/KAN/2009/31934.**VOLUME-16/ISSUE-**52** Email-mussanje2010@gmail.com, Phone: **9448074878**